ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 119

17-10-2025 ಶುಕ್ರವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 119

## ಮಾಜಿ ಸಚಿವ ನಾಗೇಂದ್ರ ಆಪ್ತರ ಮನೆ ಮೇಲೆ ಇಡಿ ದಾಳಿ

**ಬೆಂಗಳೂರು,ಅ.16:**ಬೇಲೆಕೇರಿ ಅದಿರು ನಾಪತ್ತೆ ಪ್ರಕರಣ ತನಿಖೆ ನಡೆಸುತ್ತಿರುವ ಜಾರಿ ನಿರ್ದೇಶನಾಲಯ ಅಕ್ರಮ ಆರೋಪಕ್ಕೆ ಸಂಬಂಧಿಸಿದಂತೆ ಉದ್ಯಮಿ ಹಾಗೂ ಮಾಜಿ ಸಚಿವ ಬಿ.ನಾಗೇಂದ್ರ ಅವರ ಆಪ್ತರ ಮನೆಮದ್ದು ಕಚೇರಿಗಳ ಮೇಲೆ ದಾಳಿ ನಡೆಸಿ ದಾಖಲೆ ಪತ್ರಗಳನ್ನು ಪರಿಶೀಲಿಸಿದೆ.

ನಾಗೇಂದ್ರ ಅವರ ಆಪ್ತ ಕುರುಬ ನಾಗರಾಜ್ ಅವರ ಬಳ್ಳಾರಿಯ ಮನೆ ಮೇಲೆ ಇಡಿ ದಾಳಿ ನಡೆಸಿದೆ. ನಗರದ ತಾಳೂರ ರಸ್ತೆಯಲ್ಲಿರುವ ಉದ್ಯಮಿ ಕುರುಬ ನಾಗರಾಜ ಎನ್ನುವರ ಮನೆ ಮೇಲೆ ಇಡಿ ಐದು ಜನ ಅಧಿಕಾರಿಗಳ ತಂಡ ದಿಂದ ದಾಳಿ ನಡೆಸಿದೆ.

ಸದ್ಯ ಕುರುಬ ನಾಗರಾಜ ಬೆಂಗಳೂರಿನಲ್ಲಿದ್ದು, ಮನೆಯಲ್ಲಿ ನಾಗರಾಜ ಅವರ ತಾಯಿ, ತಂಗಿ ಹಾಗೂ ತಂಗಿಯ ಪತಿಯನ್ನು ವಿಚಾರಣೆಗೆ ಒಳಪಡಿಸಿದ್ದಾರೆ. ಬೇಲೆಕೇರಿ ಅದಿರು ನಾಪತ್ತೆ ಪ್ರಕರಣದಲ್ಲಿ ಕುರುಬ ನಾಗರಾಜ್ ಆರೋಪಿಯಾಗಿದ್ದಾರೆ.

ಹೊಸಪೇಟೆಯಲ್ಲಿ ಹೋಟೇಲ್ ಉದ್ಯಮಿ ಶ್ರೀನಿವಾಸ್ ರಾವ್ (ಸೀನುಬಾಬು) ಅವರ ಮೇಲೆ ಇಡಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಶ್ರೀನಿವಾಸ್ ಅವರಿಗೆ ಸೇರಿದ ವಿವೇಕಾನಂದ ನಗರದ ಮನೆ ಮತ್ತು ಬಸವೇಶ್ವರ ಬಡಾವಣೆಯ ಮನೆಯ ಮೇಲೆ ಇಡಿ ಅಧಿಕಾರಿಗಳು ದಾಳಿ ನಡೆಸಿ ದಾಖಲೆಗಳನ್ನು ಪರಿಶೀಲನೆ ನಡೆಸುತ್ತಿದ್ದಾರೆ. ಗಣಿ ಗುತ್ತಿಗೆ ಹಾಗೂ ರಿಯಲ್ ಎಸ್ಟೇಟ್ ವ್ಯವಹಾರ ಮಾಡುತ್ತಿದ್ದ ಸೀನಬಾಬು ಅವರ ಮಾಲಿಕತ್ವದ ಪ್ರಿಯದರ್ಶಿನಿ ಹೋಟೆಲ್ ನ ಲೆಕ್ಕಪತ್ರ ವ್ಯವಹಾರದಲ್ಲಿ

## ನಾಲೆಗೆ ಹಾರಿ ದಂಪತಿ ಆತ್ಮಹತ್ಯೆ

**ತರೀಕೆರೆ:** ಚಿಕ್ಕಮಗಳೂರು ಜಿಲ್ಲೆಯ ತರೀಕೆರೆ ತಾಲೂಕಿನ ಲಕ್ಕವಳ್ಳಿ ಸಮೀಪ ಸಂಭವಿಸಿದ ದುರ್ಘಟನೆಯೊಂದು ಸ್ಥಳೀಯರನ್ನು ಬೆಚ್ಚಿಬೀಳುವಂತೆ ಮಾಡಿದೆ. ದೇವಾಲಯದ ದರ್ಶನಕ್ಕಾಗಿ ಬಂದಿದ್ದ ದಂಪತಿ ನಾಲೆಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿರುವ ಶಂಕೆ ವ್ಯಕ್ತವಾಗಿದೆ. ಭದ್ರಾವತಿ ತಾಲೂಕಿನ ಶಂಕರಪುರ ಗ್ರಾಮದ ವಿಠಲ್ (48) ಹಾಗೂ ಗಂಗಮ್ಮ (40) ಎಂಬ ದಂಪತಿ, ಲಕ್ಕವಳ್ಳಿ ಜಗದಾಂಬಾ ದೇವಾಲಯದ ದರ್ಶನಕ್ಕೆ ಬಂದಿದ್ದರು. ಆದರೆ ಬಳಿಕ ಇವರಿಬ್ಬರು ಹತ್ತಿರದಲ್ಲೇ ಹರಿಯುವ ನಾಲೆಗೆ ಹಾರಿ ಕಾಣೆಯಾಗಿದ್ದರು ಎಂಬ ಮಾಹಿತಿ ಲಭ್ಯವಾಗಿತ್ತು. ಘಟನೆಯ ನಂತರ ಗಂಗಮ್ಮ ಅವರ ಮೃತದೇಹ ಪತ್ತೆಯಾಗಿದ್ದು, ವಿಠಲ್ ಅವರ ಮೃತದೇಹಕ್ಕೆ ಶೋಧ ಕಾರ್ಯ ಇನ್ನೂ ಮುಂದುವರಿದಿದೆ. ಅಗ್ನಿಶಾಮಕ ಸಿಬ್ಬಂದಿ ಹಾಗೂ ಹುಡುಕಾಟ ನಡೆಸುತ್ತಿದ್ದಾರೆ. ಪ್ರಕರಣ ಕುರಿತು ಲಕ್ಕವಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆತ್ಮಹತ್ಯೆಗೆ ನಿಖರ ಕಾರಣ ತಿಳಿದುಬಂದಿಲ್ಲ.

## ಸಂಸಾರದಲ್ಲಿ ಕಲಹ : ಪತ್ನಿ ಭೀಕರ ಕೊಲೆ

**ಚಿಕ್ಕಮಗಳೂರು :** ಸಂಸಾರದಲ್ಲಿ ಕಲಹ ಹಿನ್ನೆಲೆಯಲ್ಲಿ ಪತ್ನಿಯನ್ನು ಭೀಕರವಾಗಿ ಕೊಚ್ಚಿ ಕೊಲೆ ಮಾಡಲಾಗಿದೆ

ತನು (25) ಗಂಡನಿಂದ ಭೀಕರವಾಗಿ ಕೊಲೆಯಾದ ಮಹಿಳೆ.ಅಜ್ಜಂಪುರ ತಾಲೂಕಿನ ಚಿಕ್ಕನಾವಂಗಲ ಗ್ರಾಮದಲ್ಲಿ ಘಟನೆ ನಡೆದಿದೆ. ಪತಿ ರಮೇಶ್ ತನ್ನ ಪತ್ನಿಯನ್ನು ಕ್ರೂರವಾಗಿ ಕೊಚ್ಚಿ ಕೊಲೆ ಮಾಡಿದ್ದಾನೆ.ಗಂಡನ ಜೊತೆ ಜಗಳವಾಗಿ 2 ವರ್ಷದಿಂದ ತನು ಪ್ರತ್ಯೇಕವಾಗಿ ವಾಸವಾಗಿದ್ದಳು. 7 ವರ್ಷದ ಹಿಂದೆ ಮದುವೆಯಾಗಿದ್ದು, 6 ವರ್ಷದ ಗಂಡು ಮಗುವಿದೆ . ನಿನ್ನೆ ರಾತ್ರಿ ಕುಡಿದು ಬಂದು ಪತ್ನಿಯನ್ನು ಬರ್ಬರವಾಗಿ ಕೊಚ್ಚಿ ಕೊಲೆ ಮಾಡಿದ್ದಾನೆ. ಅಜ್ಜಂಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮುಂದಿನ 7 ದಿನ ಕರ್ನಾಟಕದಲ್ಲಿ ಭಾರಿ ಮಳೆ ಸಾಧ್ಯತೆ: ಹವಾಮಾನ ಇಲಾಖೆ

**ಬೆಂಗಳೂರು:** ಮುಂದಿನ 7 ದಿನಗಳ ಕಾಲ ಕರ್ನಾಟಕ ರಾಜ್ಯಾದ್ಯಂತ ಭಾರಿ ಮಳೆಯಾಗಲಿದೆ ಎಂದು ಕೇಂದ್ರ ಹವಾಮಾನ ಇಲಾಖೆ ಗುರುವಾರ ಮಾಹಿತಿ ನೀಡಿದೆ. ಈಗಾಗಲೇ ರಾಜ್ಯಾದ್ಯಂತ ಮಳೆ ಅಬ್ಬರ ಮುಂದುವರೆದಿದ್ದು, ಮುಂದಿನ 7 ದಿನಗಳ ಕರ್ನಾಟಕ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಭಾರಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಗುರುವಾರ ಮಾಹಿತಿ ನೀಡಿದೆ.

ಅಕ್ಟೋಬರ್ 16 ರಿಂದ 22 ರವರೆಗೆ ಕರ್ನಾಟಕದಾದ್ಯಂತ ಮಳೆ ಮುಂದುವರಿಯಲಿದೆ.

# ಚಿಗಟೇರಿ ಆಸ್ಪತ್ರೆಗೆ 2.5ಕೋಟಿ ಮೊತ್ತದ ಅತ್ಯಾಧುನಿಕ ವೈದ್ಯಕೀಯ ಉಪಕರಣಗಳ ಹಸ್ತಾಂತರ : ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್

**ದಾವಣಗೆರೆ :** ಜಿಲ್ಲೆಯ ಚಿಗಟೇರಿ ಆಸ್ಪತ್ರೆಗೆ ಆರ್‌ಬಿಐ ಅಂಗ ಸಂಸ್ಥೆಯಾದ ಮೈಸೂರಿನ ಬಿಎನ್‌ಪಿಎಂಐ (ಬ್ಯಾಂಕ್ ನೋಟ್ ಪೇಪರ್ ಮಿಲ್) ಸಿಎಸ್‌ಆರ್ ನಿಧಿಯಡಿ 2.5 ಕೋಟಿ ಮೊತ್ತದ ಅತ್ಯಾಧುನಿಕ ವಿವಿಧ ವೈದ್ಯಕೀಯ ಉಪಕರಣಗಳ ಹಸ್ತಾಂತರಿಸಲಾಗಿದ್ದು, ಇನ್ನೂ ಅಗತ್ಯ ಉಪಕರಣಗಳ ಒದಗಿಸಲು ಕ್ರಮವಹಿಸಲಾಗುವುದು ಎಂದು ಸಂಸದರಾದ ಡಾ.ಪ್ರಬಾ ಮಲ್ಲಿಕಾರ್ಜುನ್ ಹೇಳಿದರು.

ನಗರದ ಜಿಲ್ಲಾಸ್ಪತ್ರೆಯಲ್ಲಿ ಗುರುವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಚಿಗಟೇರಿ ಜಿಲ್ಲಾಸ್ಪತ್ರೆ ಹಾಗೂ ಬಿಎನ್‌ಪಿಎಂಐ (ಬ್ಯಾಂಕ್ ನೋಟ್ ಪೇಪರ್ ಮಿಲ್) ಸಹಯೋಗದಲ್ಲಿ ಚಗಟೇರಿ ಜಿಲ್ಲಾಸ್ಪತ್ರೆಯ ಡಿಐಇಸಿ ಸಭಾಂಗಣದಲ್ಲಿ ಸಿಎಸ್‌ಆರ್ ನಿಧಿಯಡಿ ವೈದ್ಯಕೀಯ ಉಪಕರಣಗಳ ಹಸ್ತಾಂತರ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಈಜಿಲ್ಲಾಸ್ಪತ್ರೆಯಲ್ಲಿ ಪ್ರತಿ ತಿಂಗಳು ಸರಿ ಸುಮಾರು 45 ಸಾವಿರ ರೋಗಿಗಳಿಗೆ ಚಿಕಿತ್ಸೆ ನೀಡಲಾಗುತ್ತದೆ. ಮಧ್ಯ ಕರ್ನಾಟಕ ಹೃದಯ ಭಾಗದಲ್ಲಿರುವ ಈ ಜಿಲ್ಲೆಗೆ ನೆರೆ ಜಿಲ್ಲೆಗಳಿಂದ ವೈದ್ಯಕೀಯ ಚಿಕಿತ್ಸೆ ಪಡೆಯಲು ಬರುತ್ತಾರೆ. ಇವರಿಗೆ ವೆಂಟಿಲೇಟರ್ಸ್, ಫಿಸಿಯೋಥೆರಫಿ, ಲ್ಯಾಪ್ರೋಸ್ಕೋಪಿ ಸೇರಿದಂತೆ ಮುಂತಾದ ಉಪಕರಣಗಳ ಕೊರತೆ ಇತ್ತು. ಇದರಿಂದ ಖಾಸಗಿ ಆಸ್ಪತ್ರೆಗಳಿಗೆ ಅಥವಾ ಬೆಂಗಳೂರಿನ ಪ್ರತಿಷ್ಠಿತ ಆಸ್ಪತ್ರೆಗಳಿಗೆ ಕಳುಹಿಸಬೇಕಾದ ಅನಿವಾರ್ಯತೆ ದಟ್ಟವಾಗಿತ್ತು. ಆದರೆ ಇಂದು ಸಿಎಸ್‌ಆರ್ ನಿಧಿಯಡಿ ನೀಡಲಾದ ಉಪಕರಣ ಸರಿಯಾದ ರೀತಿಯಲ್ಲಿ ಬಳಸಿಕೊಂಡು ಸಾರ್ವಜನಿಕರಿಗೆ ಉಪಯುಕ್ತವಾಗುವಂತೆ ಗುಣಮಟ್ಟದ ಚಿಕಿತ್ಸೆ ನೀಡಬೇಕು ಎಂದು ಸೂಚಿಸಿದರು.



ಜಿಲ್ಲಾಸ್ಪತ್ರೆಗೆ ಸಾರ್ವಜನಿಕರು ವೈದ್ಯಕೀಯ ಚಿಕಿತ್ಸೆಗೆ ಬಂದಾಗ ಅವರ ಸಮಸ್ಯೆಗಳನ್ನು ಅರಿತು ಮಾನವೀಯತೆಯಿಂದ ಸ್ಪಂದಿಸುವುದರ ಜೊತೆಗೆ ಉತ್ತಮ ಸೇವೆ ನೀಡಬೇಕು. ಇರುವ ಅನುದಾನ ಮತ್ತು ಔಷಧ ಲಭ್ಯತೆಗೆ ಅನುಗುಣವಾಗಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಕಾರ್ಯನಿರ್ವಹಿಸಬೇಕು. ನೂತನ ಆಸ್ಪತ್ರೆಗೆ ರೂ.267 ಕೋಟಿ ವೆಚ್ಚದಲ್ಲಿ ನೂತನ ಸುಸಜ್ಜಿತವಾದ ಕಟ್ಟಡ ನಿರ್ಮಾಣವಾಗುತ್ತಿದೆ. ಹಾಗೆಯೇ ಜಿಲ್ಲಾಸ್ಪತ್ರೆ ಹಳೇ ಕಟ್ಟಡ ದುರಸ್ಥಿಗೆ ರೂ.43 ಕೋಟಿ ಅನುದಾನ ಒದಗಿಸಿದ್ದು, ಸರಿಯಾದ ರೀತಿಯಲ್ಲಿ ಬಳಕೆ ಮಾಡಿಕೊಳ್ಳಲು ತಿಳಿಸಿದ ಅವರು, ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ತಾಲ್ಲೂಕು ಆರೋಗ್ಯ ಕೇಂದ್ರಗಳಲ್ಲಿ ಸಿಬ್ಬಂದಿ ಕೊರತೆ ಕಾಣುತ್ತಿದ್ದು, ಅಗತ್ಯ ಸಿಬ್ಬಂದಿ ನಿಯೋಜಿಸಲು ಸೂಚನೆ ನೀಡಿದರು. ಅಗತ್ಯವಿದ್ದಲ್ಲಿ ಹೊರಗುತ್ತಿಗೆ ಆಧಾರದಲ್ಲಿ ನೇಮಿಸಕೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶಸಿದರು.

**ಅಂಗಾಂಗ ದಾನ ಕುರಿತು ಜಾಗೃತಿ :**

ಅಂಗಾಂಗ ಮತ್ತು ದೇಹ ದಾನದಲ್ಲಿ ರಾಜ್ಯವು ದೇಶದಲ್ಲಿಯೇ ಎರಡನೇ ಸ್ಥಾನದಲ್ಲಿದೆ. ಜಿಲ್ಲೆಯಲ್ಲಿ ಅಂಗಾಂಗ ದಾನಗಳ ಕುರಿತು ಹಲವರಿಗೆ ಮಾಹಿತಿಯ ಕೊರತ ಇದೆ. ಹಾಗಾಗಿ ಚಿಗಟೇರಿ ಆಸ್ಪತ್ರೆಯಲ್ಲಿ ಅಂಗಾಂಗ ದಾನದ ಕುರಿತು ಕಾರ್ಯಗಾರ ಆಯೋಜಿಸಬೇಕು. ಹಲವರು ವಿವಿಧ ಅಂಗಾಂಗ ವಿಕಲತೆಯಿಂದ ಬಳಲುತ್ತಿದ್ದಾರೆ. ಆದರೆ ದಾನಿಗಳ ಕೊರತೆ ಇದೆ. ಇದರಿಂದ ಅಂಗಾಂಗ ಬದಲಾವಣೆಗೆ ಅಥವಾ ಜೋಡಣೆ ಸಾಧ್ಯವಾಗುತ್ತಿಲ್ಲ. ಖಾಸಗಿ ಆಸ್ಪತ್ರೆಗಳಲ್ಲಿ ಮಾಡಲು ಸಾಧ್ಯವಾದರೂ ಸುಮಾರು ರೂ.20 ರಿಂದ 25 ಲಕ್ಷ ವೆಚ್ಚವಾಗುತ್ತದೆ. ಆದರೆ ಈ ದುಬಾರಿ ವೆಚ್ಚವನ್ನು ಸಾರ್ವಜನಿಕರು, ಬಡವರು ಭರಿಸಲು ಸಾಧ್ಯವಿಲ್ಲ. ಆದುದರಿಂದ ಜಿಲ್ಲೆಯಲ್ಲಿ ಅಂಗದಾನ, ದೇಹದಾನ ಕುರಿತು ಅರಿವು ಕಾರ್ಯಕ್ರಮ ಆಯೋಜಿಸಬೇಕಿದೆ. ಇದರಿಂದ ಸಾರ್ವಜನಿಕರಲ್ಲಿ ಅಂಗಾಂಗ ಮತ್ತು ದೇಹ ದಾನದ ಮಹತ್ವ ತಿಳಿಯಲಿದೆ. ಇದು ಕೇವಲ ಒಂದು ದಿನಕ್ಕೆ ಸೀಮಿತವಾಗದೇ ವರ್ಷಪೂರ್ತಿ ನಡೆಸಲು ಸೂಚಿಸಿದರು. ಈ ಮೂಲಕ ಒಬ್ಬ ವ್ಯಕ್ತಿ ದೇಹ ಅಥವಾ ಅಂಗಾಂಗ ದಾನ ಮಾಡುವುದರಿಂದ 08 ಜನರನ್ನು ಅಂಗವಿಕಲತೆಯಿಂದ ರಕ್ಷಿಸಿ, ಉತ್ತಮ ಜೀವನ ನೀಡಬಹುದು ಎಂದರು. ಬ್ಯಾಂಕ್ ನೋಟ್ ಪೇಪರ್ ಮಿಲ್ ಸಂಸ್ಥೆಯ ಮ್ಯಾನೇಜಿಂಗ್ ಡೈರೆಕ್ಟರ್ ಡಾ.ಎಸ್.ತಾಳಕೇರಪ್ಪ ಮಾತನಾಡಿ, ನಮ್ಮ ಬಿಎನ್‌ಪಿಎಂಐ ಸಂಸ್ಥೆಯಿಂದ ಇಷ್ಟು ಮೊತ್ತದ ಉಪಕರಣ ನೀಡಿರುವುದು ಇದೇ ಮೊದಲು. ಈಜಿಲ್ಲೆಗೆ ನೆರೆ ಜಿಲ್ಲೆಯವರಿಗೂ ಸಮೀದಲ್ಲಿರುವ ಕಾರಣ ವೈದ್ಯಕೀಯ ಚಿಕಿತ್ಸೆಗೆ ಅತೀ ಹೆಚ್ಚಿನ ಸಂಖ್ಯೆಯಲ್ಲಿ ಬರುವುದನ್ನು ಅರಿತು ಜಿಲ್ಲಾಸ್ಪತ್ರೆಗೆ ರೂ.2.5 ಕೋಟಿ ಮೊತ್ತದಲ್ಲಿ ಫಿಸಿಯೋಥರಫಿ ಘಟಕ –01, ವೆಂಟಿಲೇಟರ್ ಒಳಗೊಂಡ ಅನಸ್ಥೇಸಿಯಾ ವರ್ಕ್ ಸ್ಟೇಷನ್–02, ಮೊಬೈಲ್ ಓಟಿ ಲೈಟ್–05, ಪೇಡಿಯಾಟ್ರಿಕ್ ವೆಂಟಿಲೇಟರ್ –02 ಸೇರಿದಂತೆ ಒಟ್ಟು 19 ಅತ್ಯಾಧುನಿಕ ವೈದ್ಯಕೀಯ ಉಪಕರಣ ನೀಡಲಾಗಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಚಿಗಟೇರಿ ಜಿಲ್ಲಾಸ್ಪತ್ರೆ ಅಧಿಕ್ಷಕ ಡಾ.ನಾಗೇಂದ್ರಪ್ಪ ಪ್ರಾಸ್ತಾವಿಕವಾಗಿ ಮಾತನಾಡಿದರು. ಜಿಲ್ಲಾ ಪಂಚಾಯತ್ ಸಿಇಓ ಗಿತ್ತೆ ಮಾಧವ ವಿಠಲ ರಾವ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುರಮಾರ್, ಡಿಹೆಚ್‌ಓ ಡಾ.ಷಣ್ಮುಖಪ್ಪ, ಚಿಗಟೇರಿ ಜಿಲ್ಲಾಸ್ಪತ್ರೆಯ ಸಿಬ್ಬಂದಿ, ನರ್ಸಿಂಗ್ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ನನಗೆ ಹಸಿವಿನ ಬೆಲೆ ಗೊತ್ತು ಹೀಗಾಗಿ ಅನ್ನಭಾಗ್ಯ ಯೋಜನೆ ಜಾರಿಗೊಳಿಸಿದ್ದೇನೆ : ಸಿದ್ದರಾಮಯ್ಯ

**ಬೆಂಗಳೂರು ಅ 16:** ಹಸಿವಿನ ಸಂಕಟ, ಅನ್ನದ ಮೌಲ್ಯ ನನಗೆ ಗೊತ್ತು: ಅದಕ್ಕೇ ಅನ್ನಭಾಗ್ಯ ಜಾರಿಗೆ ತಂದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ

ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಆಯೋಜಿಸಿದ್ದ ವಿಶ್ವ ಆಹಾರ ದಿನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕವಿ ಬೇಂದ್ರೆಯವರು ರೈತರನ್ನು ಅನ್ನಬ್ರಹ್ಮ ಎಂದು ಕರೆದಿದ್ದಾರೆ. ಆದ್ದ-ರಿಂದ ಅನ್ನ ವ್ಯರ್ಥ ಮಾಡುವುದು, ಬಿಸಾಡುವುದು ಅನ್ನಬ್ರಹ್ಮನಿಗೆ ಮಾಡುವ ಅವಮಾನ ಎಂದರು.

ನಾವು ಒಂದು ಕಾಲದಲ್ಲಿ ಅನ್ನಕ್ಕಾಗಿ ಅಮೆರಿಕದ ಮೇಲೆ ಅವಲಂಭಿತರಾಗಿದ್ದೆವು. ಈಗ ವಿದೇಶಗಳಿಗೆ ರಫ್ತು ಮಾಡುವ ಮಟ್ಟಕ್ಕೆ ಪ್ರಗತಿ ಸಾಧಿಸಿದ್ದೇವೆ. ಇದರ ಜೊತೆಗೆ ಊಟ ವ್ಯರ್ಥ ಮಾಡುವ




ಪ್ರಮಾಣವೂ ಹೆಚ್ಚಾಗುತ್ತಿರುವುದು ಬೇಸರದ ಸಂಗತಿ ಎಂದು ಹೇಳಿದರು

ಬೆಂಗಳೂರು ಒಂದರಲ್ಲೇ ಪ್ರತೀ ವರ್ಷ 943 ಟನ್ ಆಹಾರ ವೇಸ್ಟ್ ಆಗುತ್ತಿದೆ. ಹೆಚ್ಚೂಕಡಿಮೆ 360 ಕೋಟಿ ಮೌಲ್ಯದ ಆಹಾರ ವೇಸ್ಟ್ ಮಾಡುತ್ತಿದ್ದೇವೆ ಎಂದು ಜಿಕೆವಿಕೆ ಅಧ್ಯಯನವನ್ನು ಉಲ್ಲೇಖಿಸಿದರು.

ಗೊತ್ತಿದ್ದೂ ಗೊತ್ತಿದ್ದೂ ಆಹಾರ ವೇಸ್ಟ್ ಮಾಡುವುದು ಅನ್ನಕ್ಕೆ ತೋರಿಸುವ ಅಹಂಕಾರ ಎಂದು ಅಸಮಾಧಾನ ವ್ಯಕ್ತಪಡಿಸಿದರು

ಅನ್ನ ವೇಸ್ಟ್ ಮಾಡುವುದು ಪಾಪದ ಕೆಲಸ ಎಂದು ಮಹಾತ್ಮ ಗಾಂಧಿ ಹೇಳಿದ್ದಾರೆ ಹಾಗೆ ಯಾರೂ ಹಸಿವಿನಿಂದ ಮಲಗಬಾರದು ಎನ್ನುವುದು ಕಾಂಗ್ರೆಸ್ ಬದ್ದತೆ. ಹೀಗಾಗಿ ಬಡವರ ಪರವಾದ ಕಾರ್ಯಕ್ರಮಗಳನ್ನು ಜಾರಿಗೆ ತಂದಿದ್ದು ಕಾಂಗ್ರೆಸ್. ಆಹಾರ ಭದ್ರತಾ ಕಾಯ್ದೆಯನ್ನು ಜಾರಿಗೆ ತಂದಿದ್ದು ಕಾಂಗ್ರೆಸ್ ಪ್ರಧಾನಿ ಮನ ಮೋಹನ್ ಸಿಂಗ್. ಆಹಾರ ಭದ್ರತೆ ಕಾಯ್ದೆಯನ್ನು ಬಿಜೆಪಿ ತೀವ್ರವಾಗಿ ವಿರೋಧಿಸಿತ್ತು. ಬಡವರ ವಿರೋಧಿ ನೀತಿ ಬಿಜೆಪಿಯ ಸಿದ್ಧಾಂತ. ಇದನ್ನು ಅರ್ಥ ಮಾಡಿಕೊಳ್ಳಬೇಕು. ಆ ಕಡೆ ಬಿಜೆಪಿಗೂ ಚಪ್ಪಾಳೆ ತಟ್ಟೋದು, ಈ ಕಡೆ ಬಡವರ ಪರ ಕಾರ್ಯಕ್ರಮ ಕೊಟ್ಟ ಕಾಂಗ್ರೆಸ್ಸಿಗೂ ಚಪ್ಪಾಳೆ ತಟ್ಟೋದು ಮಾಡಬೇಡಿ. ಅನ್ನದ ಪರವಾಗಿ ಇರುವ ಕಾಂಗ್ರೆಸ್ ಬದ್ಧತೆ ಅರ್ಥ ಮಾಡಿಕೊಳ್ಳಿ ಎಂದು ಕರೆ ನೀಡಿ-ದರು.

**ಕಾಳ ಸಂತೆ ಮಾರಾಟ: ಕಠಿಣ ಕ್ರಮ**

ಅನ್ನಭಾಗ್ಯದ ಅಕ್ಕಿಯನ್ನು ಸಂಗ್ರಹಿಸಿ ಕಾಳ ಸಂತೆಯಲ್ಲಿ ಮಾರುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಕಾಳ ಸಂತೆ ಮಾರಾಟ ತಪ್ಪಿಸಲು 5 ಕೆಜಿ ಅಕ್ಕಿ ಕೊಟ್ಟು ಉಳಿದ ಐದು ಕೆಜಿ ಕಾಳು, ಬೇಳೆ ವಿತರಿಸಲು ತೀರ್ಮಾನಿಸಿದ್ದೇವೆ ಎಂದರು.

ಆಹಾರದ ಬಗ್ಗೆ ಜಾಗ್ರತೆ, ಸಣ್ಣ ರೈತರ ರಕ್ಷಣೆ ಮಾಡುವುದು ನಮ್ಮ , ನಿಮ್ಮ ಮತ್ತು ನಾಗರಿಕ ಸಮಾಜದ ಜವಾಬ್ದಾರಿ ಎಂದು ತಿಳಿಸಿದರು.

# ಬಿಪಿಎಲ್ ರದ್ದು ಪುನರ್ ಪರಿಶೀಲಿಸುವಂತೆ ಸ್ಲಂ ಜನಾಂದೋಲನ ಕರ್ನಾಟಕದಿಂದ ಪ್ರತಿಭಟನೆ

**ದಾವಣಗೆರೆ.ಅ.16:** ರಾಜ್ಯಾದ್ಯಂತ ಬಡವರ, ಕೂಲಿ ಕಾರ್ಮಿಕರ ಹಾಗೂ ಸ್ಲಂಜನರ ಬಿಪಿಎಲ್ ಕಾರ್ಡ್ ರದ್ದುಗೊಳಿಸಿರುವ ರಾಜ್ಯ ಸರ್ಕಾರದ ಜನವಿರೋಧಿ ಕ್ರಮವನ್ನು ಖಂಡಿಸಿ ನಗರದಲ್ಲಿ ಸ್ಲಂ ಜನಾಂದೋಲನ ಕರ್ನಾಟಕ, ಸಾವಿತ್ರಿ ಬಾಪುಲೆ ಮಹಿಳಾ ಸಂಘಟನೆ ಜಿಲ್ಲಾ ಸಮಿತಿ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಸಮಿತಿಯ ಪದಾಧಿಕಾರಿಗಳು ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ, ರದ್ದುಗೊಳಿಸಿರುವ ಬಿಪಿಎಲ್ ಕಾರ್ಡ್‌ಗಳನ್ನು ಮರಳಿ ನೀಡುವಂತೆ ಒತ್ತಾಯಿಸಿ ಆಹಾರ ಇಲಾಖೆಯ ಅಧಿಕಾರಿಗಳ ಮುಖಾಂತರ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಈ ವೇಳೆ ಸಮಿತಿಯ ಗೌರವಾಧ್ಯಕ್ಷ ಎಸ್.ಎಲ್.ಆನಂದಪ್ಪ ಮಾತನಾಡಿ, ರಾಜ್ಯ ಸರ್ಕಾರದಿಂದ ರಾಜ್ಯಾದ್ಯಂತ ಸುಮಾರು 8 ಲಕ್ಷಕ್ಕೂ ಅಧಿಕ ಬಡವರ ಬಿಪಿಎಲ್ ಪಡಿತರ ಕಾರ್ಡುಗಳನ್ನು ಏಕಾಏಕಿಯಾಗಿ ರದ್ದುಗೊಳಿಸಿದ್ದರಿಂದ ಲಕ್ಷಾಂತರ ಬಡ ಕುಟುಂಬಗಳು ಬೀದಿಗೆ ಬಂದಿವೆ ಎಂದರು.

ರಾಜ್ಯ ಸರ್ಕಾರ ಚುನಾವಣೆಯ ಸಂದರ್ಭದಲ್ಲಿ ತನ್ನ ಪ್ರಣಾಳಿಕೆಯಲ್ಲಿ ರಾಜ್ಯದಲ್ಲಿ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರುವ ಮೂಲಕ ಬಡ ಕುಟುಂಬಗಳಿಗೆ, ಮಧ್ಯಮ ವರ್ಗದ ಕುಟುಂಬಗಳಿಗೆ ಸಾಮಾಜಿಕವಾಗಿ, ಆರ್ಥಿಕವಾಗಿ ಹಾಗೂ ಶೈಕ್ಷಣಿಕವಾಗಿ ಅನುಕೂಲ ಮಾಡಲಾಗುವುದೆಂದು ಭರವಸೆಯನ್ನು ನೀಡಲಾಗಿತ್ತು. ಅದರಂತೆ 2023ರಲ್ಲಿ ಅಧಿಕಾರಕ್ಕೆ ಬಂದ ಸಿದ್ದರಾಮಯ್ಯನವರ ನೇತೃತ್ವದ ರಾಜ್ಯ ಸರ್ಕಾರ ಪಂಚ ಗ್ಯಾರಂಟಿಗಳಾದ ಗೃಹಲಕ್ಷ್ಮಿ, ಗೃಹಜ್ಯೋತಿ, ಶಕ್ತಿ ಯೋಜನೆ, ಅನ್ನಭಾಗ್ಯ ಯೋಜನೆ ಹಾಗೂ ಯುವನಿಧಿ ಯೋಜನೆಯನ್ನು ಜಾರಿಗೆ ತರಲಾಗಿದೆ ಎಂದು ಹೇಳಿದರು.

ರಾಜ್ಯದಲ್ಲಿ ಬಡ ಕುಟುಂಬದ ಯಾರೂ ಉಪವಾಸ ಇರಬಾರದೆಂದು ಹಸಿವು ಮುಕ್ತ ಘೋಷಣೆಯೊಂದಿಗೆ ಅನ್ನಭಾಗ್ಯ ಯೋಜನೆಯನ್ನು ಜಾರಿಗೆ ತಂದು ರಾಜ್ಯದ ಲಕ್ಷಾಂತರ ಕುಟುಂಬಗಳಿಗೆ ಅಂತ್ಯೋದಯ ಹಾಗೂ ಬಿಪಿಎಲ್ ಕುಟುಂಬಗಳಿಗೆ ಉಚಿತವಾಗಿ ಆಹಾರ ಧಾನ್ಯಗಳನ್ನು ವಿತರಣೆ ಮಾಡಲಾಗಿದೆ. ಆದರೆ, ಈಗ ರಾಜ್ಯ ಸರ್ಕಾರ 8 ಲಕ್ಷಕ್ಕೂ ಅಧಿಕ ಬಡವರ ಬಿಪಿಎಲ್ ಕಾರ್ಡುಗಳನ್ನು ರದ್ದು ಮಾಡಿದೆ. ಇದರ ಪರಿಣಾಮವಾಗಿ ರಾಜ್ಯದ ಲಕ್ಷಾಂತರ ಕೂಲಿ ಕಾರ್ಮಿಕರು ಹಾಗೂ ಸ್ಲಂ ಪ್ರದೇಶದ ಕುಟುಂಬಗಳಿಗೆ ಆಹಾರ ಸಿಗದೆ ಬೀದಿಗೆ ಬಂದಿದ್ದಾರೆ ಎಂದು ಕಿಡಿಕಾರಿದರು.

ಕೇಂದ್ರ ಸರ್ಕಾರದ ಸೂಚನೆಯಂತೆ ಅನರ್ಹ ಪಡಿತರ ಚೀಟಿಗಳನ್ನು ಮಾತ್ರ ರದ್ದು ಗೊಳಿಸಲಾಗುತ್ತದೆ ಎಂದು ಹೇಳಿ ಈಗ 8 ಲಕ್ಷ ಕಾರ್ಡ್‌ಗಳನ್ನು ರದ್ದು ಮಾಡಿರುವುದನ್ನು ನಾವು ಖಂಡಿಸುತ್ತೇವೆ. ರಾಜ್ಯ ಸರ್ಕಾರ ಲಕ್ಷಾಂತರ ಕುಟುಂಬಗಳನ್ನು ಪಂಚ ಗ್ಯಾರಂಟಿ ಯೋಜನೆಯಿಂದ ವಂಚಿಸುವ ಹುನ್ನಾರ ಮಾಡುತ್ತಿದೆ ಎಂದು ದೂರಿದರು.

ರಾಜ್ಯ ಸರ್ಕಾರದಿಂದ ಬಡವರಿಗೆ ಒಂದು ಕೈಯಿಂದ ಕೊಟ್ಟು ಮತ್ತೊಂದು ಕೈಯಿಂದ ಕಿತ್ತುಕೊಳ್ಳುವ ಕೆಲಸ ನಡೆಯುತ್ತಿದೆ. ಆದ್ದ-ರಿಂದ ಕೂಡಲೇ ರದ್ದಾಗಿರುವ ಬಿಪಿಎಲ್ ಕಾರ್ಡುಗಳನ್ನು ಪುನರ್ ಪರಿಶೀಲಿಸಿ ವಾಪಾಸ್ಸು ನೀಡಬೇಕು ಇಲ್ಲವಾದರೆ ಮುಂಬರುವ ಚಳಿಗಾಲದ ಅಧಿವೇಶನದಲ್ಲಿ ಬೆಳಗಾವಿ ಚಲೋ ಕಾರ್ಯಕ್ರಮ ಹಮ್ಮಿಕೊಂಡು ಉಗ್ರ ಹೋರಾಟ ಮಾಡಲಾಗುವುದು ಎಂದು ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.

ಈ ವೇಳೆ ಸಮಿತಿಯ ಸುಹಿಲ್ ಭಾಷ, ಹೆಚ್.ಗಣೇಶ್, ಸಾದಿಕ್, ಸುನೇರಾ ಬಾನು, ಬಿಬಿಜಾನ್, ಸೀಮಾ, ಶಂಕ್ರಮ್ಮ, ಕೌಸರ್, ರಜೀಯಾ ಬಾನು ಇತರರು ಇದ್ದರು.

# ರಾಜ್ಯದಲ್ಲಿ ದಲಿತ ಸಿಎಂ ವಿಚಾರ ಹೈಕಮಾಂಡ್‌ಗೆ ಬಿಟ್ಟಿದ್ದು: ಶಾಸಕ ಬಸವಂತಪ್ಪ

**ದಾವಣಗೆರೆ.ಅ.16:** ಕಾಂಗ್ರೆಸ್‌ನಲ್ಲಿ ನವೆಂಬರ್ ಕ್ರಾಂತಿ ಸೇರಿದಂತೆ ಯಾವುದೇ ಕ್ರಾಂತಿ ಇಲ್ಲ. ನಮ್ಮದು ಏನಿದ್ದರೂ ಹೈಕಮಾಂಡ್ ಕ್ರಾಂತಿ ಎಂದು ಶಾಸಕ ಕೆ.ಎಸ್.ಬಸವಂತಪ್ಪ ಹೇಳಿದರು.



ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದಲಿತ ಸಿಎಂ ವಿಚಾರ ಹೈಕಮಾಂಡ್‌ಗೆ ಬಿಟ್ಟಿದ್ದು, ಅದಕ್ಕೆ ಅದರದೇ ಆದ ವೇದಿಕೆ ಇದ್ದು, ರಾಜ್ಯಕ್ಕೆ ಯಾರನ್ನು ಸಿಎಂ ಮಾಡಬೇಕು, ಮಾಡಬಾರದು ಎಂಬುದು ಹೈಕಮಾಂಡ್ ತೀರ್ಮಾನ ಮಾಡಲಿದೆ. ಹೈಕಮಾಂಡ್ ತೀರ್ಮಾನಕ್ಕೆ ನಾನು ಬದ್ದನಿದ್ದೇನೆ ಎಂದರು.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಹಿರಿಯರು. ಅವರು ರಾಜ್ಯ ರಾಜಕಾರಣಕ್ಕೆ ಬಂದರೆ ಅದನ್ನು ಸ್ವಾಗತಿಸುತ್ತೇನೆ ಎಂದ ಅವರು, ರಾಜ್ಯ ರಾಜಕಾರಣಕ್ಕೆ ಬರುವುದರ ಬಗ್ಗೆ ಹೈಕಮಾಂಡ್ ತೀರ್ಮಾನ ಕೈಗೊಳ್ಳಲಿದೆ ಎಂದು ಹೇಳಿದರು.

# ಅ.19 ರಾಷ್ಟ್ರೀಯ ಹೆದ್ದಾರಿಗಳ ಹೊಸ ಕಾಮಗಾರಿಗೆ ಟೆಂಡರ್ ತೆರೆಯಲಾಗುವುದು : ಕೋಟ ಶ್ರೀನಿವಾಸ ಪೂಜಾರಿ

**ಚಿಕ್ಕಮಗಳೂರು:** ಜಿಲ್ಲೆಯಲ್ಲಿ ಹಾದುಹೋಗಿರುವ ರಾಷ್ಟ್ರೀಯ ಹೆದ್ದಾರಿಗಳ ಹೊಸ ಕಾಮಗಾರಿ ನಿರ್ವಹಿಸಲು ಹಲವು ಮಂದಿ ಟೆಂಡರ್ ಸಲ್ಲಿಕೆ ಮಾಡಿದ್ದು, ಅ.19ರಂದು ಟೆಂಡರ್ ತೆರೆಯಲಾಗುತ್ತದೆ ಎಂದು ಸಂಸದ ಕೋಟ ಶ್ರೀನಿವಾಸ ಪೂಜಾರಿ ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆ ಅಧಿಕಾರಿಗಳೊಂದಿಗೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಷ್ಟ್ರೀಯ ಹೆದ್ದಾರಿ ಕಾಮಗಾರಿಯಲ್ಲಿ ಯಾವುದೇ ಲೋಪವಾಗದಂತೆ ಎಚ್ಚರಿಕೆ ವಹಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದರು.

ಇದೀಗ ನಿರ್ಮಾಣವಾಗುತ್ತಿರುವ ರಾಷ್ಟ್ರೀಯ ಹೆದ್ದಾರಿಗಳ ಇಕ್ಕೆಲಗಳಲ್ಲಿರುವ ಯಾವ ಯಾವ ಮರಗಳನ್ನು ತೆರವುಗೊಳಿಸಬೇಕು ಎಂಬ ಬಗ್ಗೆ ಈಗಾಗಲೇ ಅರಣ್ಯ ಇಲಾಖೆಯೊಂದಿಗೆ ಸೇರಿ ಮರಗಳನ್ನು ಗುರುತು ಮಾಡಲಾಗಿದೆ. ಹೀಗಾಗಿ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳು ಯಾವುದೇ ಟೆಂಡರ್‌ದಾರರಿಗೆ ಸಿಕ್ಕರೂ ಅವರು ಅ. 19ರ ಬಳಿಕ ಅರಣ್ಯ ಇಲಾಖೆಯೊಂದಿಗೆ ಸೇರಿ ನಿಯಮಾನುಸಾರವಾಗಿ ಮರ ತೆರವುಗೊಳಿಸುವಂತೆ ಸೂಚನೆ ನೀಡಲಾಗಿದೆ. ಜೊತೆಗೆ ಯಾವುದೇ ಗೊಂದಲಗಳಿಗೂ ಆಸ್ಪದ ನೀಡಬಾರದು ಎಂದು ಹೇಳಿದರು.

ಮೂಗ್ತಿಹಳ್ಳಿಯಿಂದ ಮೂಡಿಗೆರೆವರೆಗೆ ಹಾಗೂ ಕಡೂರಿನಿಂದ ಮೂಡಿಗೆರೆವರೆಗಿನ ರಾಷ್ಟ್ರೀಯ ಹೆದ್ದಾರಿ ಕುರಿತು ಪ್ರಮುಖವಾಗಿ ಚರ್ಚೆ ನಡೆಸಲಾಗಿದೆ. ಅದರಲ್ಲಿಯೂ ಮೂಗ್ತಿಹಳ್ಳಿಯಿಂದ



ಮೂಡಿಗೆರೆವರೆಗಿನ ರಾಷ್ಟ್ರೀಯ ಹೆದ್ದಾರಿ ಅಗಲೀಕರಣದ ಭೂ ಸ್ವಾಧೀನಕ್ಕೆ ಸಂಬಂಧಿಸಿದಂತೆ ವಿಶೇಷವಾಗಿ ಚರ್ಚೆ ನಡೆಸಲಾಗಿದೆ ಎಂದು ವಿವರಿಸಿದರು.

ಮೂಗ್ತಿಹಳ್ಳಿಯಿಂದ ಮೂಡಿಗೆರೆವರೆಗೆ ರಾಷ್ಟ್ರೀಯ ಹೆದ್ದಾರಿ ಅಗಲೀಕರಣಕ್ಕಾಗಿ 150ಜನರಭೂಮಿಸ್ವಾಧೀನಪಡಿಸಿಕೊಳ್ಳಲಾಗುತ್ತಿದೆ. ಈ ಸಂಬಂಧ ಎಲ್ಲರಿಗೂ ದಾಖಲೆ ನೀಡುವಂತೆ ನೋಟೀಸ್ ನೀಡಲಾಗಿತ್ತು. ಆದರೆ ಇದುವರೆಗೆ ಕೆಲವರು ದಾಖಲೆ ನೀಡಿದ್ದರೆ, ಇನ್ನು ಕೆಲವರು ದಾಖಲೆ ನೀಡಿಲ್ಲ. ಹೀಗಾಗಿ ಎಲ್ಲರೂ ದಾಖಲೆ ನೀಡಿದ ಬಳಿಕ ಶೀಘ್ರವೇ ಪರಿಹಾರ ವಿತರಣೆ ಮಾಡಿ ಕಾಮಗಾರಿ ಆರಂಭಿಸಲಾಗುವುದು ಎಂದು ಮಾಹಿತಿ ನೀಡಿದರು.

ಮೂಗ್ತಿಹಳ್ಳಿಯಿಂದ ಮೂಡಿಗೆರೆವರೆಗೆ ಅಗಲವಾಗಲಿರುವ ರಾಷ್ಟ್ರೀಯ ಹೆದ್ದಾರಿ ಮೂಡಿಗೆರೆ ಪಟ್ಟಣದ ಒಳಗೆ ಕಿರಿದಾಗುತ್ತಿದೆ ಎಂಬ ಆರೋಪ ಕೇಳಿಬಂದಿದೆ. ಹೀಗಾಗಿ ಅಧಿಕಾರಿಗಳಿಗೆ ಹೊಸದಾಗಿ ಸರ್ವೇ ನಡೆಸಲು ಸೂಚಿಸಿದ್ದೇವೆ. ಒಂದು ವೇಳೆ ಪಟ್ಟಣದ ಒಳಗೆ ಹೆದ್ದಾರಿ ಕಿರಿದಾಗಿದ?ದೇ ಆಗಿದ್ದಲ್ಲಿ ಅದನ್ನು ಸರಿಪಡಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ನಾರಾಯಣ ರಡ್ಡಿ ಕನಕರಡ್ಡಿ, ಎಸಿ ಸುದರ್ಶನ್, ತಹಸೀಲ್ದಾರ್ ರೇಷ್ಮಾ ಶೆಟ್ಟಿ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಎಇಇ ಕಾಂಬ್ಳೆ, ಕೃಷಿ ಇಲಾಖೆ ಜಂಟಿ ನಿರ್ದೇಶಕಿ ಸುಜಾತ, ತೋಟಗಾರಿಕೆ ಇಲಾಖೆ ಉಪನಿರ್ದೇಶಕಿ ಪೂರ್ಣಿಮಾ, ಬಿಜೆಪಿ ಮುಖಂಡರಾದ ಎಚ್.ಸಿ.ಕಲ್ಮರುಡಪ್ಪ, ದೀಪಕ್ ದೊಡ್ಡಯ್ಯ ಮತ್ತಿತರರಿದ್ದರು.

# ರಾಶಿ ಭವಿಷ್ಯ

### ಮೇಷ ರಾಶಿ

ಸ್ವಯಂ ಸುಧಾರಣೆಯ ಯೋಜನೆಗಳು ಒಂದಕ್ಕಿಂತ ಹೆಚ್ಚು ರೀತಿಯಲ್ಲಿ ಫಲ ನೀಡುತ್ತವೆ – ನಿಮ್ಮ ಬಗ್ಗೆ ನಿಮಗೇ ಒಳ್ಳೆಯದೆನಿಸುತ್ತದೆ ಮತ್ತು ವಿಶ್ವಾಸ ಮೂಡುತ್ತದೆ. ಆಸ್ತಿ ವ್ಯವಹಾರಗಳು ಅಸಾಧಾರಣ ಲಾಭ ತರುತ್ತವೆ. ನಿಮ್ಮ ಮಗುವಿನಂಥ ಮತ್ತು ಮುಗ್ಧ ವರ್ತನೆ ಕುಟುಂಬದ ಸಮಸ್ಯೆಯನ್ನು ಪರಿಹರಿಸುವಲ್ಲಿ ಒಂದು ಪ್ರಮುಖ ಪಾತ್ರ ವಹಿಸುತ್ತದೆ. ನಿಮ್ಮ ಧೈರ್ಯ ಪ್ರೀತಿಯನ್ನು ಗೆಲ್ಲಬಹುದು.

### ವೃಷಭ ರಾಶಿ

ಗಾಯಗೊಳ್ಳುವುದನ್ನು ತಪ್ಪಿಸಲು ಕುಳಿತುಕೊಳ್ಳುವಾಗ ವಿಶೇಷ ಕಾಳಜಿ ವಹಿಸಿ. ಅಲ್ಲದೇ ಒಳ್ಳೆಯ ನಿಲುವು ಕೇವಲ ನಿಮ್ಮ ವ್ಯಕ್ತಿತ್ವವನ್ನು ವೃದ್ಧಿಸುವುದಷ್ಟೇ ಅಲ್ಲದೇ ಆರೋಗ್ಯ ಮತ್ತು ವಿಶ್ವಾಸಾರ್ಹತೆಯನ್ನು ಅಭಿವೃದ್ಧಿಪಡಿಸುವಲ್ಲೂ ಪ್ರಮುಖ ಪಾತ್ರ ವಹಿಸುತ್ತದೆ. ಮನೆಯ ಸಣ್ಣ ವಸ್ತುಗಳ ಮೇಲೆ ನಿಮ್ಮ ಸಾಕಷ್ಟು ಹಣ ಹಾಳಾಗಬಹುದು, ಇದರ ಕಾರಣದಿಂದ ನೀವು ಮಾನಸಿಕ ಒತ್ತಡಗೊಳಗಾಗಬಹುದು. ಒಂದು ಹಳೆಯ ಸಂಪರ್ಕ ನಿಮಗೆ ಕೆಲವು ಸಮಸ್ಯೆಗಳನ್ನು ಸೃಷ್ಟಿಸಬಹುದು ಕೆಲವರಿಗೆ ಮದುವೆಯಾಗುವ ಸಾಧ್ಯತೆಗಳು ಹಾಗೂ ಇನ್ನೂ ಕೆಲವರಿಗೆ ಪ್ರಣಯ ಕಾಲ.

### ಮಿಥುನ ರಾಶಿ

ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ. ಚಂದ್ರನ ಸ್ಥಾನದಿಂದಾಗಿ, ಇಂದು ನಿಮ್ಮ ಹಣವನ್ನು ಅನಗತ್ಯ ಕೆಲಸಗಳಿಗೆ ಖರ್ಚು ಮಾಡಬಹುದು. ನೀವು ಹಣವನ್ನು ಸಂಗ್ರಹಿಸಲು ಬಯಸಿದರೆ ನಿಮ್ಮ ಸಂಗಾತಿಯೊಂದಿಗೆ ಅಥವಾ ಪೋಷಕರೊಂದಿಗೆ ಮಾತನಾಡಿ. ಸಂಬಂಧಿಕರು ಮತ್ತು ಸ್ನೇಹಿತರಿಂದ ಅನಿರೀಕ್ಷಿತ ಉಡುಗೊರೆಗಳು. ಪ್ರೀತಿಯ ಶಕ್ತಿ ನಿಮಗೆ ಪ್ರೀತಿಸಲು ಒಂದು ಕಾರಣ ನೀಡುತ್ತದೆ.

### ಕರ್ಕ ರಾಶಿ

ಸ್ನೇಹಿತರ ಮೂಲಕ ದೊರಕುವ ಜ್ಯೋತಿಶ್ಶಾಸ್ತ್ರದ ಮಾರ್ಗದರ್ಶನ ನಿಮ್ಮ ಆರೋಗ್ಯವನ್ನು ಸುಧಾರಿಸಲು ನಿಮ್ಮನ್ನು ಉತ್ತೇಜಿಸುತ್ತದೆ. ನಿಮ್ಮ ಹೆಚ್ಚುವರಿ ಹಣವನ್ನು ಒಂದು ಸುರಕ್ಷಿತ ಸ್ಥಳದಲ್ಲಿರಿಸಿ ಹಾಗೂ ಇದು ಮುಂದಿನ ಕಾಲದಲ್ಲಿ ನಿಮಗೆ ಒಳ್ಳೆಯ ಆದಾಯ ತರುತ್ತದೆ. ನಿಮ್ಮ ಅತಿಯಾದ ಜೀವನಶೈಲಿ ಮನೆಯಲ್ಲಿ ಆತಂಕ ಸೃಷ್ಟಿಸಬಹುದು ಆದ್ದರಿಂದ ತಡರಾತ್ರಿಯನ್ನು ಹಾಗೂ ಇತರರ ಮೇಲೆ ಬಹಳ ಖರ್ಚು ಮಾಡುವುದನ್ನು ತಪ್ಪಿಸಿ.

### ಸಿಂಹ ರಾಶಿ

ನಿಮ್ಮ ಅತ್ಯಂತ ಪ್ರೀತಿಯ ಕನಸು ನನಸಾಗುತ್ತದೆ. ಆದರೆ ತುಂಬಾ ಸಂತೋಷ ಸ್ವಲ್ಪ ಸಮಸ್ಯೆಗಳನ್ನು ಉಂಟುಮಾಡಬಹುದಾದ್ದರಿಂದ ನಿಮ್ಮ ಉತ್ಸಾಹವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ. ದಿನದಲ್ಲಿ ನಂತರ ಹಣಕಾಸು ಪರಿಸ್ಥಿತಿಗಳು ಸುಧಾರಿಸುತ್ತವೆ. ಮಕ್ಕಳು ಅವರ ವೃತ್ತಿಯನ್ನು ಯೋಜಿಸುವುದಕ್ಕಿಂತ ಹೆಚ್ಚಾಗಿ ಹೊರಾಂಗಣ ಚಟುವಟಿಕೆಗಳಲ್ಲೇ ಸಮಯ ಕಳೆಯುವುದರಿಂದ ಅವರು ನಿರಾಸೆ ಉಂಟುಮಾಡಬಹುದು.

### ಕನ್ಯಾ ರಾಶಿ

ವಿಶೇಷವಾಗಿ ಬಿಕ್ಕಟ್ಟಿನ ಸಮಯದಲ್ಲಿ ನಿಮ್ಮ ತಾಳ್ಮೆ ಕಳೆದುಕೊಳ್ಳಬೇಡಿ. ಆಪ್ತ ಸ್ನೇಹಿತನ ಸಹಾಯದಿಂದ ಇಂದು ಕೆಲವು ವ್ಯಾಪಾರಿಗಳಿಗೆ ಹಣದ ಲಾಭವಾಗುವ ಸಾಧ್ಯತೆ ಇದೆ. ಈ ಹಣ ನಿಮ್ಮ ಅನೇಕ ಸಮಸೆಗಳನ್ನು ದೂರ ಮಾಡಬಹುದು. ಸ್ವಾನುಕಂಪದಲ್ಲಿ ಸಮಯ ವ್ಯರ್ಥ ಮಾಡದೇ ಜೀವನದ ಪಾಠಗಳನ್ನು ಕಲಿಯಲು ಪ್ರಯತ್ನಿಸಿ. ಪ್ರೀತಿ ಮತ್ತು ಪ್ರಣಯ ನಿಮ್ಮನ್ನು ಸಂತೋಷದ ಮನೋಭಾವದಲ್ಲಿಡುತ್ತದೆ.

### ತುಲಾ ರಾಶಿ

ನಿಮ್ಮ ನಗು ಖಿನ್ನತೆಯ ವಿರುದ್ಧ ಕೆಲಸ ಮಾಡುತ್ತದೆ. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ – ಆದರೆ ಅದು ನಿಮ್ಮ ಕೈಯಿಂದ ಜಾರಿಹೋಗದಿರಲು ಪ್ರಯತ್ನಿಸಿ. ನಿಮ್ಮ ಮನೆಯ ವಾತಾವರಣವನ್ನು ಬದಲಾಯಿಸುವ ಮೊದಲು ಅದಕ್ಕೆ ಎಲ್ಲರ ಅನುಮೋದನೆಯಿದೆಯೆಂದು ಖಾತ್ರಿಪಡಿಸಿಕೊಳ್ಳಿ. ನಿಮ್ಮ ಮನದನ್ನೆಯ ವಿಚಿತ್ರ ನಡವಳಿಕೆ ಇಂದು ನಿಮ್ಮ ಪ್ರೇಮವನ್ನು ಘಾಸಿಗೊಳಿಸುತ್ತದೆ.

### ವೃಶ್ಚಿಕ ರಾಶಿ

ಸಂಗಾತಿಯ ಆರೋಗ್ಯಕ್ಕೆ ಸೂಕ್ತ ರಕ್ಷಣೆ ಮತ್ತು ಗಮನದ ಅಗತ್ಯವಿದೆ. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ನಿಮ್ಮ ಅತಿಯಾದ ಜೀವನಶೈಲಿ ಮನೆಯಲ್ಲಿ ಆತಂಕ ಸೃಷ್ಟಿಸಬಹುದು ಆದ್ದರಿಂದ ತಡರಾತ್ರಿಯನ್ನು ಹಾಗೂ ಇತರರ ಮೇಲೆ ಬಹಳ ಖರ್ಚು ಮಾಡುವುದನ್ನು ತಪ್ಪಿಸಿ. ನಿಮ್ಮ ಪ್ರೀತಿಪಾತ್ರರೊಡನೆ ನಿಮ್ಮ ವೈಯಕ್ತಿಕ ಭಾವನೆಗಳು / ರಹಸ್ಯಗಳನ್ನು ಹಂಚಿಕೆಕೊಳ್ಳಲು ಇದು ಸರಿಯಾದ ಸಮಯವಲ್ಲ.

### ಧನು ರಾಶಿ

ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ನೀವು ಇಂದು ಹಣ ಉಳಿಸುವುದು ಕಷ್ಟ ನೀವು ಇಂದು ಅತಿಯಾಗಿ ಖರ್ಚು ಮಾಡುವ ಅಥವಾ ನಿಮ್ಮ ಪರ್ಸ್ ಕಳೆದುಕೊಳ್ಳುವ ಸಾಧ್ಯತೆಗಳಿವೆ ನಿರ್ಲಕ್ಷ್ಯತನದಿಂದ ಕೆಲವು ಸಮಸ್ಯೆಗಳು ಖಂಡಿತ. ನಿಮ್ಮ ಕುಟುಂಬದ ಕಲ್ಯಾಣಕ್ಕಾಗಿ ಕೆಲಸ ಮಾಡಿ. ನಿಮ್ಮ ಕಾರ್ಯಗಳು ದುರಾಶೆಯಿಂದಲ್ಲದೇ ಪ್ರೀತಿ ಮತ್ತು ಸಕಾರಾತ್ಮಕ ದೃಷ್ಟಿಯಿಂದ ನಡೆಯಬೇಕು.

### ಮಕರ ರಾಶಿ

ನಿಮ್ಮ ಬಲವಾದ ಧೃಢತೆ ಮತ್ತು ನಿರ್ಭಯತೆ ನಿಮ್ಮ ಮಾನಸಿಕ ಶಕ್ತಿ ವರ್ಧಿಸುವಲ್ಲಿ ಮಹತ್ತರ ಪಾತ್ರ ವಹಿಸುತ್ತವೆ. ಇದು ನಿಮಗೆ ಯಾವುದೇ ಪರಿಸ್ಥಿತಿಯನ್ನು ನಿಯಂತ್ರಣದಲ್ಲಿರಿಸಿಕೊಳ್ಳಲು ಉತ್ತೇಜಿಸುವುದರಿಂದ ಇದನ್ನು ಕಾಯ್ದುಕೊಳ್ಳಿ. ಇಂದು ನೀವು ಯಾವುದೇ ಅಜ್ಞಾತ ಮೂಲಗಳಿಂದ ಹಣವನ್ನು ಪಡೆಯಬಹುದು, ಇದರಿಂದ ನಿಮ್ಮ ಅನೇಕ ಆರ್ಥಿಕ ಸಮಸ್ಯೆಗಳು ದೂರವಾಗುತ್ತವೆ. ಅರ್ಹರಿಗೆ ವೈವಾಹಿಕ ಮೈತ್ರಿಗಳು.

### ಕುಂಭ ರಾಶಿ

ಧ್ಯಾನ ಮತ್ತು ಆತ್ಮ ಸಾಕ್ಷಾತ್ಕಾರ ಪ್ರಯೋಜನಕಾರಿಯಾಗಬಹುದು. ಹಣಕಾಸು ಲಾಭಗಳು ವಿವಿಧ ಮೂಲಗಳಿಂದ ಬರುತ್ತದೆ. ಮಕ್ಕಳಿಂದ ಅನಿರೀಕ್ಷಿತ ಸುದ್ದಿ ಸಂತೋಷದ ಕ್ಷಣಗಳನ್ನು ತರುತ್ತದೆ. ಒಂದು ಅಚ್ಚರಿಯ ಸಂದೇಶ ನಿಮಗೆ ಸಿಹಿ ಕನಸುಗಳನ್ನು ನೀಡುತ್ತದೆ. ನಿಮ್ಮ ಕೆಲಸ ಮತ್ತು ನಿಮ್ಮ ಆದ್ಯತೆಗಳ ಮೇಲೆ ಗಮನವಿಡಿ. ಇಂದು ನೀವು ಜೀವನ ಸಂಗಾತಿಯೊಂದಿಗೆ ಸಮಯವನ್ನು ಕಳೆಯುವ ಮತ್ತು ಅವರನ್ನು ಎಲ್ಲಿಗಾದರೂ ಸುತ್ತಾಡಲು ಕೊಂಡೊಯ್ಯುವ ಯೋಜನೆ ಮಾಡುತ್ತೀರಿ ಆದರೆ ಅವರ ಅನಾರೋಗ್ಯದ ಕಾರಣದಿಂದಾಗಿ ಇದು ಸಾಧ್ಯವಾಗುವುದಿಲ್ಲ.

### ಮೀನ ರಾಶಿ

ಖಿನ್ನತೆಯನ್ನು ಹೊಡೆದೋಡಿಸಿ ಇದ ನಿಮ್ಮನ್ನು ಆವರಿಸಿಕೊಳ್ಳುತ್ತಿದೆ ಮತ್ತು ನಿಮ್ಮ ಪ್ರಗತಿಗೆ ಅಡ್ಡಿಪಡಿಸುತ್ತಿದೆ. ಮನೆಯ ಅಗತ್ಯಗಳನ್ನು ನೋಡುತ್ತಾ, ಇಂದು ನೀವು ನಿಮ್ಮ ಜೀವನ ಸಂಗಾತಿಯೊಂದಿಗೆ ಯಾವುದೇ ಅಮೂಲ್ಯ ವಸ್ತುವನ್ನು ಖರೀದಿಸಬಹುದು, ಇದರಿಂದ ಆರ್ಥಿಕ ಪರಿಸ್ಥಿತಿ ಸ್ವಲ್ಪ ತೊಂದರೆಗೊಳಗಾಗಬಹುದು. ಭಾವನಾತ್ಮಕ ಭರವಸೆಗಳನ್ನು ಬಯಸುವವರು ಹಿರಿಯರು ಅವರ ನೆರವಿಗೆ ಬರುವುದನ್ನು ನೋಡಬಹುದು.

ಹರಿಹರದಲ್ಲಿ ಗುರುವಂದನಾ ಕಾರ್ಯಕ್ರಮ ಯಶಸ್ವಿ

## ವಿದ್ಯಾರ್ಥಿಗಳ ಸಾಧನೆಯಿಂದ ಶಿಕ್ಷಕರ ವೃತ್ತಿ ಸಾರ್ಥಕ

**ಹರಿಹರ:** ದಶಕಗಳ ಹಿಂದೆ ನಮ್ಮಲ್ಲಿ ಕಲಿತ ವಿದ್ಯಾರ್ಥಿಗಳು ಇಂದು ಇಂಜಿನಿಯರ್, ಡಾಕ್ಟರ್, ಶಿಕ್ಷಕರು, ಉಪನ್ಯಾಸಕರು ಸೇರಿದಂತೆ ವಿವಿಧ ವಲಯಗಳಲ್ಲಿ ತೊಡಗಿಸಿಕೊಂಡಿದ್ದಾರೆ. ವಿದ್ಯಾರ್ಥಿಗಳ ಸಾಧನೆಯಿಂದಾಗಿ ನಮ್ಮ ಶಿಕ್ಷಕ ವೃತ್ತಿ ತೃಪ್ತಿ ತಂದಿದೆ ಎಂದು ನಿವೃತ್ತ ಮುಖ್ಯಗುರು ಎಚ್.ಬಸವರಾಜ್ ಸಂತಸ ಹಂಚಿಕೊಂಡರು.



ನಗರದ ಸೆಲೆಬ್ರಷನ್ ಫಂಕ್ಷನ್ ಹಾಲ್‌ನಲ್ಲಿ ಭಾನುವಾರ(ದಿನಾಂಕ 12-10-25) ರಂದು ಏರ್ಪಡಿಸಿದ್ದ ಡಾ.ಬಿ.ಆರ್.ಅಂಬೇಡ್ಕರ್ ಪ್ರಾಥಮಿಕ ಮತ್ತು ಪ್ರೌಢಶಾಲೆಯಲ್ಲಿ 2000ನೇ ಶೈಕ್ಷಣಿಕ ವರ್ಷದ ವಿದ್ಯಾರ್ಥಿಗಳ ಸ್ನೇಹ ಸಮ್ಮಿಲನ ಹಾಗೂ ಗುರುವಂದನಾ ಕಾರ್ಯಕ್ರಮದಲ್ಲಿ ಸನ್ಮಾನಿತರಾಗಿ ಅವರು ಮಾತನಾಡಿದರು.


ಹಳೇ ವಿದ್ಯಾರ್ಥಿಗಳು ಮತ್ತೆ ಒಂದೆಡೆ ಸೇರಿ ಸಂಭ್ರಮಿಸುವುದು, ಬಾಲ್ಯದ ದಿನಗಳನ್ನು ಮೆಲುಕು ಹಾಕುವ ಜೊತೆಗೆ ನಿವೃತ್ತರಾಗಿ ಎಲ್ಲೋ ಇರುವ ಶಿಕ್ಷಕರನ್ನೂ ಹುಡಿಕಿ ಕಾರ್ಯಕ್ರಮಕ್ಕೆ ಆಹ್ವಾನಿಸಿರುವುದು ಖುಷಿಯ ವಿಚಾರ. ಇಂತಹ ಕಾರ್ಯಕ್ರಮದಿಂದ ವೃದ್ಧಾಪ್ಯದಲ್ಲಿರುವ ನಮ್ಮ ಆಯಸ್ಸೂ 10 ವರ್ಷಗಳು ಹೆಚ್ಚಿದಂತಾಗಿದೆ ಎಂದು ಕಾರ್ಯಕ್ರಮದ ಬಗ್ಗೆ ಮೆಚ್ಚುಗೆ ಸೂಚಿಸಿದರು.

ಪ್ರೌಢ ಶಾಲೆಯ ಮುಖ್ಯಶಿಕ್ಷಕ ಉಮೇಶ್ ಮಾತನಾಡಿ, ನಮ್ಮಲ್ಲಿ ವಿದ್ಯಾಭ್ಯಾಸ ಪೂರ್ಣಗೊಳಿಸಿದ ವಿದ್ಯಾರ್ಥಿಗಳಲ್ಲಿ ಅನೇಕರು ಉನ್ನತ ಸ್ಥಾನಕ್ಕೇ ರಿದ್ದಾರೆ. ಕೆಲವರು ಸ್ವಂತ ವ್ಯಾಪಾರ ಹಾಗೂ ಉದ್ಯೋಗದಲ್ಲಿ ತೊಡಗಿಸಿದ್ದಾರೆ. ದಶಕಗಳ ಹಿಂದಿನ ಗುರು-ಶಿಷ್ಯರ ನಡುವಿನ ಬಾಂಧವ್ಯ ಇಂದು ಅಷ್ಟರ ಮಟ್ಟಿಗೆ ಗಟ್ಟಿತನದಿಂದ ಉಳಿದಿಲ್ಲ. ಆದರೂ, ಅದೇ ಪ್ರೀತಿ, ಗೌರವದಿಂದಾಗಿ ಹಳೇ ವಿದ್ಯಾರ್ಥಿಗಳು ನಮ್ಮೆಲ್ಲರನ್ನೂ ಆಹ್ವಾನಿಸಿ, ಗೌರವಿಸುತ್ತಿರುವುದು ಇಂದಿನ ವಿದ್ಯಾರ್ಥಿಗಳಿಗೆ ಮಾದರಿಯಾಗಿದೆ ಎಂದು ಅಭಿಪ್ರಾಯ ಪಟ್ಟರು.

ನಿವೃತ್ತ ಶಿಕ್ಷಕಿ ನಾಗಮಣಿ ಮಾತನಾಡಿ, ನಿವೃತ್ತಿ ಜೀವನದಲ್ಲಿ ಒಂದೇ ವೇದಿಕೆಯಲ್ಲಿ ಮತ್ತೆ ಎಲ್ಲ ಹಳೆ ಸಿಬ್ಬಂದಿ, ಸಹ ಶಿಕ್ಷಕರು ಸೇರಲು ಅವಕಾಶ ಸಿಕ್ಕಂತಾಗಿದೆ. ಹಳೇಯ ವಿದ್ಯಾರ್ಥಿಗಳು ಅವಕಾಶ ಕಲ್ಪಿಸಿದ್ದಾರೆ.

ನಿವೃತ್ತ ಶಿಕ್ಷಕರಾದ ಶೇಖ್, ಹಾಲಪ್ಪ, ಸೇರಿದಂತೆ ಶಾಲೆಯ 33 ಜನ ಶಿಕ್ಷಕರನ್ನು ಸನ್ಮಾನಿಸಿ, ಗೌರವಿಸಲಾಯಿತು. ಇದೇ ವೇಳೆ ತಾವು ಕಲಿತ ಶಾಲೆಗೆ 1 ಲಕ್ಷ ರೂ. ಮೌಲ್ಯದ 20 ಕಬ್ಬಿಣದ ಡೆಸ್ಕ್ ಹಾಗೂ 3 ಗ್ರೀನ್ ಬೋರ್ಡ್ ಹಸ್ತಾಂತರಿಸಲಾಯಿತು. 2000 ನೇ ಇಸ್ವಿಯಲ್ಲಿ ಎಸ್‌ಎಸ್‌ಎಲ್‌ಸಿ ತರಗತಿಯಲ್ಲಿದ್ದ 110ಕ್ಕೂ ಹೆಚ್ಚು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಕನ್ನಡ ರಾಜ್ಯೋತ್ಸವ ಪ್ರಯುಕ್ತ ರಾಜ್ಯ ಮಟ್ಟದ ಉಚಿತ ಕವನ ಬರೆಯುವ ಸ್ಪರ್ಧೆಗೆ ಆಹ್ವಾನ




**ದಾವಣಗೆರೆ:** ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಆಶ್ರಯದಲ್ಲಿ 71ನೇ ವರ್ಷದ ಕನ್ನಡ ರಾಜ್ಯೋತ್ಸವ ಪ್ರಯುಕ್ತ ರಾಜ್ಯ ಮಟ್ಟದ ಉಚಿತ ಕವನ ಬರೆಯುವ ಸ್ಪರ್ಧೆ ಆಹ್ವಾನಿಸಲಾಗಿದೆ ಎಂದು ಹಿರಿಯ ಕವಿಗಳು ಸಂಸ್ಥೆಯ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈ ತಿಳಿಸಿದ್ದಾರೆ.

ಕವನ ಬರೆಯುವ ಆಸಕ್ತರು ಕವಿ, ಕವಯತ್ರಿಯರು ಯಾವುದೇ ವಯೋಮಾನದ ಮಿತಿ ಇಲ್ಲದೇ 15 ರಿಂದ 20 ಸಾಲುಗಳಲ್ಲಿ ಕನ್ನಡ ರಾಜ್ಯೋತ್ಸವದ ಕುರಿತಾಗಿ ಕವನ ರಚಿಸಿ ಈ ಕೆಳಗಿನ ವ್ಯಾಟ್ಸಪ್ ಸಂಖ್ಯೆಗೆ ಕಳಿಸಬೇಕೆಂದು ತೀರ್ಪುಗಾರರಲ್ಲಿ ಒಬ್ಬರಾದ ಸಾಹಿತಿ, ಕವಯತ್ರಿ ಶ್ರೀಮತಿ ಕೋಮಲ ವಸಂಕುಮಾರ್ ಪ್ರಕಟಿಸಿದ್ದಾರೆ.

ಯಾವುದೇ ಸಭೆ, ಸಮಾರಂಭವಿಲ್ಲದೇ ಸ್ಪರ್ಧಿಗಳು ಕೊಟ್ಟ ವ್ಯಾಟ್ಸಪ್ ಸಂಖ್ಯೆಗೆ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಫಲಿತಾಂಶ, ಅಭಿನಂದನಾ ಪತ್ರ ಕಳಿಸುತ್ತೇವೆ. ಕವನ ರಚಿಸಿ ಕಳಿಸುವ ವ್ಯಾಟ್ಸಪ್ ಸಂಖ್ಯೆ 8884131815ಹಿರಿಯ-ಕಿರಿಯ ಕವಿ, ಕವಯತ್ರಿಯರು ಹೆಚ್ಚಿನ ಸಂಖ್ಯೆಯಲ್ಲಿ ಕವನ ರಚಿಸಿ ಈ ಮುಕ್ತವಾದ ಅವಕಾಶವನ್ನು ಸದ್ಬಳಕೆ ಮಾಡಿಕೊಳ್ಳಬೇಕಾಗಿ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಕೆ.ಸಿ.ಉಮೇಶ್ ವಿನಂತಿಸಿದ್ದಾರೆ.

# ಪಠ್ಯದ ಜೊತೆಯಲ್ಲಿ ಕೌಶಲ್ಯವೂ ಅಗತ್ಯವಿದೆ

**ಬಳ್ಳಾರಿ:** ಇಂದಿನ ವಿದ್ಯಾರ್ಥಿಗಳಿಗೆ ಪಠ್ಯದ ಕಲಿಕೆಯ ಜೊತೆಯಲ್ಲಿ ಕೌಶಲ್ಯವನ್ನು ಕಲಿಸುವ ಅಗತ್ಯವಿದೆ ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯ ಅಭಿವೃದ್ಧಿ ಮತ್ತು ಜೀವನೋಪಾಯ ಇಲಾಖೆಯ ಸಚಿವ ಡಾ. ಶರಣ ಪ್ರಕಾಶ್ ಆರ್. ಪಾಟೀಲ್ ಅವರು ತಿಳಿಸಿದ್ದಾರೆ.



ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯು ನೂತನವಾಗಿ ಪ್ರಾರಂಭಿಸಿರುವ 'ಇಂಕ್ಯುಬೇಷನ್ ಹಾಗೂ ಜಾಬ್ ಪೋರ್ಟಲ್' ಅನ್ನು ಬುಧವಾರ ಲೋಕಾರ್ಪಣೆ ಮಾಡಿ ಅವರು ಮಾತನಾಡಿದರು.

ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳ ಡಿಗ್ರಿಗಳು ಸಾಲುತ್ತಿಲ್ಲ. ಕಾರಣ ಪಠ್ಯದ ಜೊತೆಯಲ್ಲಿ ಕೌಶಲ್ಯ, ಜ್ಞಾನ, ಸಂವಹನ ಮತ್ತು ಸಾಮಾನ್ಯ ಜ್ಞಾನವೂ ಪ್ರತಿಯೊಬ್ಬರಿಗೆ ಅಗತ್ಯ. ಈ ನಿಟ್ಟಿನಲ್ಲಿ ಎಐಸಿಟಿಸಿಯ ಜೊತೆಯಲ್ಲಿ ಸರ್ಕಾರ 'ಕಲಿಕೆಯ ಜೊತೆಯಲ್ಲಿ ಕೌಶಲ್ಯ'ಕ್ಕೆ ಆದ್ಯತೆ ನೀಡುವ ಪಠ್ಯವನ್ನು ರಚಿಸಲು ಕೋರಿದೆ ಎಂದರು.

ಇದು 'ಆವಿಷ್ಕಾರಗಳ ಯುಗ'. ಹೊಸ ಆವಿಷ್ಕಾರಗಳಿಗೆ – ಹೊಸ ತಂತ್ರಜ್ಞಾನಗಳಿಗೆ ಪ್ರತಿಯೊಂದು ಕ್ಷೇತ್ರ, ಪ್ರತಿಯೊಬ್ಬರೂ ಕೌಶಲ್ಯವಂತರಾಗಿ ಜ್ಞಾನವನ್ನು ಹೆಚ್ಚಿಸಿಕೊಳ್ಳಬೇಕು. ಉದ್ಯೋಗಮೇಳಗಳಲ್ಲಿ ನೋಂದಣಿ ಆಗುವವರಿಗೆ ಅಗತ್ಯವಿರುವ ಕೌಶಲ್ಯ, ಸಂವಹನ, ಜ್ಞಾನ ಇನ್ನಿತರೆಗಳ ಜೊತೆಯಲ್ಲಿ ಎಐ-ಮೆಷಿನ್ ಲರ್ನಿಂಗ್ ತಂತ್ರಜ್ಞಾನದ ಬಳಕೆಯ ಜ್ಞಾನವನ್ನು ನೀಡಲಾಗುತ್ತಿದೆ ಎಂದರು.

ಎಸ್ ಕೆಸಿಸಿಐನ ಅಧ್ಯಕ್ಷೆ ಉಮಾರೆಡ್ಡಿ ಅವರು, ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಜಾಲ ಪೋರ್ಟಲ್ ಉದ್ಘಾಟಿಸಿ, ಸ್ಕಿಲ್ ಡೆವಲಪ್ ಮೆಂಟ್ ಮತ್ತು ಇಂಕ್ಯುಬೇಷನ್ ಸೆಂಟರ್ ಆಧುನಿಕ ಡಿಟಿಟಲ್ ತಂತ್ರಜ್ಞಾನವನ್ನು ಹೊಂದಿದ್ದು, ಉದ್ಯಮಶೀಲತೆಯ ಕೇಂದ್ರವಾಗಿದೆ. ಎಸ್ ಕೆಸಿಸಿಐ ಬಿಡಿಸಿಸಿಐ ಜೊತೆ ಸ್ಟಾರ್ಟ್‌ಅಪ್ ಮಾರ್ಗದರ್ಶನ, ತರಬೇತಿ ಮತ್ತು ಹೂಡಿಕೆಯ ಸಂಪರ್ಕ ನೀಡಲಿದೆ. ಬಿಡಿಸಿಸಿಐ ಹೊಸ ಅವಕಾಶಗಳನ್ನು ನೀಡಲಿ, ಕರ್ನಾಟಕದ ಪ್ರಗತಿಗೆ ಕೈಜೋಡಿಸಲಿ ಎಂದು ಹಾರೈಸಿದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಯಶವಂತರಾಜ್ ನಾಗಿರೆಡ್ಡಿ ಅವರು ಸ್ವಾಗತ ಮತ್ತು ಪ್ರಾಸ್ತಾವಿಕ ಭಾಷಣ ಮಾಡಿ, ಬಿಡಿಸಿಸಿಐನ ಉದ್ದೇಶ ಹಾಗೂ ಗುರಿಗಳು ಮತ್ತು ನಿಸ್ವಾರ್ಥ ಜನಸೇವೆಗಳನ್ನು ವಿವರಿಸಿ, ಇಂಕ್ಯುಬೇಷನ್ ಸೆಂಟರ್ ಯುವಶಕ್ತಿಗೆ – ನವ ಉದ್ಯಮಿಗಳಿಗೆ ಆಶಾಕಿರಣವಾಗಿ ಸೇವೆ ಸಲ್ಲಿಸುವ ಜವಾಬ್ದಾರಿಗಳನ್ನು ನಿರ್ವಹಿಸಲಿದೆ. ಇಂಕ್ಯುಬೇಷನ್ ಸೆಂಟರ್ ಮುಂಬೈನ ವಿಕಸಿತ ಮೇನಲ್ಲಮೆಂಟ್ ಕನ್ಸಲ್ಟೆನ್ಸಿ ಪ್ರೈವೇಟ್ ಲಿಮಿಟೆಡ್ ಮತ್ತು ಲಾರ್ವನ್ ಹೋಲ್ಡಿಂಗ್ ಜೊತೆಯ ಒಪ್ಪಂದ ಮಾಡಿಕೊಂಡಿದ್ದು, ಉದ್ಯಮಿಗಳಿಗೆ ಬಂಡವಾಳ ಮತ್ತು ಜ್ಞಾನದ ಮಾರ್ಗದರ್ಶನ ನೀಡಲಿದೆ ಎಂದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಜಂಟಿ ಕಾರ್ಯದರ್ಶಿಗಳಾದ ಡಾ. ಮರ್ಚೆಡ್ ಮಲ್ಲಿಕಾರ್ಜುನಗೌಡ ಅವರು, ಜಾಬ್ ಪೋರ್ಟಲ್ ಕುರಿತು ಸಮಗ್ರ ಮಾಹಿತಿ ನೀಡಿ, ಉದ್ಯಮಿಗಳು ಮತ್ತು ಉದ್ಯೋಗಾಸಕ್ತರು ಈ ಪೋರ್ಟಲ್‌ನ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಮೇಯರ್ ಮುಲ್ಲಂಗಿ ನಂದೀಶ್, ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ನಿಕಟಪೂರ್ವ ಅಧ್ಯಕ್ಷರಾದ ಬಿ.ಮಹಾರುದ್ರಗೌಡರು, ಮಾಜಿ ಅಧ್ಯಕ್ಷರಾದ ಸಿ. ಶ್ರೀನಿವಾಸರಾವ್, ಹಿರಿಯ ಉಪಾಧ್ಯಕ್ಷರಾದ ಅವ್ವಾರು ಮಂಜುನಾಥ, ಖಜಾಂಚಿಗಾಳ ಪಿ. ಪಾಲಣ್ಣ ವೇದಿಕೆಯಲ್ಲಿದ್ದರು.

ಮೆಹತಾಬ್ ಅವರು ಕಾರ್ಯಕ್ರಮ ನಿರೂಪಿಸಿದರು. ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಗೌರವ ಕಾರ್ಯದರ್ಶಿಗಳಾದ ಕೆ.ಸಿ. ಸುರೇಶಬಾಬು ಅವರು ವಂದನಾರ್ಪಣೆ ಸಲ್ಲಿಸಿದರು.

ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಮತ್ತು ವಿವಿಧ ಸಂಘಟನೆಗಳವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಮದ್ಯ ಹಾಗೂ ಮಾದಕ ವಸ್ತುಗಳ ವಿರುದ್ಧ ಜಾಗೃತಿ ಅಭಿಯಾನಕ್ಕೆ ನ್ಯಾಯಾಧೀಶ ಮಹಾವೀರ ಮ. ಕರೆಣ್ಣವರಿಂದ ಚಾಲನೆ.

**ದಾವಣಗೆರೆ :** ಮದ್ಯ ಹಾಗೂ ಮಾದಕ ವಸ್ತುಗಳು ಇಂದಿನ ಸಮಾಜದಲ್ಲಿ ಜನರ ಆರೋಗ್ಯ ಮತ್ತು ಆರ್ಥಿಕ ಸದೃಢತೆಯನ್ನು ಕುಂಠಿತಗೊಳಿಸುತ್ತಿವೆ. ಇದರ ವಿರುದ್ಧ ಸರಿಯಾದ ಜಾಗೃತಿ ಮತ್ತು ಮಾಹಿತಿ ಎಲ್ಲರಿಗೂ ತಲುಪಿಸಬೇಕೆಂದು ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರ ಕರೆ ನೀಡಿದರು.



ಬುಧವಾರ (ಅ.15) ರಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿಯಲ್ಲಿ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಸಹಯೋಗದೊಂದಿಗೆ ಮದ್ಯ ಮತ್ತು ಮಾದಕ ವಸ್ತುಗಳ ವಿರುದ್ಧದ ಜಾಗೃತಿ ಅಭಿಯಾನಕ್ಕೆ ಚಾಲನೆ ನೀಡಿ ಬಳಿಕ ಮಾತನಾಡಿದರು.

ನಮಗೆ ಅನಾರೋಗ್ಯ ಉಂಟುಮಾಡುವ ಮಾದಕ ವಸ್ತುಗಳಿಂದ ದೂರ ಇರೋಣ, ಸಮಾಜದ ಸ್ವಾಸ್ಥ್ಯವನ್ನು ಕೆಡಿಸುವ ಮಾದಕ ವ್ಯಸನದಿಂದ ದೂರ ಸರಿಸೋಣ, ವಿದ್ಯಾಭ್ಯಾಸಕ್ಕೆ ಮಾರಕವಾಗುವ ಮಾದಕ ವ್ಯಸನಕ್ಕೆ ಬಲಿಯಾಗದಂತೆ ವಿದ್ಯಾರ್ಥಿಗಳನ್ನು ಮನವಲಿಸೋಣ ಮತ್ತು ವೈಯಕ್ತಿಕ ಭವಿಷ್ಯ ಹಾಗೂ ದೇಶದ ಅಭಿವೃದ್ಧಿಗೆ ತಡೆಯಾಗಿರುವ ಮಾದಕ ವ್ಯಸನದಿಂದ ಮುಕ್ತರಾಗೋಣ ಎಂದು ಎಲ್ಲಾ ಯುವಜನತೆಗೆ ಸಂದೇಶವನ್ನು ಕಳುಹಿಸಿಕೊಟ್ಟರು.

ನಶೆ ಮುಕ್ತ ಕರ್ನಾಟಕದ ನಿರ್ಮಾಣ ಮಾಡೋಣ ಹಾಗೂ ದೇಶವನ್ನು ಸದೃಢಗೊಳಿಸಲು ಸಹಕರಿಸೋಣ" ಎನ್ನುವ ಘೋಷವಾಕ್ಯಗಳನ್ನು

ಪುನರುಚ್ಚರಿಸಿದ ಅವರು ಎಲ್ಲಾ ಇಲಾಖೆಗಳ ಸಹಯೋಗದಲ್ಲಿ ಸೂಕ್ತ ಜಾಗೃತಿ ಸಲಹೆ ಸೂಚನೆ ಪುನರ್ವಸತಿ ಹಾಗೂ ಕಾನೂನು ಉಲ್ಲಂಘನೆ ಕಂಡು ಬಂದಲ್ಲಿ ಸೂಕ್ತ ಕ್ರಮ ಜರುಗಿಸಬೇಕೆಂದು ತಿಳಿಸಿದರು.

ಹಿರಿಯ ನಾಗರಿಕರ ಮತ್ತು ವಿಕಲಚೇತನರ ಸಬಲೀಕರಣ ಇಲಾಖೆ ಅಧಿಕಾರಿ ಡಾ.ಕೆ. ಕೆ.ಪ್ರಕಾಶ್ ಮಾತನಾಡಿ ಮಾದಕ ವಸ್ತು ಸೇವಿಸುವವರು ಕಂಡುಬಂದಲ್ಲಿ ಸಮೀಪದ ಮಾದಕ ವ್ಯಸನಿಗಳ ಪುನರ್ವಸತಿ ಕೇಂದ್ರಗಳನ್ನು ಸಂಪರ್ಕಿಸಲು ಸೂಚಿಸಿದರು. ಅದೇ ರೀತಿ ಪೊಲೀಸ್ ಟೋಲ್ ಫ್ರೀ ಸಹಾಯವಾಣಿ ಸಂಖ್ಯೆ 112 ಗೆ ಕರೆ ಮಾಡುವಂತೆ ಮತ್ತು ಡ್ರಗ್ ಫ್ರೀ ಕರ್ನಾಟಕ ಆಪ್ ಮೂಲಕ ಮಾಹಿತಿ ಪಡೆಯಲು ಅವಕಾಶವಿದೆ ಎಂದು ತಿಳಿಸಿದರು.

ಹಲವು ಇಲಾಖೆಗಳ ಸಹಯೋಗದೊಂದಿಗೆ ತಯಾರಿಸಲಾದ ಬಿತ್ತಿ ಪತ್ರಗಳನ್ನು ಪ್ರದರ್ಶಿಸಿದರು.

ಜಿಲ್ಲಾ ಮಕ್ಕಳ ರಕ್ಷಣಾ ಸಮಿತಿಯ ಅಧ್ಯಕ್ಷರಾದ ಮಂಜುಳಾ ಮತ್ತು ಸದಸ್ಯರಾದ ದುರ್ಗಪ್ಪ, ನಾಗರಾಜು ನಾಯಕ ಮತ್ತು ಇತರೆ ವಕೀಲರು ಉಪಸ್ಥಿತರಿದ್ದರು.

## ಬಳ್ಳಾರಿ ಜಿಟಿಟಿಸಿ ಕೇಂದ್ರಕ್ಕೆ ಸಚಿವ ಡಾ.ಶರಣ ಪ್ರಕಾಶ್ ಆರ್.ಪಾಟೀಲ ಭೇಟಿ ಪರಿಶೀಲನೆ

**ಬಳ್ಳಾರಿ:** ನಗರದ ರೇಡಿಯೋ ಪಾರ್ಕ್ ಬಳಿಯ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ(ಜಿಟಿಟಿಸಿ)ಕ್ಕೆ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣ ಪ್ರಕಾಶ ಆರ್.ಪಾಟೀಲ ಅವರು ಬುಧವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.



ಕೇಂದ್ರದ ಉಪಕರಣಗಾರ ಕೊಠಡಿ, ಸ್ಮಾರ್ಟ್ ಕ್ಲಾಸ್ ರೂಮ್ ಸೇರಿದಂತೆ ಸಭಾಂಗಣ ಕೊಠಡಿ ವೀಕ್ಷಣೆ ಮಾಡಿದ ಸಚಿವರು ಸೂಕ್ತ ನಿರ್ವಹಣೆ ಕೈಗೊಳ್ಳಬೇಕು. ಜಿಲ್ಲೆಯಲ್ಲಿ ಅತ್ಯಾಧುನಿಕವಾಗಿ ನಿರ್ಮಾಣಗೊಂಡ ಜಿಟಿಟಿಸಿ ಕೇಂದ್ರವು ಯುವ ಪೀಳಿಗೆಗೆ ಉಪಯುಕ್ತವಾಗಬೇಕು ಎಂದು ತಿಳಿಸಿದರು.

ಇದೇ ವೇಳೆ ಜಿಲ್ಲಾಧಿಕಾರಿಯವರು, ಸಂಡೂರಿನಲ್ಲಿ 25 ಎಕರೆ ಪ್ರದೇಶದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಸ್ಕಿಲ್ ಪಾರ್ಕ್ ಬಗ್ಗೆ ಸಚಿವರ ಗಮನಕ್ಕೆ ತಂದರು.

ಈ ವೇಳೆ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೇರ್, ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ಹಟ್ಟಪ್ಪ, ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆಯ ಸಹಾಯಕ ನಿರ್ದೇಶಕ ವಿಶ್ವನಾಥ, ಜಿಟಿಟಿಸಿ ಕೇಂದ್ರದ ಪ್ರಾಚಾರ್ಯ ಮುತ್ತಣ್ಣ ಸೇರಿದಂತೆ ಸಿಬ್ಬಂದಿ ವರ್ಗ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಅಂಧತ್ವ ನಿಯಂತ್ರಣ ಕಾರ್ಯಕ್ರಮದಡಿ ಎನ್‌ಜಿಓಗಳಿಂದ ಅರ್ಜಿ ಆಹ್ವಾನ

**ಶಿವಮೊಗ್ಗ:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘವು 2025-26ನೇ ಸಾಲಿಗೆ ಆರೋಗ್ಯ ಇಲಾಖೆ, ರಾಷ್ಟ್ರೀಯ ಅಂಧತ್ವ ನಿಯಂತ್ರಣ ಕಾರ್ಯಕ್ರಮದಡಿ 'ಕಣ್ಣಿನ ಪೊರೆ ಶಸ್ತ್ರಚಿಕಿತ್ಸಾ ಶಿಬಿರ ಹಾಗೂ ಇತರ ಕಣ್ಣಿನ ಖಾಯಿಲೆಗಳ ಚಿಕಿತ್ಸಾ' ಕಾರ್ಯಕ್ರಮಕ್ಕಾಗಿ ಆಸಕ್ತಿಯುಳ್ಳ ಹಾಗೂ ಅನುಭವವುಳ್ಳ ಅರ್ಹ ಸ್ವಯಂ ಸೇವಾ ಸಂಸ್ಥೆಗಳಿಂದ (ಎನ್‌ಜಿಓ) ಅರ್ಜಿ ಆಹ್ವಾನಿಸಿದೆ.

ಹೆಚ್ಚಿನ ಮಾಹಿತಿ ಹಾಗೂ ವಿವರಗಳಿಗೆ ವೆಬ್‌ಸೈಟ್ https://kppp.karnataka.gov.in/#/portal/portal-home ಹಾಗೂ ಜಿಲ್ಲಾ ಅಂಧತ್ವ ನಿಯಂತ್ರಣ ಕಾರ್ಯಕ್ರಮ ವಿಭಾಗ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ, ಶಿವಮೊಗ್ಗ, ದೂ.ಸಂ.: 8197094440/08182-222382 ಗಳನ್ನು ಸಂಪರ್ಕಿಸುವುದು.

## ತಾಲ್ಲೂಕು ಮಟ್ಟದ ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್

**ಚಿಕ್ಕಮಗಳೂರು:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ತಾಲ್ಲೂಕು ಮಟ್ಟದ ಪತ್ರಕರ್ತರು ತಮ್ಮ ವೃತ್ತಿ ನಿರತ ಚಟುವಟಿಕೆಗಳ ಸಂಬಂಧ ತಮ್ಮ ಜಿಲ್ಲಾದ್ಯಂತ ಉಚಿತವಾಗಿ ಸಂಚರಿಸಲು ಅನುಕೂಲವಾಗುವಂತೆ ಉಚಿತ ಬಸ್ ಪಾಸ್ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪತ್ರಕರ್ತರು ತಾವು ಕಾರ್ಯ ನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಗಳಿಂದ ಸೇವಾ ಪ್ರಮಾಣಪತ್ರ, ಶಿಫಾರಸ್ಸು ಪತ್ರ ಮತ್ತು 11 ತಿಂಗಳುಗಳ ವೇತನಪತ್ರ (ಲೈನೇಜ್, ಸಂಭಾವನೆ, ಕಮೀಷನ್ ಪಡೆದಿರುವ ದಾಖಲೆ) ಗಳನ್ನು ಅಥವಾ ವೇತನ ಜಮಾ ಆಗಿರುವ ಮಾಹಿತಿ ಇರುವಂತಹ ಬ್ಯಾಂಕ್ ಸ್ಟೇಟ್‌ಮೆಂಟ್ ಲಗತ್ತಿಸಿ "ಸೇವಾಸಿಂಧು" ಪೋರ್ಟಲ್ (<ಃಣಣಠಿ://ಜತಘುಟಿಜಃಣ. ಇಚಿಡಿಟಿಚಿಣಚಿಕಚಿ.ರಂತ.ಎಟಿ/>) ಮೂಲಕ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು.

ಆನ್‌ಲೈನ್‌ನಲ್ಲಿ ಸಲ್ಲಿಸಲಾದ ಅರ್ಜಿ ಮತ್ತು ಲಗತ್ತಿಸಲಾಗಿರುವ ದಾಖಲೆಗಳ ಒಂದು ಪ್ರತಿಯನ್ನು ಜಿಲ್ಲಾ ವಾರ್ತಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು. ಸ್ವೀಕೃತ ಅರ್ಜಿಗಳನ್ನು ಆಯ್ಕೆ ಸಮಿತಿಯ ಸಭೆಯಲ್ಲಿ ಪರಿಶೀಲಿಸಿ ಬಸ್‌ಪಾಸ್ ಮಂಜೂರು ಮಾಡಲಾಗುತ್ತದೆ. ಎಲ್ಲ ತಾಲ್ಲೂಕುಗಳ ಅರ್ಹ ಪತ್ರಕರ್ತರು ಕೂಡಲೇ ಸೇವಾಸಿಂಧು ಪೋರ್ಟಲ್ ಮೂಲಕ ಅರ್ಜಿಗಳನ್ನು ಸಲ್ಲಿಸುವುದರ ಮೂಲಕ ಈ ಸದುಪಯೋಗ ಪಡೆದುಕೊಳ್ಳಬಹುದು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳ್ಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ಟಾರ್ಟ್‌ಅಫ್ ಮೂಲಕ ಕೈಗಾರಿಕೆಗಳ ಸ್ಥಾಪನೆಗೆ ಮುಂದಾಗಬೇಕು

**ಚಿಕ್ಕಮಗಳೂರು:** ಸ್ವಯಂ ಉದ್ಯೋಗ ಸೃಜಿಸುವ ದೃಷ್ಟಿಯಿಂದ ಸ್ಟಾರ್ಟ್‌ಅಫ್ ಮೂಲಕ ಕೈಗಾರಿಕೆಗಳ ಸ್ಥಾಪನೆಗೆ ಮುಂದಾಗಬೇಕು ಎಂದು ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ಶಾಂತರಾಂ ಹೆಗಡೆ ಹೇಳಿದರು.

ಜಿಲ್ಲಾ ಕೈಗಾರಿಕಾ ಕೇಂದ್ರ ಕೆಸಿಟಿಯು, ಕೆಎಸ್‌ಎಂಸಿ ಅಂಡ್ ಎ ಹಾಗೂ ಎಐಟಿ ಆಶ್ರಯದಲ್ಲಿ ಇಂದು ಅಂತಿಮ ವರ್ಷದ ಎಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಒಂದು ದಿನದ ಅರಿವು ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಕೇಂದ್ರ ಸರಕಾರದ ರ್‍ಯಾಂಪ್ ಕಾರ್ಯಕ್ರಮದಡಿಯಲ್ಲಿ ಜಿಲ್ಲೆಯಲ್ಲಿ 2 ಇನ್‌ಕ್ಯೂಬೇಶನ್ ಅರಿವು ಕಾರ್ಯಾಗಾರ ನಡೆಸಬೇಕು ಎಂಬ ಸೂಚನೆಯಿದೆ. ಈ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಭವಿಷ್ಯದ ಹಿತದೃಷ್ಟಿಯಿಂದ ಎಐಟಿಯಲ್ಲಿ ಆಯೋಜಿಸಲಾಗಿದೆ ಎಂದರು.

ಭಾರತ ಕೃಷಿ ಪ್ರಧಾನ ದೇಶ. ಇಲ್ಲಿ ಶೇ.60 ರಷ್ಟು ಜನ ಕೃಷಿ ಅವಲಂಭಿಸಿದ್ದಾರೆ. ಮುಂದಿನ ಯುವಪೀಳಿಗೆ ಕೃಷಿ ಬಗ್ಗೆ ಆಸಕ್ತಿ ಕಳೆದುಕೊಳ್ಳುತ್ತಿದ್ದಾರೆ, ಪಿಯು ಶಿಕ್ಷಣ ಮುಗಿದ ಕೂಡಲೆ ಬೆಂಗಳೂರಿಗೆ ಪಯಣ ಬೆಳೆಸುತ್ತಾರೆ. ಹೀಗಾಗಿ ಉದ್ಯೋಗ ಸೃಷ್ಟಿಮಾಡಬೇಕು ಎಂಬ ಸದುದ್ದೇಶದಿಂದ ಸ್ಟಾರ್ಟ್‌ಅಪ್‌ಗಳು,



ಕೈಗಾರಿಕೆಗಳ ಮೂಲಕ ಸ್ವಯಂ ಉದ್ಯೋಗ ಸೃಷ್ಟಿಸುವ ಯೋಜನೆಯನ್ನು ಸರಕಾರ ರೂಪಿಸಿದೆ ಎಂದು ಹೇಳಿದರು.

ಶಿಕ್ಷಣ ಮುಗಿದ ಮೇಲೆ ಎಲ್ಲಿ, ಯಾರನ್ನು ಸಂಪರ್ಕಿಸಿ ಸ್ವ–ಉದ್ಯೋಗ ಹೇಗೆ ಸೃಷ್ಟಿಮಾಡಬಹುದು ಎಂಬ ಬಗ್ಗೆ ಬೀ ಕಾರ್ಯಾಗಾರದಲ್ಲಿ ಮಾಹಿತಿ ದೊರೆಯಲಿದೆ. ಇದು ಮುಂದೆ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ ಎಂದು ಹೇಳಿದರು.

ಕೈಗಾರಿಕೆ ಆರಂಭಿಸದವರೆಲ್ಲಾ ಮೊದಲೇ ದೊಡ್ಡ ಉದ್ದಿಮೆ ಸ್ಥಾಪಿಸಿದವರಲ್ಲ. ಸಣ್ಣಪುಟ್ಟ ಕೈಗಾರಿಕೆಗಳಿಂದ ಮುಂದೆ ದೊಡ್ಡ ಉದ್ದಿಮೆ ಸ್ಥಾಪಿಸಿದ್ದಾರೆ. ಇಂದಿನ ಕಾಲಮಾನದಲ್ಲಿ ಕೈಗಾರಿಕೆ ಸ್ಥಾಪಿಸಲು ಕಷ್ಟಸಾಧ್ಯವೇನಲ್ಲ. ಸಾಕಷ್ಟು ಆರ್ಥಿಕ ಸಹಾಯಧನ ದೊರೆಯಲಿದೆ. 1,2,5,10 ಲಕ್ಷದಿಂದಲೇ ಸಣ್ಣ ಪ್ರಮಾಣದಲ್ಲಿ ಕೈಗಾರಿಕೆ ಸ್ಥಾಪನೆ ಮಾಡಬಹುದು. ಹೊಸದಾಗಿ ಕೈಗಾರಿಕೆ ಸ್ಥಾಪನೆ ಮಾಡಲು ಅನುಕೂಲವಾಗುವ ನಿಟ್ಟಿನಲ್ಲಿ ಸ್ಟಾರ್ಟ್‌ಅಪ್ ಮಾಡಲು ಬ್ಯಾಂಕ್‌ಗಳು ಆರ್ಥಿಕ ಸಹಾಯಧನ ಒದಗಿಸಿಕೊಡಲಿವೆ. ಹೊಸ ಕೈಗಾರಿಕೆ ನೀತಿಯನ್ನು ಸರಕಾರ ಜಾರಿಗೆ ತಂದಿದೆ ಎಂದರು.

ಎಐಟಿ ಪ್ರಾಂಶುಪಾಲರಾದ ಡಾ.ಸಿ.ಟಿ.ಜಯದೇವ್, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಸಿ.ಎಂ. ಮಹೇಶ್‌ಕುಮಾರ್, ಲೀಡ್ ಬ್ಯಾಂಕ್ ವ್ಯವಸ್ಥಾಪಕ ಎಚ್.ಎನ್.ಮಹೇಶ್, ಡಾ.ಪ್ರಕಾಶ್‌ರಾವ್ ಮತ್ತಿತರೆ ಅಧಿಕಾರಿ ಸಿಬ್ಬಂದಿ ಉಪಸ್ಥಿತರಿದ್ದರು.

# ನಾಡಿನ ಜನತೆಗೆ ಶಾಂತಿ ನೆಮ್ಮದಿ ಕರುಣಿಸಲಿ

**ಹಾಸನ :** ರಾಜ್ಯದ ಸುಭಿಕ್ಷೆ ಜೊತೆಗೆ ನಾಡಿನ ಜನತೆಗೆ ಶಾಂತಿ ನೆಮ್ಮದಿ ಕರುಣಿಸಲಿ ಎಂದು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ತಿಳಿಸಿದ್ದಾರೆ.

ಶ್ರೀ ಹಾಸನಾಂಬ ದೇವಿ ದರ್ಶನ ಪಡೆದ ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು ಇಂದು ಶ್ರೀ ಹಾಸನಾಂಬ ಮತ್ತು ಶ್ರೀ ಸಿದ್ದೇಶ್ವರ ಸ್ವಾಮಿ ದರ್ಶನ ಪಡೆದು ಉತ್ತಮ ಮಳೆ ಬೆಳೆಯಾಗಲಿ ರೈತರು ಸಮೃದ್ಧಿಯಾಗಲಿ ಎಂದು ದೇವರಲ್ಲಿ ಪ್ರಾರ್ಥನೆ ಮಾಡಿದ್ದೇನೆ ಎಂದು ತಿಳಿಸಿದರು.

ಅದೃಷ್ಟವಶಾತ್ ಉತ್ತಮ ಮಳೆಯಾಗಿದೆ ಜಲಾಶಯಗಳು ತುಂಬಿವೆ. ಕೆಲವು ಕಡೆ ಪ್ರವಾಹ ಬಂದು ಬೆಳೆ ನಷ್ಟವಾಗಿದೆ. ರೈತರಿಗೆ ಸಹಾಯ ಮಾಡಲು ಎನ್.ಡಿ.ಆರ್.ಎಫ್ ಹಾಗೂ ಸರ್ಕಾರದ ವತಿಯಿಂದ ಒಂದು ಹೆಕ್ಟೇರ್ ಗೆ ಖುಷ್ಕಿ ಬೆಳೆಗೆ 17000, ನೀರಾವರಿ ಬೆಳೆಗೆ 25500, ಬಹು ಬೆಳೆಗೆ 31000 ಪರಿಹಾರ ನೀಡಲಾಗುತ್ತಿದೆ ಎಂದು ತಿಳಿಸಿದರು.

ರೈತರು ಬೆಳೆದ ಬೆಳೆ ಕೈಗೆ ಸಿಗಬೇಕು ಮುಂದಿನ ವರ್ಷ ಯಾವುದೇ ಹಾನಿಯಾಗದಂತೆ ದೇವರಲ್ಲಿ ಪ್ರಾರ್ಥನೆ ಮಾಡಿದ್ದೇನೆ ಎಂದು ತಿಳಿಸಿದರಲ್ಲದೆ, ದೇವಿ ದರ್ಶನಕ್ಕೆ ನಾಡಿನಾದ್ಯಂತ ಜನರು ಆಗಮಿಸುತ್ತಿದ್ದಾರೆ ಪ್ರತಿಯೊಬ್ಬರು ಹಾಸನಾಂಬ ದೇವಿ ಮತ್ತು ಶ್ರೀ ಸಿದ್ದೇಶ್ವರ ಸ್ವಾಮಿ ದರ್ಶನ



ಪಡೆಯಬೇಕು ಯಾರು ನಿರಾಸೆಯಿಂದ ಹೋಗಬಾರದು ಎಂದರು.

. ಮಂಗಳವಾರ ಶೇಕಡ 80 ರಷ್ಟು ಮಹಿಳೆಯರು ದರ್ಶನ ಪಡೆದಿದ್ದಾರೆ ಎಂದು ತಿಳಿಸಿದರಲ್ಲದೆ, ದೇವಿ ದರ್ಶನಕ್ಕೆ ಅಗತ್ಯ ಸಿದ್ಧತೆ ಮಾಡಲಾಗಿದ್ದು, ಧರ್ಮದರ್ಶನದಲ್ಲಿ ಆಗಮಿಸುವ ಭಕ್ತಾದಿಗಳಿಗೆ ಕುಡಿಯುವ ನೀರು, ಮಜ್ಜಿಗೆ, ವಾಟರ್ ಪ್ರೂಫ್ ಟೆಂಟ್, 124 ಶೌಚಾಲಯಗಳ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ಈ ಬಾರಿ ಶ್ರೀ ಸಾಮಾನ್ಯರಿಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ ಎಂದರಲ್ಲದೆ, ಬಹಳ ಶಿಸ್ತುಬದ್ಧವಾಗಿ ದರ್ಶನಕ್ಕೆ ಕ್ರಮವಹಿಸಲಾಗಿದೆ. ತಮ್ಮ ಸೂಚನೆ ಮೇರೆಗೆ ಸಾಮಾನ್ಯ ಜನರಿಗೆ ದರ್ಶನಕ್ಕೆ ಹೆಚ್ಚಿನ ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದರಲ್ಲದೆ, ಪಕ್ಷಾತೀತವಾಗಿ ಎಲ್ಲಾ ಜನಪ್ರತಿನಿಧಿಗಳು ಸಹಕಾರ ನೀಡಿದ್ದಾರೆ ಎಂದು ತಿಳಿಸಿದರು.

ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ, ಕರ್ನಾಟಕ ರಾಜ್ಯ ಗೃಹ ಮಂಡಳಿ ಅಧ್ಯಕ್ಷರು ಹಾಗೂ ಶಾಸಕರಾದ ಕೆ.ಎಂ.ಶಿವಲಿಂಗೇಗೌಡ, ಸಂಸದರಾದ ಶ್ರೇಯಸ್ ಎಂ ಪಟೇಲ್, ಜಿಲ್ಲಾಧಿಕಾರಿ ಲತಾ ಕುಮಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ಆರ್.ಪೂರ್ಣಿಮಾ ಮತ್ತಿತರರು ಹಾಜರಿದ್ದರು.

# ಕ್ರೀಡಾ ಚಟುವಟಿಕೆಗಳ ಕಾರ್ಯಕ್ರಮದ ಉದ್ಘಾಟನಾ ಸಮಾರಂಭ

**ಚಿತ್ರದುರ್ಗ:** ನಗರದ ಸರಸ್ವತಿ ವಿದ್ಯಾ ಸಂಸ್ಥೆಯಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸರಸ್ವತಿ ಕಾನೂನು ಕಾಲೇಜಿನಲ್ಲಿ 2025–26ನೇ ಸಾಲಿನ ವಿದ್ಯಾರ್ಥಿ ಕಾನೂನು ವೇದಿಕೆ, ರಾಷ್ಟ್ರೀಯ ಸೇವಾ ಯೋಜನೆ, ಮಾನವ ಹಕ್ಕುಗಳ ವೇದಿಕೆ, ರೆಡ್ ಕ್ರಾಸ್ ಘಟಕ, ಇಕೋ ಕ್ಲಬ್ ಹಾಗೂ ಕ್ರೀಡಾ ಚಟುವಟಿಕೆಗಳ ಕಾರ್ಯಕ್ರಮದ ಉದ್ಘಾಟನಾ ಸಮಾರಂಭವೂ ಅ, 15ರ ಗುರುವಾರ ಬೆಳಿಗ್ಗೆ 10.30ಕ್ಕೆ ಸರಸ್ವತಿ ಕಾನೂನು ಕಾಲೇಜಿನ ರಜತ ಮಹೋತ್ಸವ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ತುಮಕೂರಿನ ವಿಶ್ವ ವಿದ್ಯಾನಿಲಯದ ಪರೀಕ್ಷಾಂಗ ಕುಲ ಸಚಿವರಾದ ಪ್ರೋ. (ಡಾ.) ಸತೀಶ್ ಗೌಡ ಎನ್ ರವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಬೆಂಗಳೂರಿನ ವಿವೇಕಾನಂದ ಕಾನೂನು ಕಾಲೇಜಿನ ಪ್ರಾಂಶುಪಾಲರಾದ ಡಾ.ಕೆ.ಬಿ.ಕೇಂಪೇಗೌಡ ಸರಸ್ವತಿ ವಿದ್ಯಾ ಸಂಸ್ಥೆಯ ಅಧ್ಯಕ್ಷರು, ರಾಜ್ಯ ಸಭಾದ ಮಾಜಿ ಸದಸ್ಯರಾದ ಹೆಚ್,ಹನುಮಂತಪ್ಪ, ಹಿರಿಯ ವಕೀಲರು ಸರಸ್ವತಿ ವಿದ್ಯಾ ಸಂಸ್ಥೆಯ ಕಾರ್ಯದರ್ಶಿಗಳಾದ ಫಾತ್ಯಾರಾಜನ್, ಶ್ರೀಮತಿ ಡಿ.ಕೆ.ಶೀಲ ಭಾಗವಹಿಸಲಿದ್ದಾರೆ.ಸರಸ್ವತಿ ಕಾನೂನು ಕಾಲೇಜಿನ ಪ್ರಾಂಶುಪಾಲರಾದ ಪ್ರೋ.(ಡಾ.)ಎಂ.ಎಸ್. ಸುಧಾದೇವಿ ವಹಿಲಿದ್ದಾರೆ.

# ಅರ್ಜಿ ಆಹ್ವಾನ

**ದಾವಣಗೆರೆ:** ಬೀದಿ ಬದಿ ವ್ಯಾಪಾರಿಗಳ ಜೀವನೋಪಾಯ ಮತ್ತು ಅವರ ಶ್ರೇಯೋಭಿವೃದ್ಧಿ ಹಾಗೂ ಅವರ ವ್ಯಾಪಾರ, ವ್ಯವಹಾರ ಸುಧಾರಿಸುವ ನಿಟ್ಟಿನಲ್ಲಿ ಕಿರು ಸಾಲ, ಬಡ್ಡಿ ಸಹಾಯಧನ ಮತ್ತು ವಿವಿಧ ಭದ್ರತಾ ಯೋಜನೆಗಳ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ.

ಆತ್ಮ ನಿರ್ಭರ್ ಯೋಜನೆಯಡಿ ಬೀದಿ ಬದಿ ವ್ಯಾಪಾರಸ್ಥರು ಮೂರು ಹಂತಗಳಲ್ಲಿ ಸಾಲ ಮತ್ತು ಬಡ್ಡಿ ಸೌಲಭ್ಯಗಳನ್ನು ಪಡೆಯಬಹುದಾಗಿದೆ. ರೂ.15 ಸಾವಿರ, ರೂ.25 ಸಾವಿರ ಮತ್ತು ರೂ.50 ಸಾವಿರ ರೂಪಾಯಿ ಕ್ರಮವಾಗಿ ಮೂರು ಹಂತಗಳಲ್ಲಿ ಬ್ಯಾಂಕ್ ಗಳ ಮೂಲಕ ಪಡೆಯಬಹುದಾಗಿದೆ. ಆಸಕ್ತ ಬೀದಿ ಬದಿ ವ್ಯಾಪಾರಿಗಳು ವೆಬ್ ಸೈಟ್ https://pmsvanidhi.mohua.gov.in/ ಈಗಾಗಲೇ ಖಾತೆ ಹೊಂದಿರುವ ಬ್ಯಾಂಕ್ ಗಳನ್ನು ಆಯ್ಕೆ ಮಾಡಿಕೊಂಡು ಕೂಡಲೇ ಅರ್ಜಿ ಸಲ್ಲಿಸಲು ಸೂಚಿಸಿದೆ.

ಅದಷ್ಟೇ ಅಲ್ಲದೇ ಮೊದಲ ಎರಡು ಕಂತುಗಳಲ್ಲಿ ಸಾಲ ಪಡೆದು ನಿಯಮಿತವಾಗಿ ಮರುಪಾವತಿ ಮಾಡಿದ ಫಲಾನುಭವಿಗಳಿಗೆ ರೂ.30 ಸಾವಿರದವರೆಗೆ ಕ್ರೆಡಿಟ್ ಕಾರ್ಡ್ ಸೌಲಭ್ಯ ಒದಗಿಸಲಾಗುತ್ತದೆ. ಆನ್ ಲೈನ್ ಅಥವಾ ಡಿಜಿಟಲ್ ವ್ಯಾಪಾರ ನಡೆಸುವ ಚಿಲ್ಲರೆ ವಹಿವಾಟುಗಳಿಗೆ ರೂ.1200 ಮತ್ತು ಸಗಟು ವ್ಯಾಪಾರಿಗಳಿಗೆ ರೂ.400 ಕ್ಯಾಶ್ ಬ್ಯಾಕ್ ಸೌಲಭ್ಯ ಒದಗಿಸಲಾಗಿದೆ.ಅರ್ಹ ಬೀದಿ ಬದಿ ವ್ಯಾಪಾರಸ್ಥರಿಗೆ ಪಿಎಂ ಸುರಕ್ಷಾ, ಪಿಎಂ ಜೀವನ್ ಜ್ಯೋತಿ ಭೀಮಾ ಯೋಜನೆ, ಪಿಎಂ ಶ್ರಮ ಯೋಗಿ ಮಾನಧನ್ ಯೋಜನೆ, ಒನ್ ನೇಷನ್, ಒನ್ ರೇಷನ್ ಕಾರ್ಡ್ ಸೇರಿದಂತೆ ವಿವಿಧ 8 ಭದ್ರತಾ ಯೋಜನೆಗಳನ್ನು ಜಾರಿಗೊಳಿಸಲಾಗಿದೆ. ಜಿಲ್ಲೆಯ ಅರ್ಹ ಬೀದಿ ಬದಿ ವ್ಯಾಪಾರಸ್ಥರ ಕಾರ್ಡ್ ಹೊಂದದೆ ಇರುವವರು, ದಾವಣಗೆರೆ ಮಹಾನಗರ ಪಾಲಿಕೆಯಲ್ಲಿ, ಹರಿಹರ ನಗರಸಭೆಯಲ್ಲಿ, ಮಲೆಬೆನ್ನೂರು ಚನ್ನಗಿರಿ ಮತ್ತು ಹೊನ್ನಾಳಿ ಪುರಸಭೆ ಹಾಗೂ ಜಗಳೂರು ನ್ಯಾಮತಿ ತಾಲ್ಲೂಕಿನ ಪಟ್ಟಣ ಪಂಚಾಯತಿಗಳಲ್ಲಿ ಕಾರ್ಡ್ ಅಥವಾ ಪ್ರಮಾಣ ಪತ್ರ ಪಡೆಯಲು ಅವಕಾಶ ಕಲ್ಪಿಸಿದೆ. ಅರ್ಹ ಬೀದಿ ಬದಿ ವ್ಯಾಪಾರಿ ಫಲಾನುಭವಿಗಳು ಪಿಎಂ ಸ್ವ–ನಿಧಿ ಯೋಜನೆಯ ಸಂಪೂರ್ಣ ಸೌಲಭ್ಯವನ್ನು ಅದುಪಯೋಗ ಪಡೆದುಕೊಳ್ಳುವಂತೆ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದ್ದಾರೆ.

# ಜಿಲ್ಲಾ ಮಟ್ಟದ ರಸಪ್ರಶ್ನೆ ಸ್ಪರ್ಧೆಯಲ್ಲಿ ದೀಕ್ಷಿತ್ ಮತ್ತು ಕಾರ್ತಿಕ್ ಗೆ ದ್ವಿತೀಯ ಸ್ಥಾನ....



**ಶಿವಮೊಗ್ಗ:** ಕರ್ನಾಟಕ ಅರಣ್ಯ ಇಲಾಖೆ, ಶಿವಮೊಗ್ಗ ವನ್ಯಜೀವಿ ವಿಭಾಗ ಮತ್ತು ಶ್ರೀ ಆದಿಚುಂಚನಗಿರಿ ಸ್ವತಂತ್ರ ಪದವಿ ಪೂರ್ವ ಕಾಲೇಜು, ಶರಾವತಿನಗರ, ಶಿವಮೊಗ್ಗ ಇವರ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ, ಜಿಲ್ಲಾ ಮಟ್ಟದ ರಸ ಪ್ರಶ್ನೆ ಸ್ಪರ್ಧೆಯಲ್ಲಿ ಸುಮಾರು 550ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. 6 ಸುತ್ತುಗಳ ಮುಖಾಂತರ ಸೆಮಿಫೈನಲ್ ಗೆ 100 ತಂಡಗಳು ಆಯ್ಕೆಯಾಗಿದ್ದು, ಆದರಲ್ಲಿ ಶರಾವತಿ ನಗರದ ಶ್ರೀ ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್ ಶಿವಮೊಗ್ಗ ಶಾಖೆಯ ಶ್ರೀ ಆದಿಚುಂಚನಗಿರಿ ಸಂಯುಕ್ತ ಆಂಗ್ಲ ಮಾಧ್ಯಮ ಪ್ರೌಢಶಾಲೆಯ ಪ್ರತಿಭಾನ್ವಿತ ವಿದ್ಯಾರ್ಥಿಗಳಾದ ಹತ್ತನೇ ತರಗತಿಯ ದೀಕ್ಷಿತ್ ಎಂ ಎನ್.ಮತ್ತು ಕಾರ್ತಿಕ್ ಪಿ. ಈ ಪ್ರತಿಭಾನ್ವಿತರು ಜಿಲ್ಲಾ ಮಟ್ಟದ ರಸಪ್ರಶ್ನೆ ಸ್ಪರ್ಧೆಯಲ್ಲಿ ಭಾಗವಹಿಸಿ, ಮೊದಲ ಸುತ್ತಿನಿಂದ ಅಂತಿಮ ಸುತ್ತಿನವರೆಗೂ ಉತ್ತಮ ಚಾಣಾಕ್ಷತೆ, ಬುದ್ಧಿವಂತಿಕೆಯಿಂದ ಭಾಗವಹಿಸಿ, ದ್ವಿತೀಯ ಸ್ಥಾನ,15,000 ಸಾವಿರ ನಗದು ಬಹುಮಾನ,ಪ್ರಶಸ್ತಿ ಪತ್ರ ಮತ್ತು ಅತ್ಯಾಕರ್ಷಕ ಟ್ರೋಫಿಯನ್ನು ತಮ್ಮದಾಗಿಸಿ ಕೊಂಡಿರುತ್ತಾರೆ. ಹಾಗೂ ಸಾನ್ವಿ ವಿ. ಭಾರದ್ವಾಜ್ ಮತ್ತು ತಿಷಾರಾಜ್ ಪುರೋಹಿತ್ ಇವರು 5ನೇ ಸ್ಥಾನ ಪಡೆಯುವುದರ ಮೂಲಕ ಸಂಸ್ಥೆಗೂ ಹಾಗೂ ಜಿಲ್ಲೆಗೂ ಕೀರ್ತಿ ತಂದುಕೊಟ್ಟಿರುತ್ತಾರೆ.

ಈ ಪ್ರತಿಭಾನ್ವಿತ ವಿದ್ಯಾರ್ಥಿಗಳು ಮುಂದಿನ ಸ್ಪರ್ಧೆಗಳಲ್ಲಿ ಉತ್ತಮ ಸಾಧನೆ ಮಾಡಲಿ ಎಂದು ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪ್ರಧಾನ ಕಾರ್ಯದರ್ಶಿಗಳಾದ ಪೂಜ್ಯ ಶ್ರೀ ಶ್ರೀ ಪ್ರಸನ್ನನಾಥ ಸ್ವಾಮೀಜಿಯವರು,ಪೂಜ್ಯ ಶ್ರೀಶ್ರೀ ನಾದಮಯಾನಂದನಾಥ ಸ್ವಾಮೀಜಿಯವರು, ಸಂಸ್ಥೆಯ ಆಡಳಿತ ಮಂಡಳಿಯ ಸದಸ್ಯರು, ಪ್ರಾಂಶುಪಾಲರಾದ ದಿವ್ಯ ಕರಣಮ್ ಹಾಗೂ ಅಧ್ಯಾಪಕ ವೃಂದದವರು, ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿಗಳು ಶುಭ ಹಾರೈಸಿದ್ದಾರೆ.

# ಸಾರ್ವಕಾಲಿಕ ದಾಖಲೆ ಬರೆದ ಚಿನ್ನ, ಬೆಳ್ಳಿ ಬೆಲೆ

ನವದೆಹಲಿ,ಅ.15– ರಾಷ್ಟ್ರ ರಾಜಧಾನಿ ಯಲ್ಲಿ ಚಿನ್ನದ ಬೆಲೆ ಒಂದೇ ದಿನದಲ್ಲಿ 2,850 ರೂ. ಏರಿಕೆಯಾಗುವುದರ ಮೂಲಕ 10 ಗ್ರಾಂಗೆ 1,30,800 ರೂ. ತಲುಪಿದೆ. ಧಂತೇರಾಸ್ ಹಬ್ಬದ ಹಿನ್ನೆಲೆಯಲ್ಲಿ ಚಿಲ್ಲರೆ ವ್ಯಾಪಾರಿಗಳು ಮತ್ತು ಆಭರಣ ವ್ಯಾಪಾರಿಗಳಿಂದ ಭಾರೀ ಪ್ರಮಾಣದಲ್ಲಿ ಹಬ್ಬದ ಖರೀದಿ ನಡೆದಿದೆ. ಅಖಿಲ ಭಾರತ ಸರಾಫಾ ಸಂಘದ ಪ್ರಕಾರ, 99.9 ಪ್ರತಿಶತ ಶುದ್ಧತೆಯ ಅಮೂಲ್ಯ ಲೋಹ ಸೋಮವಾರ 10 ಗ್ರಾಂಗೆ 1,27,950 ರೂ.ಗೆ ಮುಕ್ತಾಯಗೊಂಡಿತ್ತು.99.5 ಪ್ರತಿಶತ ಶುದ್ಧ ಚಿನ್ನವು ಮಂಗಳವಾರ 2,850 ರೂ. ಏರಿಕೆಯಾಗಿ 10 ಗ್ರಾಂಗೆ (ಎಲ್ಲಾ ತೆರಿಗೆಗಳನ್ನು ಒಳಗೊಂಡಂತೆ) ದಾಖಲೆಯ 1,30,200 ರೂ. ತಲುಪಿದೆ. ಇಲ್ಲಿವರೆಗೆ ಬಂಗಾರದ ಬೆಲೆ ಅಂದರೆ 2024ರ ಡಿಸೆಂಬರ್‌ನಿಂದ ಇಲ್ಲಿಯವರೆಗೆ ಶೇ.65.67ರಷ್ಟು ಏರಿಕೆಯಾಗಿದೆ. ಜಾಗತಿಕ ರಾಜಕೀಯ ಕಾರಣಗಳು, ಪೂರೈಕೆ ನಿರ್ಬಂಧಗಳು ಮತ್ತು ಬಲವಾದ ದೇಶೀಯ ಹೂಡಿಕೆ ಬೇಡಿಕೆ ಹಾಗೂ ದುರ್ಬಲ ರೂಪಾಯಿಯಿಂದ ಚಿನ್ನ ಮತ್ತು ಬೆಳ್ಳಿ ಹೊಸ ಗರಿಷ್ಠ ಮಟ್ಟವನ್ನು ತಲುಪಿವೆ. ಏರಿಕೆಯ ಪ್ರವೃತ್ತಿ ಹಾಗೇ ಮುಂದುವರೆದಿದೆ.ಬೆಳ್ಳಿ ಕೂಡ 6,000 ರೂ.ಗಳಷ್ಟು ಏರಿಕೆಯಾಗಿ ಪ್ರತಿ ಕಿಲೋಗ್ರಾಂಗೆ 1,85,000 ರೂ.ಗಳ ಜೀವಮಾನದ ಗರಿಷ್ಠ ಮಟ್ಟ ತಲುಪಿದೆ (ಎಲ್ಲಾ ತೆರಿಗೆಗಳನ್ನು ಒಳಗೊಂಡಂತೆ), ಇದು ಸತತ 5ನೇ ದಿನದ ಏರಿಕೆಯನ್ನು ಸೂಚಿಸುತ್ತದೆ. ಹಿಂದಿನ ಮಾರುಕಟ್ಟೆ ಅವಧಿಯಲ್ಲಿ ಬಿಳಿ ಲೋಹವು ಪ್ರತಿ ಕೆಜಿಗೆ 1,79,000 ರೂ.ಗಳಲ್ಲಿ ಸ್ಥಿರವಾಗಿತ್ತು. ರೂಪಾಯಿ ಕುಸಿತವೇ ಬೆಲೆ ಏರಿಕೆಗೆ ಕಾರಣ:ಹಬ್ಬ ಮತ್ತು ಮದುವೆ ಋತುವಿಗೆ ಮುಂಚಿತವಾಗಿ ಆಭರಣ ವ್ಯಾಪಾರಿಗಳು ಮತ್ತು ಚಿಲ್ಲರೆ ವ್ಯಾಪಾರಿಗಳಿಂದ ನಿರಂತರ ಬೇಡಿಕೆ ಹೆಚ್ಚಾಗಿದೆ. ಸಾರ್ವಕಾಲಿಕ ಕನಿಷ್ಠ ಮಟ್ಟಕ್ಕೆ ಮರಳಿದ್ದು, ಬೆಳ್ಳಿ ಬೆಲೆಯಲ್ಲಿ ತೀವ್ರ ಏರಿಕೆಗೆ ಕಾರಣ ಎಂದು ವ್ಯಾಪಾರಿಗಳು ಹೇಳಿದ್ದಾರೆ.

# ಕೆ.ಪಿ.ಎಸ್.ಶಾಲೆ ಗಾದಿಗನೂರು ಎಸ್.ಡಿ.ಎಂ.ಸಿ ಅಧ್ಯಕ್ಷರಾಗಿ ಕೆ.ಎಸ್.ಮಲಿಯಪ್ಪ ಆಯ್ಕೆ,



**ಹೊಸಪೇಟೆ:** ತಾಲ್ಲೂಕಿನ ಗಾದಿಗನೂರು ಪ್ರಾಥಮಿಕ, ಪ್ರೌಢ, ಹಾಗೂ ಪದವಿ ಪೂರ್ವ ಕಾಲೇಜ್ ಒಳಗೊಂಡಂತೆ ಕೆ.ಪಿಎಸ್.ಶಾಲೆಗೆ ಶಾಸಕರಾದ ಶ್ರೀ ಹೆಚ್.ಆರ್.ಗವಿಯಪ್ಪ ರವರ ಶಿಫಾರಸ್ಸಿನ ಮೇರೆಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಶೇಖರಪ್ಪ ಹೊರಪೇಟೆ ರವರು ಗಾದಿಗನೂರು ಗ್ರಾಮದ ಶ್ರೀ ಕೆ.ಎಸ್. ಮಲಿಯಪ್ಪ ರವರನ್ನು ಮುಂದಿನ ಆದೇಶದವರೆಗೆ ನೂತನ ಎಸ್.ಎಇ.ಎಂ.ಸಿ ಅಧ್ಯಕ್ಷರಾಗಿ ಆದೇಶ ಹೊರಡಿಸಿರುತ್ತಾರೆ.


ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿದ್ದಕ್ಕೆ ಸಮಾಜ ಸೇವಕರಾದ ಶ್ರೀ ಗುರುದತ್ತರವರು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ನೌಕರರ ಸಂಘ ಪದಾಧಿಕಾರಿಗಳು, ಶಿಕ್ಷಕರು, ಗಾದಿಗನೂರು ಗ್ರಾಮದ ಶಿಕ್ಷಣ ಪ್ರೇಮಿಗಳು ಅಭಿನಂದಿಸಿ ಶುಭ ಕೋರಿರುತ್ತಾರೆ.

# ವರದಾನವಾಯಿತು ಶಕ್ತಿ ಯೋಜನೆ, ಶೇ.80 ರಷ್ಟು ಮಹಿಳಾ ಭಕ್ತರಿಂದಲೇ ಹಾಸನಾಂಬ ದರ್ಶನ

**ಹಾಸನ:** ವರ್ಷಕ್ಕೊಮ್ಮೆ ದರ್ಶನ ಭಾಗ್ಯ ನೀಡುವ ಶಕ್ತಿ ದೇವತೆ ಹಾಸನಾಂಬ ದರ್ಶನಕ್ಕೆ ರಾಜ್ಯದ ವಿವಿಧ ಮೂಲಗಳಿಂದ ಲಕ್ಷಾಂತರ ಮಹಿಳಾ ಭಕ್ತರು ಆಗಮಿಸುತ್ತಿದ್ದು, ಶಕ್ತಿ ಯೋಜನೆ ವರದಾನವಾಗಿದೆ.ಸಾರ್ವಜನಿಕ ದರ್ಶನ ಪ್ರಾರಂಭವಾದ ಕಳೆದ 6 ದಿನಗಳಿಂದ ಭೇಟಿ ನೀಡಿದ ಭಕ್ತರಲ್ಲಿ ಶೇ.80 ರಷ್ಟು ಮಹಿಳಾ ಭಕ್ತರೆ ಇದ್ದಾರೆ. ಸಾರಿಗೆ ಬಸ್‌ಗಳಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣ ಸೌಲಭ್ಯವಿರುವುದರಿಂದ ಕಳೆದ ವರ್ಷಕ್ಕಿಂತ ಈ ಭಾರಿ ಭಕ್ತರ ಸಂಖ್ಯೆ ಹೆಚ್ಚಳವಾಗಿದೆ.

ಉತ್ತರ ಕರ್ನಾಟಕ ಭಾಗದ ಹುಬ್ಬಳ್ಳಿ, ರಾಯಚೂರು, ಯಾದಗಿರಿ,ದಾರವಾಡ, ಚಿತ್ರದುರ್ಗ, ತುಮಕೂರು, ಕೋಲಾರ, ಮೈಸೂರು, ಮಂಡ್ಯ, ಚಿಕ್ಕಬಳ್ಳಾಪುರ ಸೇರಿದಂತೆ ವಿವಿಧ ಜಿಲ್ಲೆ ,ತಾಲ್ಲೂಕುಗಳಿಂದ ಅಪಾರ ಸಂಖ್ಯೆಯಲ್ಲಿ ಭಕ್ತರು ಆಗಮಿಸುತ್ತಿದ್ದಾರೆ.

ಅ.10 ರಿಂದ 15 ರ ವರೆಗೆ ಸುಮಾರು 8,84,503 ಭಕ್ತರು ದೇವಿಯ ದರ್ಶನ ಪಡೆದಿದ್ದಾರೆ. ಮಳೆ, ಗಾಳಿ, ಹಗಲು–ರಾತ್ರಿ ಲೆಕ್ಕಿಸದೇ ಸರದಿ ಸಾಲಿನಲ್ಲಿ ನಿಂತು ದರ್ಶನ ಪಡೆದು ಪುನೀತರಾಗಿದ್ದಾರೆ. ಈ ಭಾರಿ ಜಿಲ್ಲಾಡಳಿತ ವತಿಯಿಂದ ಬಹಳ ಅಚ್ಚುಕಟ್ಟಾಗಿ ದರ್ಶನಕ್ಕೆ ವ್ಯವಸ್ಥೆ ಮಾಡಿದ್ದು, ನಿರಾಸದಾಯಕವಾಗಿ ದರ್ಶನ ಪಡೆಯುತ್ತಿದ್ದಾರೆ.



ಇನ್ನು 7 ದಿನಗಳ ಕಾಲ ದರ್ಶನಕ್ಕೆ ಅವಕಾಶವಿದ್ದು, ನಿರೀಕ್ಷೆಗೂ ಮೀರಿ ಭಕ್ತರು ಆಗಮಿಸುವ ನಿರೀಕ್ಷೆ ಇದೆ.ಈ ಭಾರಿ ಚಲನಚಿತ್ರ ನಟ–ನಟಿಯರು ,ಜನಪ್ರತಿನಿಧಿಗಳು, ಗಣ್ಯರು ಭೇಟಿ ನೀಡಿ ಶಿಸ್ತಾಗಿ ಶಿಷ್ಟಾಚಾರ ಪಾಲನೆ ಮಾಡುತ್ತಾ ದರ್ಶನ ಪಡೆದಿದ್ದಾರೆ.

ದೇವಿಯ ಅಲಂಕಾರ ಬದಲಾವಣೆ ಹಿನ್ನೆಲೆಯಲ್ಲಿ ಇಂದು ಮಧ್ಯಾಹ್ನ 2 ರಿಂದ 3.30 ರ ವರೆಗೆ ದರ್ಶನ ವಿರಲಿಲ್ಲ. ಅದೆ ರೀತಿ ರಾತ್ರಿ 12 ರಿಂದ ಬೆಳಗ್ಗೆ 5 ರವರೆಗೆ ದರ್ಶನ ಸೌಲಭ್ಯವಿರುವುದಿಲ್ಲ.

ಪುನಃ ನಾಳೆ ಬೆಳಗ್ಗೆ ಎಂದಿನಂತೆ ದರ್ಶನ ಸಾಗಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಕೃಷ್ಣಬೈರೇಗೌಡ ರವರು ತಿಳಿಸಿದ್ದಾರೆ.

# ಯುವಪೀಳಿಗೆ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಕರೆ









**ರಾಮನಗರ:** ಶಿಕ್ಷಣದೊಂದಿಗೆ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವ ಅಗತ್ಯ ಯುವಜನಾಂಗ ಹಿಂದೆದಿಗಿಂತಲೂ ಇದೀಗ ಹೆಚ್ಚು ಅನಿವಾರ್ಯವಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸತೀಶ್ ಅವರು ಅಭಿಪ್ರಾಯಪಟ್ಟರು.

ಅವರು ಅ.15 ರ ಬುಧವಾರ ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ನೆಹರು ಯುವ ಕೇಂದ್ರದ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ 2025–26ನೇ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಯುವಜನಾಂಗದವರ ಭಾಗವಹಿಸುವಿಕೆ ಕಡಿಮೆಯಾಗುತ್ತಿದೆ, ಶಿಕ್ಷಣದೊಂದಿಗೆ ಯುವಕರು, ಯುವತಿಯರು ವಿವಿಧ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡರೆ ಮಾನಸಿಕವಾಗಿ ಹೆಚ್ಚು ಬಲಾಡ್ಯರಾಗುತ್ತಾರೆ, ಇತರೆ ಚಟುವಟಿಕೆಗಳ ಕಡೆಗಿನ ಗಮನ ಕಡಿಮೆಯಾಗಿ, ಜೀವನದಲ್ಲಿ ಏಳಿಗೆಗೆ ಕಾರಣವಾಗಲಿದೆ ಎಂದರು.

ಜೀವನದಲ್ಲಿ ಸಾಂಸ್ಕೃತಿಕ ಕಾರ್ಯಕ್ರಗಳು, ಕ್ರೀಡೆಗಳು ಅವಶ್ಯಕ. ಯುವಕರು ಸನ್ಮಾರ್ಗದಲ್ಲಿ ನಡೆದು ಇತರರಿಗೆ ಸಹಾಯ ಮಾಡುವುದರ ಜೊತೆಗೆ ಸಮಾಜಕ್ಕೆ ಒಳ್ಳೆಯ ಕೊಡುಗೆಯನ್ನು ನೀಡಬೇಕು, ಸಮಾಜ ನಮಗೇ ಏನು ನೀಡಿದೆ ಎನ್ನುವುದಕ್ಕಿಂತ ಸಮಾಜಕ್ಕೆ ನಾವು ಏನು ಮಾಡಿದ್ದೇವೆ ಎನ್ನುವುದು ಬಹಳ ಮುಖ್ಯ, ಯುವಕ, ಯುವತಿಯರು ಸ್ಪರ್ಧಾತ್ಮಕ ಪರೀಕ್ಷೆಗಳ ಕಡೆ ಹೆಚ್ಚು ಗಮನ ಕೊಟ್ಟರೆ ಭವಿಷ್ಯದಲ್ಲಿ ಉತ್ತಮ ಜೀವನ ದೊರೆಯುತ್ತದೆ ಎಂದರು.

ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಅನಿತಾ ಅವರು ಮಾತನಾಡಿ, ಸಂಸ್ಕೃತಿ ಉಳಿಸಿ, ಬೆಳೆಸುವಲ್ಲಿ ಯುವ ಜನತೆಯ ಪಾತ್ರ ಬಹುಮುಖ್ಯವಾಗಿದೆ. ಈ ನಿಟ್ಟಿನಲ್ಲಿ ಯುವ ಜನರು ನಾಟಕ, ನೃತ್ಯ, ಜನಪದ ಸಂಗೀತ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ತಮ್ಮ ಪ್ರತಿಭೆ ಪ್ರದರ್ಶಿಸಬೇಕು ಎಂದು ತಿಳಿಸಿದರು.

ಯುವಜನೋತ್ಸವ ಕಾರ್ಯಕ್ರಮದಲ್ಲಿ ಸುಮಾರು 350ಕ್ಕೂ ಹೆಚ್ಚು ವಿದ್ಯಾರ್ಥಿ, ವಿದ್ಯಾರ್ಥಿನಿಯರು ಸ್ಪರ್ಧಿಯಾಗಿ ಭಾಗವಹಿಸಿದ್ದಾರೆ. ಸ್ಪರ್ಧೆಯಲ್ಲಿ ಜನಪದ ಗೀತೆ, ಜನಪದ ನೃತ್ಯ, ಸ್ಟೋರಿ ರೈಟಿಂಗ್, ಕವಿತೆ ಬರೆಯುವುದು, ಘೋಷಣೆ, ವಿಜ್ಞಾನ ಮೇಳ ಹೀಗೆ ಹಲವು ಕಾರ್ಯಕ್ರಮಗಳನ್ನು ಆಯೋಜಿಸಿ ವಿದ್ಯಾರ್ಥಿಗಳ ಸುಪ್ತ ಪ್ರತಿಭೆ ಅನಾವರಣಕ್ಕೆ ವೇದಿಕೆ ಒದಗಿಸಲಾಗಿದೆ ಎಂದರು.

ಅಂಬೇಡ್ಕರ್ ಭವನದಲ್ಲಿ ಜನಪದ ನೃತ್ಯ, ಜನಪದ ಗೀತೆಗೆ ವೇದಿಕೆ ಕಲ್ಪಿಸಲಾಗಿದೆ. ಭಾರತೀಯ ವಿದ್ಯಾಪೀಠದಲ್ಲಿ ಕವಿತೆ ವಾಚನ, ಕವನ ಬರೆಯುವ, ಕಥೆ ಬರೆಯುವ ಸ್ಪರ್ಧೆ, ಚಿತ್ರಕಲೆ, ವಿಜ್ಞಾನ ಮೇಳ ಹತ್ತು ಹಲವು ರೀತಿಯ ಸ್ಪರ್ಧೆ ಆಯೋಜಿಸಲಾಗಿದೆ ಎಂದು ಮಾಹಿತಿ ನೀಡಿದರು.

ಈ ಸ್ಪರ್ಧೆಗಳಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಪಡೆದ ಸ್ಪರ್ಧಿಗಳು ರಾಜ್ಯಮಟ್ಟದ ಯುವಜನೋತ್ಸವಕ್ಕೆ ಆಯ್ಕೆಗೊಳ್ಳುತ್ತಾರೆ. ಯಾದಗಿರಿ ಜಿಲ್ಲೆಯಲ್ಲಿ ರಾಜ್ಯಮಟ್ಟದ ಸ್ಪರ್ಧೆ ನಡೆಯಲಿದ್ದು, ಅಲ್ಲಿ ವಿಜೇತರಾವರು ರಾಷ್ಟ್ರೀಯ ಮಟ್ಟಕ್ಕೆ ಅರ್ಹರಾಗುತ್ತಾರೆ. ಬೆಂಗಳೂರು ದಕ್ಷಿಣ ಜಿಲ್ಲೆಯ ನಾಲ್ಕು ತಾಲ್ಲೂಕುಗಳಿಂದ ಆಗಮಿಸಿರುವ ಸ್ಪರ್ಧಿಗಳು ಉತ್ಸುಕರಾಗಿ ಭಾಗವಹಿಸಿ, ಕಾರ್ಯಕ್ರಮ ಯಶಸ್ವಿಗೊಳಿಸಿದ್ದಾರೆ. ಎಲ್ಲ ಸ್ಪರ್ಧಿಗಳಿಗೆ ಹಾಗೂ ತೀರ್ಪುಗಾರರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ದೈಹಿಕ ವಿಷಯ ಅಧಿಕಾರಿ ಸುಂದರ್ ಗೌಡ, ಜಾನಪದ ಕಲೆಗಳ ಪರಿಣಿತರಾದ ಕುರುವ ಬಸವರಾಜ್, ರಾಜ್ಯಯುವ ಪ್ರಶಸ್ತಿ ವಿಜೇತರಾದ ಹನುಮಂತ ನಾಯ್ಕ, ಬ್ಯಾಡರಹಳ್ಳಿ ಶಿವಕುಮಾರ್, ನಮನ ಚಂದ್ರು ಹಾಗೂ ಇತರರು ಉಪಸ್ಥಿತರಿದ್ದರು.

# 2027 ರೊಳಗೆ ಕುಷ್ಠರೋಗ ಮುಕ್ತ ಜಿಲ್ಲೆಯನ್ನಾಗಿಸಿ

**ರಾಮನಗರ:** ಜಿಲ್ಲೆಯಲ್ಲಿ ನವೆಂಬರ್ 03 ರಿಂದ 19ರ ವರೆಗೆ ಕುಷ್ಠರೋಗ ಪ್ರಕರಣ ಪತ್ತೆ ಹಚ್ಚುವ ಆಂದೋಲನವನ್ನು ಹಮ್ಮಿಕೊಳ್ಳಲಾಗಿದೆ, ಪ್ರಾಥಮಿಕ ಹಂತದಲ್ಲೇ ಕುಷ್ಠರೋಗ ಪ್ರಕರಣಗಳನ್ನು ಪತ್ತೆಹಚ್ಚಿ, ಚಿಕಿತ್ಸೆ ನೀಡಿ ಗುಣಮುಖರನ್ನಾಗಿಸುವ ಮೂಲಕ ಬೆಂಗಳೂರು ದಕ್ಷಿಣ ಜಿಲ್ಲೆಯನ್ನು 2027ರೊಳಗೆ ಕುಷ್ಠರೋಗ ಮುಕ್ತ ಜಿಲ್ಲೆಯನ್ನಾಗಿಸಲು ಕ್ರಮ ಕೈಗೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಅವರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಅವರು ಅ.15ರ ಬುಧವಾರ ನಗರದ ಜಿಲ್ಲಾಧಿಕಾರಿ ಕಚೇರಿ ಸಂಕೀರ್ಣದಲ್ಲಿರುವ ಅಪರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಕುಷ್ಠರೋಗ ಪ್ರಕರಣ ಪತ್ತೆ ಹಚ್ಚುವ ಆಂದೋಲನ ಕಾರ್ಯಕ್ರಮ ಅನುಷ್ಠಾನ ಕುರಿತ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕಳೆದ 5 ವರ್ಷಗಳಲ್ಲಿ ಜಿಲ್ಲೆಯಲ್ಲಿ 74 ಕುಷ್ಠರೋಗ ಪ್ರಕರಣಗಳು ಕಂಡುಬಂದಿದ್ದು, ಇವರಿಗೆ ಸೂಕ್ತ ಚಿಕಿತ್ಸೆ ನೀಡಲಾಗಿದೆ, 60 ಪ್ರಕರಣಗಳಲ್ಲಿ ಕುಷ್ಠರೋಗದಿಂದ ಸಂಪೂರ್ಣ ಗುಣಮುಖ ಹೊಂದಿರುತ್ತಾರೆ. ಪ್ರಸ್ತುತ 14 ಸಕ್ರಿಯ ಕುಷ್ಠರೋಗ ಪ್ರಕರಣಗಳಿದ್ದು, ಉಚಿತ ಹಾಗೂ ಗುಣಮಟ್ಟದ ಚಿಕಿತ್ಸೆ ನೀಡಲಾಗುತ್ತಿದೆ ಎಂದು ತಿಳಿಸಿದರು.



ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನದ ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದಲ್ಲಿ ಜಿಲ್ಲೆಯಲ್ಲಿ ಕುಷ್ಠರೋಗ ಪ್ರಕರಣ ಪತ್ತೆ ಹಚ್ಚುವ ಆಂದೋಲನವನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಈ ಕಾರ್ಯಕ್ರಮದಡಿ 74 ಕುಷ್ಠರೋಗ ಪ್ರಕರಣಗಳು ಕಂಡುಬಂದ 85 ಹಳ್ಳಿಗಳಿಗೆ ಆರೋಗ್ಯ ಇಲಾಖೆ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು ಭೇಟಿ ನೀಡಿ ಸಮೀಕ್ಷೆ ಕೈಗೊಂಡು ಕುಷ್ಠರೋಗ ಸಂಪರ್ಕಿತರನ್ನು ಪರೀಕ್ಷಿಸಲಿದ್ದಾರೆ ಎಂದು ತಿಳಿಸಿದರು.

ಕುಷ್ಠರೋಗಗಳಿಗೆ ಸರ್ಕಾರದಿಂದ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಒದಗಿಸಲು ಕ್ರಮವಹಿಸಬೇಕು ಎಂದ ಅವರು ಪ್ರಾಥಮಿಕ ಹಂತದಲ್ಲೇ ಕುಷ್ಠರೋಗವನ್ನು ಗುರುತಿಸಿ, ರೋಗಿಯು ನಿಯಮಿತವಾಗಿ ಚಿಕಿತ್ಸೆ ಪಡೆದಲ್ಲಿ (ಎಂ.ಡಿ.ಟಿ) ಸಂಪೂರ್ಣವಾಗಿ ಕುಷ್ಠರೋಗವನ್ನು ಗುಣಪಡಿಸಬಹುದು. ಕುಷ್ಠರೋಗವು ಮೈಕೋಬ್ಯಾಕ್ಟಿರಿಯಂ ಲೆಪ್ರ ಎಂಬ ರೋಗಾಣುವಿನಿಂದ ಉಂಟಾಗುವ ಸಾಂಕ್ರಾಮಿಕ ರೋಗ. ಇದು ಮುಖ್ಯವಾಗಿ ನರಗಳು ಹಾಗೂ ಚರ್ಮದ ಮೇಲೆ ಪರಿಣಾಮ ಬೀರುತ್ತದೆ. ಚರ್ಮದ ಮೇಲ್ಭಾಗದಲ್ಲಿ ಮಚ್ಚೆಗಳು, ಗಂಟುಗಳು, ಹುಣ್ಣುಗಳು ಕಂಡಬಂದಲ್ಲಿ ಸಮೀಪದ ಸರ್ಕಾರ ಆರೋಗ್ಯ ಸಂಸ್ಥೆಗೆ ಭೇಟಿ ನೀಡಿ ಪರೀಕ್ಷಿಸಿಕೊಳ್ಳಬಹುದು. ಕುಷ್ಠರೋಗ ಪ್ರಕರಣ ಪತ್ತೆಯಾದಲ್ಲಿ ಸರ್ಕಾರದಿಂದ ಉಚಿತವಾಗಿ ಚಿಕಿತ್ಸೆ ದೊರೆಯಲಿದೆ ಎಂದರು.

ಸಭೆಯಲ್ಲಿ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ಕುಮಾರ್ ಸೇರಿದಂತೆ ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಹಾಗೂ ಆರೋಗ್ಯ ಇಲಾಖೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಮುಖ್ಯಮಂತ್ರಿಗಳ ಪ್ರವಾಸ

**ಚಿಕ್ಕಬಳ್ಳಾಪುರ:** ನವೆಂಬರ್ 8ನೇ ತಾರೀಕು ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಚಿಕ್ಕಬಳ್ಳಾಪುರ ಜಿಲ್ಲಾ ಪ್ರವಾಸ ಕೈಗೊಂಡು 1000 ಕೋಟಿಗೂ ಹೆಚ್ಚು ವೆಚ್ಚದ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಲಿದ್ದಾರೆ ಎಂದು ಉನ್ನತ ಶಿಕ್ಷಣ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ ಸಿ ಸುಧಾಕರ್ ಅವರು ತಿಳಿಸಿದರು.

ಅವರು ಬುಧವಾರ ಇಲ್ಲಿನ ಜಿಲ್ಲಾಡಳಿತ ಭವನದ ಸರ್. ಎಂ.ವಿ ಸಭಾಂಗಣದಲ್ಲಿ ನಡೆದ "ಮುಖ್ಯಮಂತ್ರಿಗಳ ಪ್ರವಾಸ ಕಾರ್ಯಕ್ರಮದ ಪೂರ್ವ ಭಾವಿ" ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಅಧಿಕಾರಿಗಳಿಂದ ಮಾಹಿತಿ ಪಡೆದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು.

ಸರ್ಕಾರ ಕಳೆದ ಎರಡುವರೆ ವರ್ಷಗಳಲ್ಲಿ ಜಿಲ್ಲೆಯಲ್ಲಿ ಏನೆಲ್ಲ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ಅದರ ವಿವರ ಹಾಗೂ ಉದ್ಘಾಟನೆಗೆ ಸಿದ್ಧವಾಗಿರುವ ಎಲ್ಲಾ ಕಾಮಗಾರಿಗಳ ವಿವರವನ್ನು ನೀಡಬೇಕು. ಲೋಕಾರ್ಪಣೆ ಹಾಗೂ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕು ಸ್ಥಾಪನೆ ಕಾರ್ಯಕ್ರಮವನ್ನು ಮಾನ್ಯ ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು ಹಾಗೂ ಸಂಬಂಧಪಟ್ಟ ಇಲಾಖೆಯ ಸಚಿವರ ಸಮ್ಮುಖದಲ್ಲಿ ಚಾಲನೆ ನೀಡಲು ಸಕಲ ಸಿದ್ಧತೆಗಳನ್ನು ಶಿಷ್ಟಾಚಾರದ ರೀತ್ಯಾ ಮಾಡಿಕೊಳ್ಳಬೇಕು. ಕೇಂದ್ರ ಹಾಗೂ ರಾಜ್ಯ ಸರ್ಕಾರದ ಅನುದಾನದಲ್ಲಿ



ನಿರ್ಮಾಣವಾಗಿರುವ ಕಾಮಗಾರಿಗಳ ಶಂಕುಸ್ಥಾಪನೆ ಅಡಿಗಲ್ಲಿನಲ್ಲಿ ಹೆಸರುಗಳು ಶಿಷ್ಟಾಚಾರದ ರೀತ್ಯಾ ಇರಬೇಕು. ಸ್ಥಳೀಯ ಸಂಸದರು,

ಜನಪ್ರತಿನಿಧಿಗಳು ಸಂಬಂಧಪಟ್ಟ ಸಚಿವರನ್ನು ಆಹ್ವಾನಿಸಬೇಕು. ವೇದಿಕೆ ಕಾರ್ಯಕ್ರಮಗಳು ಶಿಷ್ಟಾಚಾರದ ರೀತ್ಯಾ ಆಯೋಜನೆ ಆಗಬೇಕು ಎಂದು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಆಹ್ವಾನ ಪತ್ರಿಕೆ ಮುದ್ರಣ,ವಿತರಣೆ, ವೇದಿಕೆ ಸಿದ್ಧತೆ,ಅಲಂಕಾರ, ಮೂಲಭೂತ ಸೌಕರ್ಯಗಳ ವ್ಯವಸ್ಥೆ,ಸಂಚಾರ ದಟ್ಟಣೆ ನಿಯಂತ್ರಣ, ಆಸನ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ, ಭದ್ರತಾ ವ್ಯವಸ್ಥೆ ಸೇರಿದಂತೆ ಸಕಲ ವ್ಯವಸ್ಥೆಗಳನ್ನು ಸಮರ್ಪಕವಾಗಿ ನಿರ್ವಹಿಸಲು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕಾರ್ಯಕ್ರಮದಲ್ಲಿ 1000 ಕೋಟಿ ಹೆಚ್ಚು ವೆಚ್ಚದ ಕಾಮಗಾರಿಗಳಿಗೆ ಚಾಲನೆ ನೀಡಲು ಯೋಜಿಸಲಾಗಿದೆ ಮುಖ್ಯವಾಗಿ ಶಿಡ್ಲಘಟ್ಟ ತಾಲೂಕಿನಲ್ಲಿ 200 ಕೋಟಿ ವೆಚ್ಚದ ಹೈಟೆಕ್ ರೇಷ್ಮೆಗೂಡು ಮಾರುಕಟ್ಟೆ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ, 237 ಕೋಟಿ ವೆಚ್ಚದ ಹೆಚ್ ಎನ್ ವ್ಯಾಲಿ ಮತ್ತು ಕೆ ಸಿ ವ್ಯಾಲಿಯ ನೀರಾವರಿ ಕಾಮಗಾರಿಗಳಿಗೆ ಚಾಲನೆ, ಗಂಟಲಮಲ್ಲಮ್ಮ ಮತ್ತು ರಾಮಸಮುದ್ರ

ನೀರಾವರಿ ಯೋಜನೆಗಳಿಗೂ ಅಂದು ಚಾಲನೆ ದೊರೆಯಲಿದೆ ಅಲ್ಲದೆ ಲೋಕೋಪಯೋಗಿ ಇಲಾಖೆಯಡಿ ಹಾಗೂ ಜಲ್ ಜೀವನ್ ಮಿಷನ್ ಯೋಜನೆಯಡಿ ನಿರ್ಮಾಣವಾಗಿರುವ ವಿವಿಧ ಕಾಮಗಾರಿಗಳು ಚಾಲನೆಯಾಗಲಿವೆ ಒಟ್ಟಾರೆ ಒಂದು ಸಾವಿರಕ್ಕೂ ಹೆಚ್ಚು ಮೆಚ್ಚದ ಕಾಮಗಾರಿಗಳಿಗೆ ಅಂದು ಚಾಲನೆ ದೊರೆಯಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶಾಸಕ ರವಿಕುಮಾರ್, ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ವೈ. ನವೀನ್ ಭಟ್, ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ, ಅಪರ ಜಿಲ್ಲಾಧಿಕಾರಿ ಡಾ.ಎನ್.ಭಾಸ್ಕರ್, ಉಪವಿಭಾಗಾಧಿಕಾರಿ ಡಿ.ಹೆಚ್. ಅಶ್ವಿನ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಗಿರೀಶ್ ಹಾಗೂ ವಿವಿಧ ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ದೇವೀರಮ್ಮ ಜಾತ್ರೋತ್ಸವಕ್ಕೆ ಕೆಎಸ್ ಆರ್ ಟಿ.ಸಿ ಬಸ್ ವ್ಯವಸ್ಥೆ

**ಚಿಕ್ಕಮಗಳೂರು:** ಬಿಂಡಿಗಾ ಮಲ್ಲೇನಹಳ್ಳಿ ಆದಿಶಕ್ತ್ಯಾತ್ಮಕ ಶ್ರೀ ದೇವೀರಮ್ಮನವರ ಜಾತ್ರೆ ಪ್ರಯುಕ್ತ ಅಕ್ಟೋಬರ್ 19 ಮತ್ತು 20 ರಂದು ನಗರ ಬಸ್ ನಿಲ್ದಾಣದಿಂದ ರಾಜ್ಯ ರಸ್ತೆ ಸಾರಿಗೆ ನಿಗಮದಿಂದ ವಿಶೇಷ ಬಸ್‌ಗಳ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು

ನಿಗಮದ ಚಿಕ್ಕಮಗಳೂರು ವಿಭಾಗೀಯ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ.

ಸಾರ್ವಜನಿಕರು ತಮ್ಮ ಸ್ವಂತ ವಾಹನಗಳನ್ನು ಜಾತ್ರೆ ಮತ್ತು ಚಿಕ್ಕಮಗಳೂರಿಗೆ ಬರಲು ಬಳಸದೆ ನಿಗಮದ ಬಸ್‌ಗಳಲ್ಲಿ ಪ್ರಯಾಣಿಸುವ ಮೂಲಕ ಹಾಗೂ ಸಾಮೂಹಿಕ ಸಾರಿಗೆ ವ್ಯವಸ್ಥೆಯನ್ನು ಬಳಸುವ ಮೂಲಕ ಸಂಚಾರ ದಟ್ಟಣೆಯನ್ನು ಕಡಿಮೆ ಮಾಡಬೇಕೆಂದು ಅವರು ಕೋರಿದ್ದಾರೆ.

ಚಿಕ್ಕಮಗಳೂರು ನಗರದಿಂದ ಕಡೂರು, ಬೀರೂರು, ತರೀಕೆರೆ, ಹಾಸನ, ಬೇಲೂರು, ಮೂಡಿಗೆರೆ, ಆಲ್ದೂರು, ಶೃಂಗೇರಿ ಕಡೆಗೆ ಹೆಚ್ಚುವರಿ ಬಸ್‌ಗಳನ್ನು ನಿಯೋಜಿಸಲಾಗಿದೆ. ಸಾರ್ವಜನಿಕರು ಬಸ್‌ಗಳ ವ್ಯವಸ್ಥೆಯನ್ನು ಸದುಪಯೋಗಪಡಿಸಿಕೊಳ್ಳುವಂತೆ ಅವರು ಮನವಿ ಮಾಡಿದ್ದಾರೆ.

# ಮೆಸ್ಕಾಂ ಜನಸಂಪರ್ಕ ಸಭೆ

**ಚಿಕ್ಕಮಗಳೂರು:** ಮೆಸ್ಕಾಂ ನಗರ ಉಪವಿಭಾಗದಲ್ಲಿ ಅಕ್ಟೋಬರ್ 17 ರಂದು ಬೆಳಿಗ್ಗೆ 11 ಗಂಟೆಗೆ ಜನ ಸಂಪರ್ಕ ಸಭೆಯನ್ನು ಆಯೋಜಿಸಲಾಗಿದ್ದು, ಸಾರ್ವಜನಿಕರು ನಗರ ಉಪವಿಭಾಗಕ್ಕೆ ಸಂಬಂಧಿಸಿದ ವಿದ್ಯುತ್ ಸಮಸ್ಯೆಗಳ ಅಹವಾಲು ಸಲ್ಲಿಸಬಹುದು. ಈ ಸಭೆಯಲ್ಲಿ ಮೆಸ್ಕಾಂನ ಹಿರಿಯ ಅಧಿಕಾರಿಗಳು ಖುದ್ದು ಹಾಜರಿರಲಿದ್ದಾರೆ ಎಂದು ಮೆಸ್ಕಾಂ ನಗರ ಉಪವಿಭಾಗದ ಸಹಾಯಕ ಕಾರ್ಯ ನಿರ್ವಾಹಕ ಇಂಜಿನಿಯರ್‌ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾನೂನು ನೆರವು ಅಭಿರಕ್ಷಕರ ಕಚೇರಿಯಲ್ಲಿ ವಿವಿಧ ಹುದ್ದೆಗಳಿಗೆ ಅರ್ಜಿ ಆಹ್ವಾನ

**ಗದಗ :** ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರ, ಬೆಂಗಳೂರು ಇವರ ನಿರ್ದೇಶನದ ಮೇರೆಗೆ ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಡಿಯಲ್ಲಿ ಸ್ಥಾಪಿಸಿದ ಕಾನೂನು ನೆರವು ಅಭಿರಕ್ಷಕರ ಕಚೇರಿಯಲ್ಲಿ ಖಾಲಿ ಇರುವ ಉಪ ಕಾನೂನು ನೆರವು ಅಭಿರಕ್ಷಕರ 03 ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ. 7 ವರ್ಷ ವಕೀಲ ವೃತ್ತಿಯನ್ನು ಹೊಂದಿದ ಅರ್ಹ ವಕೀಲರು ಅರ್ಜಿ ಸಲ್ಲಿಸಬಹುದಾಗಿದೆ.

ಪದವಿ ಹೊಂದಿದ ಹಾಗೂ ಕನ್ನಡ ಮತ್ತು ಇಂಗ್ಲೀಷ್ ಬೆರಳಚ್ಚು ಹಾಗೂ ಕಂಪ್ಯೂಟರ್ ಜ್ಞಾನವುಳ್ಳ ಅಭ್ಯರ್ಥಿಗಳಿಗೆ ಕಚೇರಿ ಸಹಾಯಕ/ ಗುಮಾಸ್ತ 01 ಹುದ್ದೆ ಮತ್ತು ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾದವರಿಗೆ ದಲಾಯತ್ ( office peon ) 01 ಹುದ್ದೆ ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಅಕ್ಟೋಬರ್ 25 ರ ಸಂಜೆ 5 ಗಂಟೆಯೊಳಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ನ್ಯಾಯಾಲಯದ ಸಂಕೀರ್ಣ . ಗದಗ ಇಲ್ಲಿ ಸಲ್ಲಿಸಬಹುದಾಗಿದೆ.

ಅರ್ಜಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ https://gadag.dcourts.gov.in ಮೂಲಕ ಅಥವಾ ಗದಗ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಅ.26 ರಂದು ಶ್ರೀ ಕೆಂಚಾಂಬ ದೇವಸ್ಥಾನದ ಚಿಕ್ಕ ಜಾತ್ರಾ ಮಹೋತ್ಸವ

**ಹಾಸನ :** ಆಲೂರು ತಾಲ್ಲೂಕು ಕೆ.ಹೊಸಕೋಟೆ ಹೋಬಳಿ, ಹರಿಹಳ್ಳಿ ಗ್ರಾಮದ ಶ್ರೀ ಕೆಂಚಾಂಬ ದೇವಸ್ಥಾನದ ಚಾಲ್ತಿ ವರ್ಷದ ಚಿಕ್ಕ ಜಾತ್ರಾ ಮಹೋತ್ಸವವು ಅ.26 ರಂದು ನಡೆಯಲಿರುತ್ತದೆ. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮನಿಸಿ ಜಾತ್ರಾ ಮಹೋತ್ಸವವನ್ನು ಯಶಸ್ವಿಗೊಳಿಸಬೇಕಾಗಿ ಆಲೂರು ತಾಲ್ಲೂಕು ತಹಶೀಲ್ದಾರ್ ಅವರು ಕೋರಿದ್ದಾರೆ.

# ಖೋ ಖೋ ಪಂದ್ಯಾವಳಿಯಲ್ಲಿ ನಾಲ್ಕನೆ ಸ್ಥಾನ



**ದಾವಣಗೆರೆ :** ದಿನಾಂಕ 15-10-2025 ರಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹೊಸದುರ್ಗದಲ್ಲಿ ನಡೆದ 2025-26 ನೇ ಸಾಲಿನ ದಾವಣಗೆರೆ ವಿಶ್ವವಿದ್ಯಾನಿಲಯದ ಅಂತರ ಕಾಲೇಜು ಪುರುಷ ವಾಲಿಬಾಲ್ ಪಂದ್ಯಾವಳಿಯಲ್ಲಿ ನಗರದ ಎ. ಆರ್. ಎಂ. ಪ್ರಥಮ ದರ್ಜೆ ಕಾಲೇಜು, ದಾವಣಗೆರೆ ಭಾಗವಹಿಸಿ ನಾಲ್ಕನೆಯ ಸ್ಥಾನ ಪಡೆದಿರುತ್ತದೆ. ಇವರಿಗೆ ನಮ್ಮ ಕಾಲೇಜಿನ ಆಡಳಿತ ಮಂಡಳಿಯವರು, ಕಾಲೇಜಿನ ಪ್ರಾಂಶುಪಾಲ ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಯವರು ಅಭಿನಂದನೆಯನ್ನು ಸಲ್ಲಿಸಿರುತ್ತಾರೆ.

# ನ.28 ರಿಂದ ಕೃಷಿ ಮೇಳ

**ಹಾಸನ :** ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಮಂಡ್ಯ ತನ್ನ ಮೊಟ್ಟಮೊದಲ ಕೃಷಿಮೇಳ-2025ನ್ನು ಕರ್ನಾಟಕ ಸರ್ಕಾರದ ವಿವಿಧ ಅಭಿವೃದ್ಧಿ ಇಲಾಖೆಗಳು, ಹಣಕಾಸು ಸಂಸ್ಥೆಗಳು, ಪರಿಕರ ಮಾರಾಟಗಾರರು, ಸ್ವಯಂ ಸೇವಾ ಸಂಸ್ಥೆಗಳು, ಉದ್ದಿಮೆದಾರರು, ರೈತ ಉತ್ಪಾದಕರ ಕಂಪನಿಗಳು, ಇನ್ನಿತರೆ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಕೃಷಿ ಮೇಳ-2025 ಅನ್ನು ಸಮಗ್ರ ಕೃಷಿಯಿಂದ ಸುಸ್ಥಿರತೆ ಎಂಬ ಘೋಷವಾಕ್ಯದೊಂದಿಗೆ, ನ.28 ರಿಂದ ನ.30 ರವರಗೆ ಮಂಡ್ಯದ ವಿ.ಸಿ.ಫಾರಂ ಆವರಣದಲ್ಲಿ ಆಯೋಜಿಸಲಾಗಿದೆ. ಭವಿಷ್ಯದಲ್ಲಿ ಕೃಷಿ ಕ್ಷೇತ್ರವು ರಾಷ್ಟ್ರದ ಅತ್ಯಮೂಲ್ಯ ಸಂಪನ್ಮೂಲಗಳಾದ ನೆಲ, ಜಲ ಹಾಗೂ ಜೀವ ವೈವಿದ್ಯತೆಗಳ ಮೇಲೆ ಅವಲಂಬಿತವಾಗಿದ್ದು ಇವುಗಳನ್ನು ವೈಜ್ಞಾನಿಕವಾಗಿ ಬಳಸಿ ಸಂರಕ್ಷಿಸುವ ಮೂಲಕ ಸುಸ್ಥಿರ ಕೃಷಿ ಹಾಗೂ ರೈತರ ಆದಾಯ ಹೆಚ್ಚಿಸುವುದು ಈಗಿನ ಸವಾಲಾಗಿದೆ. ಈ ದಿಸೆಯಲ್ಲಿ ಸಮಗ್ರ ಕೃಷಿ ಪದ್ದತಿಯ ಅಳವಡಿಕೆಯು ರೈತರಿಗೆ ವರದಾನವಾಗಲಿದೆ. ಸಮಗ್ರ ಕೃಷಿ ಪದ್ಧತಿಯಲ್ಲಿ ಒಂದಕ್ಕಿಂತ ಹೆಚ್ಚಿನ ಕೃಷಿ ಚಟುವಟಿಕೆಗಳನ್ನು ಅಳವಡಿಸಿಕೊಂಡು ವಿವಿಧ ಪ್ರಾಕೃತಿಕ ಸಂಪನ್ಮೂಲಗಳನ್ನು ಸದುಪಯೋಗಪಡಿಸಿಕೊಂಡು ಬೆಳೆ ಮತ್ತು ಬೆಳೆ ಪದ್ಧತಿ, ಕೃಷಿ ಅರಣ್ಯ, ಹೈನುಗಾರಿಕೆ, ಕುರಿ, ಮೇಕೆ, ಹಂದಿ, ಮೀನು ಕೃಷಿ, ಕುಕ್ಕುಟ, ಮೊಲ, ರೇಷ್ಮೆ ಹಾಗೂ ಜೇನು ಸಾಕಾಣಿಕೆಗಳಿಂದ ಒಟ್ಟಾರೆ ಉತ್ಪಾದನೆ ಹಾಗೂ ಆರ್ಥಿಕತೆಯನ್ನು ಹೆಚ್ಚಿಸುವುದರ ಜೊತೆಗೆ ಪರಿಸರ ಸಮತೋಲನವನ್ನು ಕಾಯ್ದುಕೊಳ್ಳುವ ಪದ್ಧತಿಯಾಗಿದೆ ಮತ್ತು ನಿರಂತರ ಆದಾಯ ಹಾಗೂ ಕುಟುಂಬ ಜೀವನ ಮಟ್ಟ ಸುಧಾರಿಸುವುದಾಗಿದೆ.ಈ ಮೇಳವು ಕೃಷಿ ಮತ್ತು ತೋಟಗಾರಿಕಾ ಬೆಳೆಗಳು, ಪಶು ಸಂಗೋಪನೆ, ಮೀನು ಕೃಷಿ, ನರ್ಸರಿ ನಿರ್ವಹಣೆ, ರೇಷ್ಮೆ ಕೃಷಿ, ಸಾವಯವ ಕೃಷಿ, ನೈಸರ್ಗಿಕ ಕೃಷಿ, ಮಾರುಕಟ್ಟೆ ತಂತ್ರಗಳು, ಕೃಷಿ ಅರಣ್ಯ, ಕೃಷಿ ಮತ್ತು ತೋಟಗಾರಿಕಾ ಬೆಳೆಗಳ ಸಂಸ್ಕರಣೆ ಮತ್ತು ಮೌಲ್ಯವರ್ಧನೆ, ಜೇನು ಕೃಷಿ, ಕೃಷಿ ಯಾಂತ್ರೀಕರಣ ಹಾಗೂ ಇನ್ನಿತರೆ ಕೃಷಿ ಸಂಬಂಧಿತ ಮಾಹಿತಿಗಳನ್ನು ನೀಡುವುದರ ಜೊತೆಗೆ ವಸ್ತು ಪ್ರದರ್ಶನ, ಬೆಳೆ ಪ್ರಾತ್ಯಕ್ಷಿಕೆಗಳು, ಚರ್ಚಾಗೋಷ್ಠಿಗಳು, ಸಲಹಾ ಸೇವೆ, ಸಾಧಕ ಕೃಷಿಕರಿಗೆ ಪ್ರಶಸ್ತಿ ಪ್ರಧಾನ, ಗ್ರಾಮೀಣ ಕಲೆ, ಸಂಸ್ಕೃತಿಗಳ ಪ್ರದರ್ಶನಕ್ಕೆ ವೇದಿಕೆಯಾಗಲಿದೆ.

# ಹೃದಯ ಶ್ವಾಸಕೋಶ ಪುನರುಜ್ಜೀವನ ಕುರಿತು ಹೆಚ್ಚಿನ ಜಾಗೃತಿ ಮೂಡಿಸಿ: ಡಾ.ಯಲ್ಲಾ ರಮೇಶ್ ಬಾಬು

**ಬಳ್ಳಾರಿ:** ಇತ್ತೀಚಿನ ದಿನಗಳಲ್ಲಿ ವಯಸ್ಸಿನ ಮಿತಿಗಳಿಲ್ಲದೇ ಹೃದಯಾಘಾತಗಳು ಸಂಭವಿಸುತ್ತಿರುವ ಹಿನ್ನಲೆಯಲ್ಲಿ ವೈದ್ಯಾಧಿಕಾರಿಗಳು ಆರೋಗ್ಯ ಸಿಬ್ಬಂದಿ ವರ್ಗದವರಿಗೆ ಹಾಗೂ ಸಾರ್ವಜನಿಕರಿಗೆ ಎಲ್ಲಾ ಆರೋಗ್ಯ ಕೇಂದ್ರಗಳ ವ್ಯಾಪ್ತಿಯಲ್ಲಿ ಹೃದಯ ಶ್ವಾಸಕೋಶ ಪುನರುಜ್ಜೀವನ (ಸಿಆರ್‌ಪಿ) ಕುರಿತು ಪ್ರಾತ್ಯಕ್ಷತೆ ಮೂಲಕ ಹೆಚ್ಚಿನ ಜಾಗೃತಿ ಮೂಡಿಸಿ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಬುಧವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಸಭಾಂಗಣದಲ್ಲಿ ಹೃದಯ-ಶ್ವಾಸಕೋಶ ಪುನರುಜ್ಜೀವನ (ಸಿಆರ್‌ಸಿ) ಕುರಿತು ಅಕ್ಟೋಬರ್ 13 ರಿಂದ 17 ರವರೆಗೆ ಜಾಗೃತಿ ವಾರ ಹಿನ್ನಲೆಯಲ್ಲಿ ಜಾಗೃತಿ ಮತ್ತು ಪ್ರತಿಜ್ಞಾ ವಿಧಿ ಸ್ವೀಕರಿಸುವ ಮೂಲಕ ಮಾತನಾಡಿದರು.

ಆರೋಗ್ಯ ತುರ್ತು ಪರಿಸ್ಥಿತಿಯಲ್ಲಿ ವ್ಯಕ್ತಿಗಳಿಗೆ ಸಹಾಯ ಮಾಡಲು ಮತ್ತು ವೃತ್ತಿಪರ ವೈದ್ಯಕೀಯ ಸಹಾಯ ಬರುವವರಿಗೆ ಧೈರ್ಯ, ಸಹಾನುಭೂತಿ ಮತ್ತು ಜವಾಬ್ದಾರಿಯೊಂದಿಗೆ ಸಹಾಯವಾಗುವ ಹಿನ್ನಲೆಯಲ್ಲಿ ಹೃದಯ-ಶ್ವಾಸಕೋಶ ಪುನರುಜ್ಜೀವನ ಕುರಿತು ಜಿಲ್ಲಾ



ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯ ವಿವಿಧ ವಿಭಾಗಗಳ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರಿಗೆ ಮಾಹಿತಿ ನೀಡಿದರು.

ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿನ ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿಗಳಿಗೆ, ಆರೋಗ್ಯ ನಿರೀಕ್ಷಣಾಧಿಕಾರಿಗಳಿಗೆ, ಆಶಾ ಕಾರ್ಯಕರ್ತೆಯರಿಗೆ ತರಬೇತಿ ನೀಡಲು ಹಾಗೂ ಆರೋಗ್ಯ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಮತ್ತು ಸಾರ್ವಜನಿಕರಿಗೂ ಸಹ ಜಾಗೃತಿ ಮೂಡಿಸಲು ಸಂಬಂಧಪಟ್ಟ ಜಿಲ್ಲೆಯ ಎಲ್ಲಾ ವೈದ್ಯಾಧಿಕಾರಿಗಳು ಜಾಗೃತಿ ಮೂಡಿಸಿ ಪ್ರತಿಜ್ಞಾ ವಿಧಿ ಸ್ವೀಕರಿಸಬೇಕು ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ರೋಗವಾಹಕ ಆಶ್ರೀತ ರೋಗಗಳ ನಿಯಂತ್ರಣ ಅಧಿಕಾರಿ ಡಾ.ಆರ್.ಅಬ್ದುಲ್ಲಾ, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ.ಪೂರ್ಣಿಮ ಕಟ್ಟಿಮನಿ, ಜಿಲ್ಲಾ ಕುಷ್ಟರೋಗ ನಿರ್ಮೂಲನಾ ಅಧಿಕಾರಿ ಡಾ.ವೀರೇಂದ್ರ ಕುಮಾರ್, ಪ್ರಭಾರಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಶಿದ್ ಬೇಗಮ್, ಕಚೇರಿ ಅಧೀಕ್ಷಕರು ಬಸವರಾಜ, ಡಾ. ಸುರೇಶ್, ಪ್ರತಾಪ್ ಎನ್.ವಿ.ಬಿ.ಡಿ.ಸಿ.ಪಿ ಸಲಹೆಗಾರರು, ವಿವಿಧ ವಿಭಾಗದ ಅಧಿಕಾರಿಗಳು ಸೇರಿದಂತೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಕ್ರೀಡಾ ಚಟುವಟಿಕೆಗಳ ಕಾರ್ಯಕ್ರಮದ ಉದ್ಘಾಟನಾ ಸಮಾರಂಭ

**ಚಿತ್ರದುರ್ಗ:** ನಗರದ ಸರಸ್ವತಿ ವಿದ್ಯಾ ಸಂಸ್ಥೆಯಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸರಸ್ವತಿ ಕಾನೂನು ಕಾಲೇಜಿನಲ್ಲಿ 2025-26ನೇ ಸಾಲಿನ ವಿದ್ಯಾರ್ಥಿ ಕಾನೂನು ವೇದಿಕೆ, ರಾಷ್ಟ್ರೀಯ ಸೇವಾ ಯೋಜನೆ,

ಮಾನವ ಹಕ್ಕುಗಳ ವೇದಿಕೆ, ರೆಡ್ ಕ್ರಾಸ್ ಘಟಕ, ಇಕೋ ಕ್ಲಬ್ ಹಾಗೂ ಕ್ರೀಡಾ ಚಟುವಟಿಕೆಗಳ ಕಾರ್ಯಕ್ರಮದ ಉದ್ಘಾಟನಾ ಸಮಾರಂಭವೂ ಆ, 15ರ ಗುರುವಾರ ಬೆಳಿಗ್ಗೆ 10.30ಕ್ಕೆ ಸರಸ್ವತಿ ಕಾನೂನು ಕಾಲೇಜಿನ ರಜತ ಮಹೋತ್ಸವ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ತುಮಕೂರಿನ ವಿಶ್ವ ವಿದ್ಯಾನಿಲಯದ ಪರೀಕ್ಷಾಂಗ ಕುಲ ಸಚಿವರಾದ ಪ್ರೋ. (ಡಾ.) ಸತೀಶ್ ಗೌಡ ಎನ್ ರವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಬೆಂಗಳೂರಿನ ವಿವೇಕಾನಂದ ಕಾನೂನು ಕಾಲೇಜಿನ ಪ್ರಾಂಶುಪಾಲರಾದ ಡಾ.ಕೆ.ಬಿ.ಕೇಂಪೇಗೌಡ ಸರಸ್ವತಿ ವಿದ್ಯಾ ಸಂಸ್ಥೆಯ ಅಧ್ಯಕ್ಷರು, ರಾಜ್ಯ ಸಭಾದ ಮಾಜಿ ಸದಸ್ಯರಾದ ಹೆಚ್,ಹನುಮಂತಪ್ಪ,

ಹಿರಿಯ ವಕೀಲರು ಸರಸ್ವತಿ ವಿದ್ಯಾ ಸಂಸ್ಥೆಯ ಕಾರ್ಯದರ್ಶಿಗಳಾದ ಫಾತ್ಯಾರಾಜನ್, ಶ್ರೀಮತಿ ಡಿ.ಕೆ.ಶೀಲ ಭಾಗವಹಿಸಲಿದ್ದಾರೆ.ಸರಸ್ವತಿ ಕಾನೂನು ಕಾಲೇಜಿನ ಪ್ರಾಂಶುಪಾಲರಾದ ಪ್ರೋ.(ಡಾ.)ಎಂ.ಎಸ್. ಸುಧಾದೇವಿ ವಹಿಲಿದ್ದಾರೆ.

# ಸ್ವಚ್ಚತೆ ಕಾಯಕ ಮಾಡುವ ಪೌರ ಕಾರ್ಮಿಕರು ಆರೋಗ್ಯಕ್ಕೆ ಆದ್ಯತೆ ನೀಡಬೇಕು

**ಚಿಕ್ಕಮಗಳೂರು:** ನಗರದ ನಾಗರಿಕರ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ಪ್ರತಿದಿನ ಸ್ವಚ್ಚತೆ ಕಾಯಕ ಮಾಡುವ ಪೌರ ಕಾರ್ಮಿಕರು ಮತ್ತು ಪೌರ ನೌಕರರ ಆರೋಗ್ಯ ಕಾಪಾಡಲು ರಾಜ್ಯಸರ್ಕಾರ ಕ್ರೀಡಾಕೂಟ ಆಯೋಜನೆ ಮಾಡಿದೆ ಎಂದು ಶಾಸಕ ಹೆಚ್.ಡಿ. ತಮ್ಮಯ್ಯ ಹೇಳಿದರು.

ಅವರು ಇಂದು ಜಿಲ್ಲಾ ಆಟದ ಮೈದಾನದಲ್ಲಿ ನಗರಸಭೆ, ಕರ್ನಾಟಕ ರಾಜ್ಯ ಪೌರ ನೌಕರರ ಸಂಘ ಇವರ ಸಂಯುಕ್ತಾಶ್ರಯದಲ್ಲಿ ಪೌರ ಕಾರ್ಮಿಕರ ದಿನಾಚರಣೆ ಅಂಗವಾಗಿ ಏರ್ಪಡಿಸಲಾಗಿದ್ದ ಕ್ರೀಡಾಕೂಟ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಪೌರ ಕಾರ್ಮಿಕರು ತಮ್ಮ ಕುಟುಂಬವನ್ನು ಗಂಭೀರವಾಗಿ ಪರಿಗಣಿಸಿ ಆರೋಗ್ಯ ಆದ್ಯತೆ ನೀಡಬೇಕು ಎಂಬ ಉದ್ದೇಶದಿಂದ ಸರ್ಕಾರ ಗ್ಲೌಸ್, ಶೂ, ಸಮವಸ್ತ ಮುಂತಾದ ಹಲವಾರು ಸೌಲಭ್ಯಗಳನ್ನು ಕಲ್ಪಿಸಿದ್ದು, ಜೊತೆಗೆ ವಿಮಾ ಸೌಲಭ್ಯವನ್ನು ನೀಡಲಾಗಿದೆ ಎಂದರು.

ವಾರ್ಷಿಕವಾಗಿ ಪೌರಕಾರ್ಮಿಕರಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಚಿಕಿತ್ಸೆ ನೀಡಲಾಗುತ್ತಿದೆ. ಇವುಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಹಾಗೂ ಆರೋಗ್ಯವನ್ನು ಚೆನ್ನಾಗಿಟ್ಟುಕೊಳ್ಳಬೇಕು



ಎಂದು ಹೇಳಿದರು.ಸ್ವಾರ್ಥವಿಲ್ಲದೆ ನಿಸ್ವಾರ್ಥವಾಗಿ ಬದುಕುವ ಸಂದರ್ಭದಲ್ಲಿ ತಮ್ಮ ಕುಟುಂಬಕ್ಕಾಗಿ ಪೌರ ಕಾರ್ಮಿಕರು ಆರೋಗ್ಯವನ್ನು ಚೆನ್ನಾಗಿ ನೋಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಈ ಕ್ರೀಡಾಕೂಟದಲ್ಲಿ ಸಕ್ರಿಯವಾಗಿ ಭಾಗವಹಿಸಿದಾಗ ಮನಸ್ಸು ಹಗುರವಾಗುತ್ತದೆ, ಸದೃಢ ದೇಹ ಹೊಂದಲು ಸಹಕಾರಿಯಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿದ ವಿಧಾನ ಪರಿಷತ್ ಸದಸ್ಯ ಎಸ್. ಎಲ್ ಭೋಜೇಗೌಡ ಮಾತನಾಡಿ, ಪೌರಕಾರ್ಮಿಕರು ಪ್ರತಿನಿತ್ಯ ಸ್ವಚ್ಚತೆ ಮಾಡಿ ನಗರದ ನಾಗರಿಕರ ಆರೋಗ್ಯಕ್ಕೆ ಪೂರಕವಾಗಿ ಕೆಲಸ ಮಾಡುವ ನೀವು ನಿಮ್ಮ ಅರೋಗ್ಯಕ್ಕೆ ಹೆಚ್ಚಿನ ಕಾಳಜಿ ಮತ್ತು ಆದ್ಯತೆ ನೀಡಬೇಕೆಂದು ವಿನಂತಿಸಿದರು.

ಪೌರ ಕಾರ್ಮಿಕರ ದಿನಾಚರಣೆ ಅಂಗವಾಗಿ ಅವರ ಕುಟುಂಬದವರಿಗಾಗಿ ಸಾಂಸ್ಕೃತಿಕ ಚಟುವಟಿಕೆ ಕಾರ್ಯಕ್ರಮಗಳನ್ನು ಆಯೋಜಿಸಿ ಕುಟುಂಬದವರ ಅಭಿರುಚಿಗೆ ತಕ್ಕಂತೆ ಕಾರ್ಯಕ್ರಮ ನಡೆಸಬೇಕೆಂದು ಹೇಳಿದರು.

ಇನ್ನು ಗುತ್ತಿಗೆ ಆಧಾರದಲ್ಲಿ ಸೇವೆ ಸಲ್ಲಿಸುತ್ತಿರುವ ಪೌರ ಕಾರ್ಮಿಕರನ್ನು ರಾಜ್ಯಸರ್ಕಾರ ಶೀಘ್ರವೇ ಕಾಯಂಗೊಳಿಸಬೇಕು ಹಾಗೂ ನಿವೃತ್ತಿ ವೇತನ ಮಂಜೂರು ಮಾಡಬೇಕೆಂದು ಒತ್ತಾಯಿಸಿದರು.

ನಗರಸಭೆ ಪೌರ ಕಾರ್ಮಿಕರಿಗೆ ಆರ್ಥಿಕ ಭದ್ರತೆ ಕೊಡಬೇಕು ಆ ನಿಟ್ಟಿನಲ್ಲಿ ಕ್ರಮವಹಿಸಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ನಗರಸಭಾಧ್ಯಕ್ಷೆ ಶೀಲಾದಿನೇಶ್ ಮಾತನಾಡಿ, ಸದೃಢ ಆರೋಗ್ಯಕ್ಕಾಗಿ ಪೌರ ಕಾರ್ಮಿಕರು ಕ್ರೀಡಾಕೂಟದಲ್ಲಿ ಭಾಗವಹಿಸುವುದು ಮುಖ್ಯ ಎಂದು ಶುಭ ಕೋರಿದರು.

ಪೌರಾಯುಕ್ತ ಬಿ.ಸಿ. ಬಸವರಾಜ್ ಸ್ವಾಗತಿಸಿ ಮಾತನಾಡಿ, ಪೌರಕಾರ್ಮಿಕರಿಗೆ ಸರ್ಕಾರದಿಂದ ದೊರೆಯುವ ಎಲ್ಲಾ ರೀತಿಯ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಕಳೆದ 4 ವರ್ಷಗಳಿಂದ ಗುಂಪು ವಿಮೆಯನ್ನು ಮಾಡಿಸಿದ್ದೇವೆ ಎಂದ ಅವರು, ಪ್ರತಿ ನಾಲ್ಕು ತಿಂಗಳಿಗೊಮ್ಮೆ ಪೌರಕಾರ್ಮಿಕರ ಅರೋಗ್ಯ ತಪಾಸಣೆ ನಡೆಸಿ ಅವರ ಆರೋಗ್ಯಕ್ಕಾಗಿ ಶೂ, ಗ್ಲೌಸ್, ಸಮವಸ್ತ್ರ ಮುಂತಾದ ಸೌಲಭ್ಯಗಳನ್ನು ನೀಡಿದ್ದೇವೆ ಎಂದರು.

ಈ ಸಂದರ್ಭದಲ್ಲಿ ಉಪಾಧ್ಯಕ್ಷ ಲಲಿತಾನಾಯ್ಕ್, ಸದಸ್ಯರಾದ ವರಸಿದ್ದಿ ವೇಣುಗೋಪಾಲ್, ಗುರುಮಲ್ಲಪ್ಪ, ಗೋಪಿ, ರೂಪ ಕುಮಾರ್, ಜಾವಿದ್, ಎ.ಸಿ. ಕುಮಾರಗೌಡ, ಅಣ್ಣಯ್ಯ, ಶ್ರೀನಿವಾಸ್, ದಿನೇಶ್, ಪ್ರಕಾಶ್ ರೈ, ಉಪ ವಿಭಾಗಾಧಿಕಾರಿ ಸುದರ್ಶನ್, ಮ್ಯಾನೇಜರ್ ರವಿ, ಆರೋಗ್ಯ ನಿರೀಕ್ಷಕರಾದ ವೆಂಕಟೇಶ್, ಈಶ್ವರ್, ನಾಗಪ್ಪ, ರಂಗಪ್ಪ, ಚಂದ್ರಶೇಖರ್, ಮತ್ತಿತರರು ಉಪಸ್ಥಿತರಿದ್ದರು.

## ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿ ಹಾಗೂ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿಗಳಿಗೆ ಮತ್ತು ಸಂಸ್ಥೆಗಳಿಗೆ ರಾಜ್ಯ ಪ್ರಶಸ್ತಿ

**ಗದಗ :** ಕರ್ನಾಟಕ ಸರಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಮಕ್ಕಳ ದಿನಾಚರಣೆ-2025ರ ಪ್ರಯುಕ್ತ ಮಕ್ಕಳು ತಮ್ಮ ಪ್ರಾಣದ ಹಂಗನ್ನು ತೊರೆದು ಹಾಗೂ ಸಮಯ ಪ್ರಜ್ಞೆಯಿಂದ ಇತರ ಪ್ರಾಣ ರಕ್ಷಣೆಗಾಗಿ ಧೈರ್ಯ, ಸಾಹಸ, ಪ್ರದರ್ಶಿಸಿದ 6 ರಿಂದ 18 ವರ್ಷದೊಳಗಿನ ಬಾಲಕನಿಗೆ ಹೊಯ್ಸಳ ಮತ್ತು ಬಾಲಕಿಯರಿಗೆ ಕೆಳದಿ ಚೆನ್ನಮ್ಮ ಪ್ರಶಸ್ತಿಯನ್ನು ಪ್ರಧಾನ ಮಾಡಲಾಗುತ್ತದೆ. ಪ್ರಕರಣವು 01.08.2024 ರಿಂದ 31.07.2025ರೊಳಗೆ ನಡೆದಿರಬೇಕು. ಪ್ರಶಸ್ತಿಗೆ ಆಯ್ಕೆಯಾದ ಮಕ್ಕಳಿಗೆ ತಲಾ ರೂ.10,000/-ಗಳ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಒಳಗೊಂಡಿರುತ್ತದೆ.

ಇದೇ ಸಂದರ್ಭದಲ್ಲಿ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕನಿಷ್ಠ 5 ವರ್ಷಗಳ ಕಾಲ ಅತ್ಯುತ್ತಮ ಸೇವೆ ಸಲ್ಲಿಸಿರುವ ವ್ಯಕ್ತಿಗಳಿಗೆ ತಲಾ ರೂ.25,000/- ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಹಾಗೂ ಅತ್ಯುತ್ತಮ ಸೇವೆ ಸಲ್ಲಿಸಿರುವ ಸಂಸ್ಥೆಗಳಿಗೆ ತಲಾ ರೂ.1,00,000/- ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರವನ್ನು ನೀಡಿ ಗೌರವಿಸಲಾಗುವುದು.ಮಕ್ಕಳ ದಿನಾಚರಣೆ-2025ನೇ ಸಾಲಿನ ಪ್ರಶಸ್ತಿಗಾಗಿ ನಿಗದಿಪಡಿಸಿರುವ ಅರ್ಜಿಗಳನ್ನು ಪಡೆದು ದಿನಾಂಕ:24.10.2025ರ ಒಳಗಾಗಿ ಉಪನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಗದಗ, ಕೊಠಡಿ ಸಂ.006, ಜಿಲ್ಲಾ ಆಡಳಿತ ಭವನ ಗದಗ (ದೂರವಾಣಿ ಸಂ.08372-220711) ಇಲ್ಲಿ ಕಛೇರಿ ಸಮಯದಲ್ಲಿ ಸಲ್ಲಿಸತಕ್ಕದ್ದು. ಅರ್ಜಿಗಳನ್ನು ಕನ್ನಡ ಭಾಷೆಯಲ್ಲಿಯೇ ಸಲ್ಲಿಸತಕ್ಕದ್ದು.

## ಕಂಪ್ಲಿ: ಬಾಡಿಗೆ ಕಟ್ಟಡ ಬೇಕಾಗಿದೆ

**ಬಳ್ಳಾರಿ:** ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಯ ಪ್ರಸಕ್ತ ಸಾಲಿನ ಕಂಪ್ಲಿ ಪಟ್ಟಣದಲ್ಲಿ ಹೊಸದಾಗಿ ಸರ್ಕಾರಿ ಮೆಟ್ರಿಕ್ ನಂತರದ ಬಾಲಕೀಯರ ವಿದ್ಯಾರ್ಥಿ ನಿಲಯ ಪ್ರಾರಂಭಿಸಲು 100 ವಿದ್ಯಾರ್ಥಿಗಳ ವಾಸಕ್ಕೆ ಕಂಪ್ಲಿ ನಗರ ವ್ಯಾಪ್ತಿಯಲ್ಲಿ ಕಟ್ಟಡವನ್ನು ಬಾಡಿಗೆಗೆ ನೀಡಲು ಇಚ್ಛಿಸುವ ಕಟ್ಟಡಗಳ ಮಾಲೀಕರು ಸಂಪರ್ಕಿಸಬಹುದು.ಆಸಕ್ತ ಕಟ್ಟಡ ಮಾಲೀಕರು ಅಕ್ಟೋಬರ್ 30 ರೊಳಗೆ ಅಗತ್ಯ ದಾಖಲೆಗಳೊಂದಿಗೆ ನಗರದ ನಲ್ಲಚೆರುವು ಪ್ರದೇಶದ ವಾಲ್ಮೀಕಿ ಭವನದ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು.

# ಆಹಾರದ ಮೌಲ್ಯ ಅರಿಯುವ ಪಾಠ ಮಕ್ಕಳಿಗೆ ನಾವು ತಿಳಿಸಲೇಬೇಕು




ಪ್ರತಿ ವರ್ಷ ಅಕ್ಟೋಬರ್ 16ರಂದು ವಿಶ್ವ ಆಹಾರ ದಿನವನ್ನು ವಿಶ್ವಾದ್ಯಂತ ಎಲ್ಲರಿಂದಲೂ ಆಚರಿಸಲಾಗುತ್ತದೆ. ಈ ದಿನವು ಮಾನವಕುಲಕ್ಕೆ ಅತಿ ಮೂಲಭೂತ ಅಗತ್ಯವಾದ ಆಹಾರದ ಮೌಲ್ಯವನ್ನು ಅರಿತುಕೊಳ್ಳಲು, ಎಲ್ಲರಿಗೂ ಪೋಷಕ ಆಹಾರ ದೊರಕುವ ವಿಶ್ವ ನಿರ್ಮಾಣಕ್ಕೆ ಕರೆ ನೀಡುತ್ತದೆ. ಆಹಾರ ಅದು ಕೇವಲ ಹೊಟ್ಟೆ ತುಂಬಿಸುವ ವಸ್ತುವಲ್ಲ; ಅದು ಜೀವದ ಶಕ್ತಿ, ಸಂಸ್ಕೃತಿಯ ಸಾರ, ಮತ್ತು ಪ್ರಕೃತಿಯ ಕೊಡುಗೆ. ಆದರೆ ನಾವು ಎಷ್ಟು ಮಂದಿ ಅದರ ನಿಜವಾದ ಮೌಲ್ಯವನ್ನು ಅರಿಯುತ್ತೇವೆ?ಸರಿಯಾದ ಕ್ರಮದಲ್ಲಿ ಸೇವಿಸಿ ಎಷ್ಟು ಉಳಿಸುತ್ತೇವೆ ಎಂಬುದು ಅರಿಯುವ ಕಾರ್ಯ ಆಗಬೇಕು.

ಪ್ರಕೃತಿಯ ಪಾಠ ಪ್ರಾಣಿ-ಪಕ್ಷಿಗಳಿಗೆ ಹುಟ್ಟಿನಿಂದಲೇ ಆಹಾರ ಕ್ರಮ ತಿಳಿದು ಕೊಂಡಿರುತ್ತವೆ, ಪ್ರಾಣಿ ಮತ್ತು ಪಕ್ಷಿಗಳ ಜೀವನದಲ್ಲಿ ಆಹಾರವು ಬಾಳಿನ ನಂಬಿಕೆ. ಅವು ಹಸಿವು ತೀರಿಸಲು ಆಹಾರ ಹುಡುಕುತ್ತವೆ, ಆದರೆ ಅಗತ್ಯಕ್ಕಿಂತ ಹೆಚ್ಚು ಉಪಯೋಗಿಸುವುದಿಲ್ಲ. ಪ್ರಕೃತಿಯಲ್ಲೇ ಅವುಗಳ ಜೀವನ ನಡೆಯುತ್ತದೆ, ಅಲ್ಲಿ ವ್ಯರ್ಥತೆ ಇಲ್ಲ, ಅತಿ ಆಸೆ ಇಲ್ಲ. ಹಕ್ಕಿ ಧಾನ್ಯದ ಕಣ ತಿನ್ನುತ್ತದೆ, ಆದರೆ ಅದೇ ಕಣವನ್ನು ಮತ್ತೊಂದು ಮಣ್ಣಿನಲ್ಲಿ ಬಿತ್ತುವ ಮೂಲಕ ಪ್ರಕೃತಿಯ ಚಕ್ರವನ್ನು ಮುಂದುವರಿಸುತ್ತದೆ. ಸಿಂಹ ಬೇಟೆಯಾಡುತ್ತದೆ, ಆದರೆ ಅಗತ್ಯಕ್ಕಿಂತ ಹೆಚ್ಚು ಕೊಲ್ಲುವುದಿಲ್ಲ. ಪ್ರಕೃತಿಯ ಸಮತೋಲನವನ್ನು ಸರಿಯಾಗಿ ನಿರ್ವಹಿಸುತ್ತಿರುವುದರಿಂದಲೇ ಇಂದು ಎಲ್ಲಾ ಜೀವ ಸಂಕುಲ ಜೀವಂತವಾಗಿದೆ.

ಮನುಷ್ಯರ ಲೋಕ: ವೈಪರೀತ್ಯದ ಚಿತ್ರ

ಮನುಷ್ಯನ ಲೋಕದಲ್ಲಿ ಆಹಾರವು ಕೇವಲ ಬದುಕಿನ ಅಗತ್ಯವಲ್ಲ; ಅದು ಆಡಂಬರ, ವ್ಯಾಪಾರ, ಮತ್ತು ಕೆಲವೊಮ್ಮೆ ಆಸಕ್ತಿಯ ವಿಷಯವಾಗಿದೆ. ಒಂದು ಕಡೆ ಕೋಟ್ಯಾಂತರ ಜನರು ಹಸಿವಿನಿಂದ ಬಳಲುತ್ತಿದ್ದರೆ, ಮತ್ತೊಂದೆಡೆ ಲಕ್ಷಾಂತರ ಟನ್ ಆಹಾರ ವ್ಯರ್ಥವಾಗುತ್ತಿದೆ, ಇದೇ ಮಾನವ ಸಂಸ್ಕೃತಿಯ ವಿಷಮತೆ. ಪ್ರತಿ ಧಾನ್ಯದ ಹಿಂದೆ ರೈತರ ಶ್ರಮ, ಮಣ್ಣಿನ ಕೃಪೆ ಮತ್ತು ಪ್ರಕೃತಿಯ ಸಹನೆ ಅಡಗಿದೆ. ಆಹಾರ ವ್ಯರ್ಥ ಮಾಡುವುದು ಕೇವಲ ಅಸಡ್ಡೆಯಲ್ಲ, ಮಾನವೀಯತೆಯ ಮೇಲಿನ ಧಕ್ಕೆ.

ವಾರ್ಷಿಕ ಆಹಾರ ವ್ಯರ್ಥ ಎಚ್ಚರಿಸುವ ಅಂಕಿಅಂಶಗಳು

ವಿಶ್ವ ಮಟ್ಟದಲ್ಲಿ ಆಹಾರ ವ್ಯರ್ಥತೆ ಒಂದು ದೊಡ್ಡ ಸವಾಲು. 2024ರ ಯುಎನ್ ವರದಿ ಪ್ರಕಾರ:

ವಿಶ್ವದಾದ್ಯಂತ ಒಟ್ಟು ಉತ್ಪಾದನೆಯ ಸುಮಾರು 19% ಆಹಾರ ವರ್ಷಕ್ಕೆ ವ್ಯರ್ಥವಾಗುತ್ತದೆ.

ಸರಾಸರಿ ಪ್ರತಿಯೊಬ್ಬ ವ್ಯಕ್ತಿ ವರ್ಷಕ್ಕೆ ಸುಮಾರು 79 ಕಿಲೋಗ್ರಾಂ ಆಹಾರವನ್ನು ವ್ಯರ್ಥಮಾಡುತ್ತಾನೆ.

ಭಾರತದಲ್ಲಿ ಪ್ರತಿ ವ್ಯಕ್ತಿ ವರ್ಷಕ್ಕೆ ಸುಮಾರು 55 ಕಿಲೋಗ್ರಾಂ ಆಹಾರವನ್ನು ವ್ಯರ್ಥಮಾಡುತ್ತಾನೆ.

ಇದರಿಂದ ದೇಶದ ಮಟ್ಟದಲ್ಲಿ ಸುಮಾರು 78 ಮಿಲಿಯನ್ ಟನ್ ಆಹಾರ ನಷ್ಟವಾಗುತ್ತದೆ ಇದು ಲಕ್ಷಾಂತರ ಹಸಿದ ಬಾಯಿಗಳಿಗೆ ಆಹಾರ ಪೂರೈಸಬಹುದಾದ ಪ್ರಮಾಣ.

ಈ ಅಂಕಿಅಂಶಗಳು ನಮಗೆ ತೋರಿಸುತ್ತವೆ, ಆಹಾರ ವ್ಯರ್ಥ ಕೇವಲ ಆರ್ಥಿಕ ನಷ್ಟವಲ್ಲ; ಅದು ನೀರಿನ, ಭೂಮಿಯ ಮತ್ತು ಶ್ರಮನ ನಾಶ.

ಆಹಾರ: ಎಲ್ಲ ಜೀವಿಗಳ ಹಕ್ಕು

ವಿಶ್ವ ಆಹಾರ ದಿನದ ನಿಜಾರ್ಥವೆಂದರೆ "ಆಹಾರ ಕೇವಲ ಮಾನವನ ಹಕ್ಕಲ್ಲ; ಅದು ಭೂಮಿಯಲ್ಲಿನ ಪ್ರತಿಯೊಂದು ಜೀವಿಯ ಹಕ್ಕು." "ಹಸಿದ ಬಾಯಿಗೆ ಅನ್ನವೇ ಧರ್ಮ" ಎಂಬ ಮಾತು ಎಲ್ಲ ಕಾಲಕ್ಕೂ ಸತ್ಯ. ನಾವು ಪ್ರಕೃತಿಯ ಶಿಷ್ಟತೆಯನ್ನು ಕಲಿಯಬೇಕು ಅಗತ್ಯಕ್ಕಷ್ಟೇ ತಿನ್ನುವುದು, ಉಳಿದನ್ನು ಹಂಚುವುದು.

ಈ ದಿನದ ನಿಜಾರ್ಥವು ಕೇವಲ ಆಚರಣೆಯಲ್ಲಿ ಅಲ್ಲ, ಆಹಾರದ ಗೌರವದಲ್ಲಿ ಮತ್ತು ಹಂಚಿಕೆಯಲ್ಲಿ ಇದೆ. "ಆಹಾರ ವ್ಯರ್ಥ ಮಾಡಬೇಡಿ ಅದು ಯಾರಾದರೂ ಹಸಿದವರ ಹಕ್ಕು." ಆಹಾರವನ್ನು ಗೌರವಿಸಿ, ವ್ಯರ್ಥತೆ ಕಡಿಮೆ ಮಾಡಿ, ಪ್ರಕೃತಿಯ ನಿಯಮಗಳನ್ನು ಗೌರವಿಸುವುದೇ ನಿಜವಾದ ಮಾನವೀಯತೆ.

ಪ್ರಕೃತಿಯ ತನ್ನದೇ ಆದ ಚಕ್ರವನ್ನು ಹೊಂದಿದೆ ಕಪ್ಪೆ, ಹಾವು, ಜಿಂಕೆ ಮತ್ತು ಹುಲಿ, ಜೇನು ಹುಳು ಎಲ್ಲವೂ ತಮ್ಮ ಆಹಾರದ ಸಮತೋಲನದಿಂದ ಮಳೆಯ ವರದಾನ ಆಗುತ್ತದೆ, ಪ್ರಕೃತಿಯ ಪ್ರತಿಯೊಂದು ಜೀವಿ ಆಹಾರ ಸರಪಳಿಯಲ್ಲಿ ಪ್ರಮುಖ ಪಾತ್ರವಹಿಸುತ್ತದೆ. ಕಪ್ಪೆ, ಹಾವು, ಜಿಂಕೆ, ಹುಲಿ ಮುಂತಾದ ಪ್ರಾಣಿಗಳ ಜೀವನ ಕ್ರಮವು ಕೇವಲ ಒಂದು ಬೇಟೆಯಾಡುವ ಸರಮಾಲೆಯಲ್ಲ, ಅದು ಮಳೆಯೂ ಸೇರಿದಂತೆ ಪ್ರಕೃತಿಯ ಸಮತೋಲನವನ್ನು ಕಾಪಾಡುವ ಜೀವಚಕ್ರವಾಗಿದೆ.

ಕಪ್ಪೆ ಮಳೆಯ ಸೂಚಕ ಮತ್ತು ಕೃಷಿಯ ಸ್ನೇಹಿತ

ಮಳೆಯ ಋತು ಬರುವುದು ಕಪ್ಪೆಯ ಕೂಕಿನಿಂದಲೇ ತಿಳಿಯುತ್ತದೆ. ಕಪ್ಪೆಗಳು ಮಳೆಗಾಲದಲ್ಲಿ ಹುಳಗಳು, ಕೀಟಗಳು ಮತ್ತು ಕಿಟಕಿಯ ಪಾಕಿಗಳು ತಿನ್ನುವುದರಿಂದ, ಬೆಳೆಗಳಿಗೆ ಹಾನಿ ಆಗುವ ಕೀಟರ ಪ್ರಮಾಣ ಕಡಿಮೆಯಾಗುತ್ತದೆ. ಇದರಿಂದ ರೈತರ ಬೆಳೆಗಳು ಚೆನ್ನಾಗಿ ಬೆಳೆಯುತ್ತವೆ. ಮಳೆಯ ಕೊರತೆಯಿಂದ ಕಪ್ಪೆಗಳ ಸಂಖ್ಯೆ ಕಡಿಮೆಯಾದರೆ, ಕೀಟಗಳ ಪ್ರಮಾಣ ಹೆಚ್ಚಾಗುತ್ತದೆ, ಅದರಿಂದ ಬೆಳೆ ಹಾಳಾಗುವುದು ಸಹಜ.

ಹಾವು ಪ್ರಕೃತಿಯ ಸಮತೋಲನದ ರಕ್ಷಕ

ಹಾವುಗಳು ಕಪ್ಪೆ, ಇಲಿ ಮತ್ತು ಸಣ್ಣ ಪ್ರಾಣಿಗಳನ್ನು ತಿನ್ನುತ್ತವೆ. ಅವು ಇಲ್ಲದಿದ್ದರೆ ಇಲಿ ಮತ್ತು ಕೀಟಗಳ ಸಂಖ್ಯೆ ಹೆಚ್ಚಿ, ಬೆಳೆ ಮತ್ತು ಅರಣ್ಯ ಹಾನಿಯಾಗುತ್ತದೆ. ಹಾವುಗಳು ಆಹಾರದ ಸರಪಳಿಯಲ್ಲಿ ಮಧ್ಯದ ಕೊಂಡಿ, ಅವು ಪ್ರಕೃತಿಯ "ಪರಿಶೋಧಕ". ಆದರೆ ಮನುಷ್ಯ ಹಾವುಗಳನ್ನು ಅಸಹ್ಯಪಡುವುದರಿಂದ ಅವುಗಳ ಸಂಖ್ಯೆ ಕಡಿಮೆ ಆಗುತ್ತಿದ್ದಂತೆ ಪರಿಸರದ ಸಮತೋಲನವೂ ಕುಸಿಯುತ್ತಿದೆ.

ಜಿಂಕೆ ಹುಲ್ಲುಗಾವಲುಗಳ ಪಾಲಕ

ಜಿಂಕೆಗಳು ಹುಲ್ಲು, ಎಲೆಗಳು, ಸಣ್ಣ ಗಿಡಗಳನ್ನು ತಿನ್ನುತ್ತವೆ. ಅವು ಪ್ರಕೃತಿಯ ಕಟರ್‌ಗಳಂತೆ ಕಾರ್ಯಮಾಡುತ್ತವೆ, ಅತಿ ಹೆಚ್ಚಾಗಿ ಬೆಳೆದ ಹುಲ್ಲುಗಳನ್ನು ಕಡಿಮೆ ಮಾಡಿ ಮಣ್ಣಿನ ಉಸಿರಾಟವನ್ನು ಸುಧಾರಿಸುತ್ತವೆ. ಜಿಂಕೆಗಳ ಸಂಖ್ಯೆ ಕಡಿಮೆಯಾದರೆ ಅರಣ್ಯದಲ್ಲಿ ಗಿಡಗಳು ಹೆಚ್ಚು ಬೆಳೆದು ಉಸಿರಾಡುವ ಸ್ಥಳ ಕಡಿಮೆಯಾಗುತ್ತದೆ, ಇದರ ಪರಿಣಾಮವಾಗಿ ಮಳೆಯ ಮಾದರಿಗೂ ವ್ಯತ್ಯಾಸ ಉಂಟಾಗುತ್ತದೆ.

ಹುಲಿ ಅರಣ್ಯದ ಶಕ್ತಿ ಮತ್ತು ಸಮತೋಲನದ ಸಂಕೇತ

ಹುಲಿ ಪ್ರಾಣಿಗಳ ಚಕ್ರದ ಶ್ರೇಷ್ಠ ಸ್ಥಾನದಲ್ಲಿದೆ. ಅದು ಅರಣ್ಯದಲ್ಲಿ ಬೇಟೆಯಾಡುವ ಮೂಲಕ ಪ್ರಾಣಿಗಳ ಸಂಖ್ಯೆಯನ್ನು ನಿಯಂತ್ರಿಸುತ್ತದೆ. ಹುಲಿ ಇಲ್ಲದ ಅರಣ್ಯದಲ್ಲಿ ಜಿಂಕೆ ಮತ್ತು ಕಾಡುಮೇಕೆ ಹೆಚ್ಚು ಬೆಳೆಯುತ್ತವೆ, ಹುಲ್ಲು ಹಾನಿಯಾಗುತ್ತದೆ, ಮಣ್ಣು ಬಿತ್ತನೆಗೆ ಅಸಮರ್ಥವಾಗುತ್ತದೆ,ಅಂತಿಮವಾಗಿ ಮಳೆ ಚಕ್ರವೂ ಕುಸಿಯುತ್ತದೆ. ಹುಲಿ ಅರಣ್ಯದ ಕಿರೀಟ, ಅದರ ಬದುಕು ಪ್ರಕೃತಿಯ ಆರೋಗ್ಯದ ಸಂಕೇತ.

ಮನುಷ್ಯ- ಆಹಾರವನ್ನು ತನ್ನ ಪ್ರತಿಷ್ಠೆ ವ್ಯರ್ಥ ಮಾಡುವುದು

ತಾನು ಪ್ರತಿ ಮುಂಜಾನೆಯಿಂದ ಮುಸ್ಸಂಜೆವರೆಗೂ ತಿನ್ನುವ ತಿಂಡಿ, ತಿನಿಸು ಎಲ್ಲದರಲ್ಲೂ ಒಂದಲ್ಲ ಒಂದು ರೀತಿಯಲ್ಲಿ ಸುಮಾರು 15% ನಿಂದ 35% ವರೆಗೂ ಹಾಳುಮಾಡುತ್ತಾನೆ, ತಮ್ಮ ಯಾವುದೇ ಶುಭ ಸಮಾರಂಭದಲ್ಲಿ ತೋರಿಕೆಗೆ ಅಗತ್ಯಕ್ಕಿಂತ ಹೆಚ್ಚುವರಿ ಅಡುಗೆ ಮಾಡಿಸಿ ಹಾಳು ಮಾಡುವ ಮನಸ್ಥಿತಿ ಈ ಮನುಷ್ಯನದು, ಇನ್ನು ಸಮಾಜದಲ್ಲಿ ಒಂದು ಹೊತ್ತಿನ ಊಟಕ್ಕೆ ಕಷ್ಟ ಪಡುವವರು ನಮ್ಮ ಮಧ್ಯದಲ್ಲಿ ಇದ್ದಾರೆ ಆದರೆ ಅವರಾರು ಇಂತಹವರ ಕಣ್ಣಿಗೆ ಕಾಣುವುದಿಲ್ಲ ಇನ್ನಾದರೂ ತಿಳಿಯದೆ ಹೀಗೆ ಮುಂದುವರೆದರೆ ತಿನ್ನಲು ಆಹಾರ ಸಿಗುವುದಿಲ್ಲ,

ಆಹಾರ ಸರಪಳಿಯಿಂದ ಮಳೆಯ ಸಮತೋಲನ

ಪ್ರಕೃತಿಯ ಈ ಸರಪಳಿಯು ತೂಕ ತೂಗಿದಾಗ,ಅಂದರೆ ಯಾವುದೇ ಒಂದು ಜೀವಿಯ ಸಂಖ್ಯೆ ಕಡಿಮೆಯಾದಾಗ ಅಥವಾ ಹೆಚ್ಚಾದಾಗ, ಅದರ ಪರಿಣಾಮ ನೇರವಾಗಿ ಪರಿಸರದ ಮೇಲೆ, ಹಾಗೆಯೇ ಮಳೆಯ ಪ್ರಮಾಣದ ಮೇಲೂ ಬೀಳುತ್ತದೆ.ಮಣ್ಣು, ಸಸ್ಯ, ಪ್ರಾಣಿ, ಮಳೆ ಇವೆಲ್ಲವೂ ಪರಸ್ಪರ ಸಂಬಂಧಿತವಾಗಿವೆ. ಒಂದು ಸರಪಳಿ ಮುರಿದರೆ ಮಳೆಯ ಋತುಗಳು ಬದಲಾಗುತ್ತವೆ, ಬೆಳೆ ಕಡಿಮೆಯಾಗುತ್ತದೆ, ಹಸಿವು ಹೆಚ್ಚುತ್ತದೆ.

**ರಾಘವೇಂದ್ರ ಎಸ್.**

# ಡಿಸೆಂಬರ್ ತಿಂಗಳಲ್ಲಿ ಬಳ್ಳಾರಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಉದ್ಘಾಟನೆ

**ಬಳ್ಳಾರಿ:** ಬರುವ ಡಿಸೆಂಬರ್ ತಿಂಗಳಲ್ಲಿ ಬಳ್ಳಾರಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಉದ್ಘಾಟನೆಗೊಳಿಸಿ, ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲಾಗುವುದು ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣ ಪ್ರಕಾಶ ಆರ್.ಪಾಟೀಲ ಅವರು ಹೇಳಿದರು.



ನಗರದ ಸುಧಾಕ್ರಾಸ್ ಬಳಿಯ ಬಳ್ಳಾರಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ಬುಧವಾರ ಭೇಟಿ ನೀಡಿ, ಬಾಕಿ ಕಾಮಗಾರಿಗಳ ಕುರಿತು ವೈದ್ಯಾಧಿಕಾರಿಗಳೊಂದಿಗೆ ಸಭೆ ಜರುಗಿಸಿ ಅವರು ಮಾತನಾಡಿದರು.

450 ಹಾಸಿಗೆಯುಳ್ಳ ಈ ಆಸ್ಪತ್ರೆಯು 2008 ರಲ್ಲಿ ಮಂಜೂರಾಗಿತ್ತು. ವಿವಿಧ ಕಾರಣಗಳಿಂದ ನೆನೆಗುದಿಗೆ ಬಿದ್ದಿದ್ದ ಆಸ್ಪತ್ರೆಯನ್ನು 2018 ರಲ್ಲಿ ಮರು ಟೆಂಡರ್ ಕರೆಯಲಾಗಿತ್ತು. ಈಗ ನಮ್ಮ ಸರ್ಕಾರಾವಧಿಯಲ್ಲೇ ಪೂರ್ಣಗೊಳಿಸಿ ಡಿಸೆಂಬರ್ ತಿಂಗಳಲ್ಲಿ ಉದ್ಘಾಟನೆಗೊಳಿಸಿ ಸಾರ್ವಜನಿಕರಿಗೆ ಅರ್ಪಿಸಲಾಗುವುದು ಎಂದರು.

11,204 ಲಕ್ಷ ಮೊತ್ತದ ಮೊದಲ ಹಂತ-1 ದ ಕಾಮಗಾರಿ ಶೇ.97 ರಷ್ಟು ಪೂರ್ಣಗೊಂಡಿದೆ. 2,438 ಲಕ್ಷದ ಎರಡನೇ ಹಂತದ ಕಾಮಗಾರಿಗಳೂ ಸಹ ಶೇ.96 ರಷ್ಟು ಮುಗಿದಿದ್ದು, ಈ ತಿಂಗಳ ಕೊನೆಯ ಹಂತದಲ್ಲಿ ವಿದ್ಯುತ್ ಕಾಮಗಾರಿ ಸೇರಿದಂತೆ ಬಾಕಿ ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು ಎಂದು ಗುತ್ತಿಗೆದಾರರಿಗೆ ತಾಕೀತು ಮಾಡಿದರು.

ಕಾರ್ಡಿಯಾಲಜಿ, ಪ್ಲಾಸ್ಟಿಕ್ ಸರ್ಜರಿ, ಡಯಾಲಿಸಿಸ್ ಯಂತ್ರ, ಆರ್‌ಓ ಪ್ಲಾಂಟ್, ಬೆಡ್ ವ್ಯವಸ್ಥೆ ಹಾಗೂ ಇತರೆ ಸಾಮಾಗ್ರಿ ಅಳವಡಿಕೆ ಕಾರ್ಯ ಪೂರ್ಣಗೊಳಿಸಿ ಜನರಿಗೆ ಉಪಯುಕ್ತ ಆರೋಗ್ಯ ಸೇವೆ ನೀಡಲು ಮುಂದಾಗಬೇಕು ಎಂದು ಸಚಿವರು ನಿರ್ದೇಶನ ನೀಡಿದರು.

ನ್ಯೂರಾಲಜಿ ಸೇರಿದಂತೆ ಆಸ್ಪತ್ರೆಯಲ್ಲಿ ಖಾಲಿಯಿರುವ ವಿವಿಧ ವಿಭಾಗಗಳ ವೈದ್ಯರು ಮತ್ತು ಗ್ರೂಪ್-ಬಿ, ಸಿ ಹುದ್ದೆಗಳನ್ನು ಗುತ್ತಿಗೆ ಆಧಾರದಡಿ ಪಡೆಯಲು ಕೂಡಲೇ ಕ್ರಮವಹಿಸಬೇಕು ಎಂದು ನಿರ್ದೇಶಕರಿಗೆ ಸೂಚನೆ ನೀಡಿದರು.

ಸರ್ಕಾರದ ಅನುದಾನದಲ್ಲಿ ನಿರ್ಮಾಣಗೊಳ್ಳುತ್ತಿರುವ ಈ ಆಸ್ಪತ್ರೆಯು, ಅನುದಾನದ ಕೊರತೆಯಾದಲ್ಲಿ ಡಿಎಂಎಫ್, ಕೆಎಂಇಆರ್‌ಸಿ ಹಾಗೂ ಸಿಎಸ್‌ಆರ್ ಅನುದಾನಕ್ಕಾಗಿ ಜಿಲ್ಲಾಧಿಕಾರಿ ಗಮನಕ್ಕೆ ತರಬೇಕು ಎಂದರು.

ಕಳೆದ 2 ತಿಂಗಳುಗಳಿಂದ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಹೊರರೋಗಿ ವಿಭಾಗ ಕಾರ್ಯನಿರ್ವಹಿಸುತ್ತಿದೆ. ಇನ್ನೊಂದು ತಿಂಗಳಲ್ಲಿ ಒಳರೋಗಿ ವಿಭಾಗ ಆರಂಭಿಸಲಾಗುವುದು ಎಂದು ಬಿಎಂಸಿಆರ್‌ಸಿ ನಿರ್ದೇಶಕ ಡಾ.ಗಂಗಾಧರ ಗೌಡ ಅವರು ಸಚಿವರ ಗಮನಕ್ಕೆ ತಂದರು.

ವಿದ್ಯುತ್ ಪೂರೈಕೆಯ ಪರಿವರ್ತಕ ಅಳವಡಿಕೆ ಕಾರ್ಯ, ವಿವಿಧ ಅಗತ್ಯ ಸಾಮಾಗ್ರಿ-ಸಲಕರಣೆ ಪೂರೈಕೆ ಬಾಕಿವಿವಿಧ ಅಗತ್ಯ ಸಾಮಾಗ್ರಿ-ಸಲಕರಣೆ ಪೂರೈಕೆ ಬಾಕಿ ಇದ್ದು, ಉಳಿದಂತೆ ಎಲ್ಲಾ ಕಾರ್ಯ ಮುಗಿದಿದ್ದು, ನವೆಂಬರ್ ತಿಂಗಳ ಅಂತ್ಯಕ್ಕೆ ಎಲ್ಲಾ ಕಾಮಗಾರಿ ಪೂರ್ಣಗೊಳಿಸಿ ಸಾರ್ವಜನಿಕರ ಅಗತ್ಯ ಸೌಲಭ್ಯಕ್ಕೆ ಪೂರ್ಣ ಪ್ರಮಾಣದಲ್ಲಿ ಲಭ್ಯವಾಗಲಿದೆ ಎಂದು ಸಭೆಗೆ ತಿಳಿದರು.

ಸಭೆಯಲ್ಲಿ ಬಿಎಂಸಿಆರ್‌ಸಿ, ಟಿಬಿ ಆಸ್ಪತ್ರೆಗಳಲ್ಲಿ ಕೆಎಂಇಆರ್‌ಸಿ ಯೋಜನೆಯಡಿ ಕೈಗೊಂಡ ವಿವಿಧ ಕಾಮಗಾರಿಗಳ ಕುರಿತು ಸುದೀರ್ಘ ಚರ್ಚೆ ನಡೆಸಿ ಮಾಹಿತಿ ಪಡೆದುಕೊಂಡರಲ್ಲದೇ, ಇದೇ ವೇಳೆ ಅಗತ್ಯ ಸಲಹೆ ಸೂಚನೆ ನೀಡಿದರು.

*26 ಎಕರೆ ಪ್ರದೇಶದಲ್ಲಿ ಕ್ಯಾನ್ಸರ್ ಆಸ್ಪತ್ರೆ ನಿರ್ಮಾಣ:*

ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಆವರಣದಲ್ಲಿ ಗುರುತಿಸಿದ 26 ಎಕರೆ ಪ್ರದೇಶದಲ್ಲಿ ಕ್ಯಾನ್ಸರ್ ಆಸ್ಪತ್ರೆ ನಿರ್ಮಾಣಕ್ಕೆ ಡಿಪಿಆರ್ ಸಿದ್ಧವಿದ್ದು, ಸಮಿತಿಯಲ್ಲಿ ಅನುಮೋದನೆಗೊಂಡರೆ ಟೆಂಡರ್ ಕರೆದು ಕಾಮಗಾರಿ ಆರಂಭಿಸಲಾಗುವುದು ಎಂದು ಮಾಧ್ಯಮದವರಿಗೆ ತಿಳಿಸಿದರು.

ಬಳಿಕ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ವಿವಿಧ ವಿಭಾಗಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಮಹಮ್ಮದ್ ಮುಸೇನ್, ಬೆಂಗಳೂರು ವೈದ್ಯಕೀಯ ನಿರ್ದೇಶನಾಲಯದ ನಿರ್ದೇಶಕಿ ಸುಜಾತ ರಾಠೋಡ್, ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ., ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೇರ್ ಸೇರಿದಂತೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಮುಖ್ಯಸ್ಥರು, ಪ್ರಾಂಶುಪಾಲರು, ವೈದ್ಯಾಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

## ಖಜಾನೆ-2ರ ಕಾರ್ಯನಿರ್ವಹಣೆ, ಜಿಎಸ್‌ಟಿ ಮತ್ತು ಐಟಿ ಕುರಿತು ಕಾರ್ಯಾಗಾರ

**ಶಿವಮೊಗ್ಗ:** ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಶಿವಮೊಗ್ಗ ಶಾಖೆ ಹಾಗೂ ಶಿವಮೊಗ್ಗ ಜಿಲ್ಲಾ ಖಜಾನೆ ಇವರುಗಳ ಸಹಯೋಗದಲ್ಲಿ ಅ.16 ರಂದು ಬೆಳಗ್ಗೆ 10.00ಕ್ಕೆ ಸರ್ಕಾರಿ ನೌಕರರ ಸಭಾಂಗಣ, ಡಿಸಿ.ಕಚೇರಿ ಆವರಣ, ಶಿವಮೊಗ್ಗದಲ್ಲಿ ಖಜಾನೆ-2ರ ಕಾರ್ಯನಿರ್ವಹಣೆ ಹಾಗೂ ಜಿಎಸ್‌ಟಿ ಮತ್ತು ಆದಾಯ ತೆರಿಗೆ ಕುರಿತು ಕಾರ್ಯಾಗಾರವನ್ನು ಆಯೋಜಿಸಲಾಗಿದೆ.

ಶಿವಮೊಗ್ಗ ತಾಲೂಕಿನ ಎಲ್ಲಾ ಸರ್ಕಾರಿ ಕಚೇರಿಗಳಿಂದ ಒಬ್ಬರಿಗೆ ಮಾತ್ರ ಕಾರ್ಯಾಗಾರದಲ್ಲಿ ಭಾಗವಹಿಸುವ ಅವಕಾಶವನ್ನು ಕಲ್ಪಿಸಲಾಗಿದ್ದು, ಈ ಅವಕಾಶದ ಸದುಪಯೋಗ ಪಡೆದುಕೊಳ್ಳುವಂತೆ ಜಿಲ್ಲಾ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಸರ್ವೇಕ್ಷಣಾಲಯದ ಸಿಬ್ಬಂದಿಗಳ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ

**ಶಿವಮೊಗ್ಗ:** ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಜಿಲ್ಲಾ ಸರ್ವೇಕ್ಷಣಾಧಿಕಾರಿಗಳ ಅಧೀನದಲ್ಲಿ ಬರುವ ವಿವಿಧ ಕಾರ್ಯಕ್ರಮಗಳ ಖಾಲಿ ಇರುವ ತಜ್ಞ ವೈದ್ಯರು, ವೈದ್ಯರು ಮತ್ತು ಅರೆವೈದ್ಯಕೀಯ ಸಿಬ್ಬಂದಿಗಳ ಹುದ್ದೆಗೆ ಏರ್ಪಡಿಸಲಾಗಿದ್ದ ನೇರಸಂದರ್ಶನದಲ್ಲಿ ಹಾಜರಾದವರ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸಿ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ. ಈ ಪಟ್ಟಿಗೆ ಆಕ್ಷೇಪಣೆಗಳಿದ್ದಲ್ಲಿ ಅ.21 ರೊಳಗಾಗಿ ಲಿಖಿತ ರೂಪದಲ್ಲಿ ಸಲ್ಲಿಸುವಂತೆ ಜಿಲ್ಲಾ ಸರ್ವೇಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.


## ಅ.27 ರಿಂದ ವಿವಿಧ ಪಶುಪಾಲನಾ ಚಟುವಟಿಕೆಗಳ ತರಬೇತಿ ಆರಂಭ

**ಹಾಸನ :** ಹಾಸನ ಜಿಲ್ಲೆಯ ರೈತರಿಗೆ, ರೈತ ಮಹಿಳೆಯರಿಗೆ ಹಾಗೂ ಆಸಕ್ತಿಯುಳ್ಳ ಎಲ್ಲರಿಗೂ ಪಶು ಪಾಲನಾ ಇಲಾಖೆಯ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ಹಾಸನ ವತಿಯಿಂದ ವಿವಿಧ ಪಶುಪಾಲನಾ ಚಟುವಟಿಕೆಗಳ ತರಬೇತಿಯನ್ನು ಏರ್ಪಡಿಸಲಾಗಿದೆ. ತರಬೇತಿಯಲ್ಲಿ ಭಾಗವಹಿಸುವ ಶಿಭಿರಾರ್ಥಿಗಳಿಗೆ ಯಾವುದೇ ಪ್ರಯಾಣ ಭತ್ಯೆ ಅಥವಾ ಸ್ಟೈಪಂಡ್ ನೀಡಲಾಗುವುದಿಲ್ಲ. ಆಸಕ್ತಿಯುಳ್ಳವರು ಆಧಾರ್ ಕಾರ್ಡ್, ಪರಿಶಿಷ್ಟ ಜಾತಿ / ಪಂಗಡಕ್ಕೆ ಸೇರಿದವರು ಜಾತಿ ಪ್ರಮಾಣ ಪತ್ರ ಜೆರಾಕ್ಸ್ ಪ್ರತಿ ಹಾಗೂ ಎರಡು ಭಾವಚಿತ್ರದೊಂದಿಗೆ ತರಬೇತಿ ಪ್ರಾರಂಭವಾಗುವ ದಿನಾಂಕದಂದು ಬೆಳಿಗ್ಗೆ 10.30 ಗಂಟೆಯೊಳಗೆ ಉಪ ನಿರ್ದೇಶಕರ ಕಚೇರಿ, ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ಬಿ.ಎಂ ರಸ್ತೆ ಸಂತೇಪೇಟೆ, ಹಾಸನದಲ್ಲಿ ಹಾಜರಾಗಬೇಕೆಂದು ತಿಳಿಸಿದೆ.ತರಬೇತಿ ವಿವರ : ರೈತರಿಗೆ ಆಧುನಿಕ ಕುರಿ ಮತ್ತು ಮೇಕೆ ಸಾಕಣಿಕೆ ತರಬೇತಿ ಅ.27 ರಿಂದ ಅ.28 ರವರೆಗೆ, ರೈತರಿಗೆ ವೈಜ್ಞಾನಿಕ ಆಧುನಿಕ ಕೋಳಿ ಸಾಕಣಿಕೆ ತರಬೇತಿ ಅ.30 ಮತ್ತು ಅ.31 ರವರೆಗೆ ಆಗಿದೆ.

## ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಶಿಡ್ಲಘಟ್ಟ ತಾಲ್ಲೂಕು ವ್ಯಾಪ್ತಿಗೆ ಬರುವ 2006-07ನೇ ಸಾಲಿನಲ್ಲಿ (ದಿ.01.04.2006 ರಿಂದ ದಿ.31.03.2007) ರ ಅವಧಿಯಲ್ಲಿ ಜನಿಸಿದ ಹೆಣ್ಣು ಮಕ್ಕಳಿಗೆ ನೀಡಿರುವ ಭಾಗ್ಯಲಕ್ಷ್ಮೀ ಬಾಂಡ್ ಅರ್ಹ ಫಲಾನುಭವಿಗಳು 2006-07ನೇ ಸಾಲಿನಲ್ಲಿ (ದಿ.01.04.2006 ರಿಂದ ದಿ.31.03.2007) ರ ಅವದಿಯಲ್ಲಿ ಜನಿಸಿ ಭಾಗ್ಯಲಕ್ಷ್ಮಿ ಬಾಂಡ್ ಹೊಂದಿದ್ದು ಪರಿಪಕ್ವ ಮೊತ್ತ ಪಡೆಯದೇ ಇರುವ ಅರ್ಹ ಫಲಾನುಭವಿಗಳು ಕೂಡಲೇ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ, ನ್ಯೂ ಡಿಲೆಕ್ಸ್ ಬೇಕರಿ ಹಿಂಭಾಗ, ಕನಕ ನಗರ, ಶಿಡ್ಲಘಟ್ಟ ಟೌನ್ ಇಲ್ಲಿ ದಿ.31.10.2025ರೊಳಗೆ ಸಂಪರ್ಕಿಸಿ ಅರ್ಜಿ ಸಲ್ಲಿಸಲು ಸಾರ್ವಜನಿಕರಿಗೆ ತಿಳಿಸಿದೆ. ಬಳಿಕ ಬಂದ ಅರ್ಜಿಗಳನ್ನು ಪರಿಗಣಿಸುವುದಿಲ್ಲ ಎಂದು ಶಿಡ್ಲಘಟ್ಟ ಶಿಶು ಅಭಿವೃದ್ಧಿ ಯೋಜನಾಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂಗನವಾಡಿಗಳಲ್ಲಿ ಶಿಕ್ಷಣದ ಜೊತೆಗೆ ಸಂಸ್ಕಾರ ಕಲಿಸಿ



**ಚಿಕ್ಕಮಗಳೂರು:** ಶಾಲಾ ಪೂರ್ವ ಶಿಕ್ಷಣ ವ್ಯವಸ್ಥೆಯಲ್ಲಿ ವಿದ್ಯೆಯ ಜೊತೆಗೆ ವಿನಯ, ಸಂಸ್ಕೃತಿ, ಸಂಸ್ಕಾರವನ್ನು ಬೆಳೆಸುವುದು ಅಗತ್ಯ ಎಂದು ಉಜಿನಿ ಬನ್ನಿ ಕಾಳಿಕಾಂಭ ದೇವಸ್ಥಾನದ ಧರ್ಮಾಧಿಕಾರಿ ಗೋಪಾಲಗೌಡ ಕರೆನೀಡಿದರು.

ಅವರು ಹೊಸಪೇಟೆ ಉಜಿನಿ ಚಾಮುಂಡೇಶ್ವರಿ ಯುವಕ ಸಂಘದ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿ.ಪಂ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಾರ್ತಾ ಮತ್ತು ಪ್ರಚಾರ ಇಲಾಖೆ, ಆರೋಗ್ಯ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ತೋಟಗಾರಿಕೆ ಇಲಾಖೆ, ಜಿಲ್ಲಾ ಆಯುಷ್ ಇಲಾಖೆ, ಬಿದರೆ ಗ್ರಾ.ಪಂ ಹಾಗೂ ಶಿಶು ಅಭಿವೃದ್ಧಿ ಯೋಜನೆ ಇವರುಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದ್ದ ಪೋಷಣ್ ಅಭಿಯಾನ ಯೋಜನೆಯಡಿ ರಾಷ್ಟ್ರೀಯ ಪೋಷಣ್ ಮಾಸಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಕ್ಕಳ ಬೆಳವಣಿಗೆಯಲ್ಲಿ ತಾಯಿಯ ಪಾತ್ರ ಬಹಳ ಮಹತ್ವವಾಗಿದ್ದು, ಉತ್ತಮ ಸಂಸ್ಕಾರವಂತ ಮಗು ಮುಂದೆ ದೇಶಕ್ಕೆ ಅಪಾರವಾದ ಕೊಡುಗೆ ನೀಡುತ್ತದೆ ಎಂದು ಕಿವಿಮಾತು ಹೇಳಿದರು.

ಶಿರವಾಸೆ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಮಮತ ಮಾತನಾಡಿ, ಗರ್ಭಿಣಿಯರು, ಬಾಣಂತಿಯರು, ಮಕ್ಕಳು ಆರೋಗ್ಯವಾಗಿರಬೇಕಾದರೆ ಪೌಷ್ಠಿಕ ಆಹಾರ ಸೇವನೆ ಅಗತ್ಯ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಶ್ರೀನಿವಾಸ್ ವೈ ಆಲದಾರ್ತಿ, ನಿರೂಪಣಾಧಿಕಾರಿ ಸಂತೋಷ್.ಡಿ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ರಂಗನಾಥ್.ಸಿ, ಸಹಾಯಕ ಶಿಶು ಅಭಿವೃದ್ಧಿ ಅಧಿಕಾರಿ ರೂಪಾಕುಮಾರಿ.ಜೆ, ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ರಜತಿ ಉಪಸ್ಥಿತರಿದ್ದರು.

ಮಲ್ಲಿಚಾರಕಿ ಪುಷ್ಪ ಸ್ವಾಗತಿಸಿದರು. ಶಿರವಾಸೆ ವೃತ್ತದ ಅಂಗನವಾಡಿ ಕಾರ್ಯಕರ್ತೆಯರಾದ ಧನಲಕ್ಷ್ಮಿ, ಶಾಂತ, ಜಯಂತಿ, ರಮ್ಯ, ರೇಣುಕ, ಸಾವಿತ್ರಿ, ನೇತ್ರ, ಶೈಲ, ಇಂದಿರಾ, ಪ್ರೀತಿ, ರತ್ನ, ರಚಿತ, ಶೈಲ, ಶೃತಿ ಭಾಗವಹಿಸಿದ್ದರು.

## ಅರ್ಜಿ ಆಹ್ವಾನ

**ರಾಮನಗರ:** ಬೆಂಗಳೂರು ದಕ್ಷಿಣ (ರಾಮನಗರ) ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಲ್ಲಿರುವ ಕಾನೂನು ನೆರವು ಅಭಿರಕ್ಷಕರ ಕಚೇರಿ (ಎಲ್‌ಎಡಿಸಿಎಸ್)ಗೆ ಉಪ ಮುಖ್ಯ ಕಾನೂನು ನೆರವು ಅಭಿರಕ್ಷಕರ ಖಾಲಿ ಇರುವ ತಾತ್ಕಾಲಿಕ ಎರಡು ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವವರು ಕನಿಷ್ಠ 7 ವರ್ಷಗಳ ಕ್ರಿಮಿನಲ್ ಕಾನೂನಿನಲ್ಲಿ ಅಭ್ಯಾಸ ಮಾಡಿರಬೇಕು. ಕ್ರಿಮಿನಲ್ ಕಾನೂನಿನ ಬಗ್ಗೆ ಅತ್ಯುತ್ತಮ ತಿಳುವಳಿಕೆ ಹೊಂದಿರಬೇಕು. ಉತ್ತಮ ಮೌಖಿಕ ಮತ್ತು ಲಿಖಿತ ಸಂವಹನ ಕೌಶಲ್ಯಗಳನ್ನು ಹೊಂದಿರಬೇಕು.

## ಜಿಟಿಟಿಸಿ:ತರಬೇತಿಗಾಗಿ ಅರ್ಜಿ ಆಹ್ವಾನ

**ಬಳ್ಳಾರಿ:** ನಗರದ ರೇಡಿಯೋ ಪಾರ್ಕ್ ಬಳಿಯ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಲ್ಲಿ ಹತ್ತನೇ ತರಗತಿ ಉತ್ತೀರ್ಣರಾದ ಯುವಕರಿಗೆ 'ಟೂಲರೂಮ್ ಮಶಿನಿಸ್ಟ್' ತಾಂತ್ರಿಕ ದೀರ್ಘಾವತಿ ವೃತ್ತಿ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಒಂದೇ ಕೋರ್ಸಿನಲ್ಲಿ ಫಿಟ್ಟರ್ ಟರ್ನರ್, ಮಿಲ್ಲರ್, ಗ್ರೈಂಡರ್, ಸಿಎನ್‌ಸಿ, ಕ್ಯಾಡ್-ಕ್ಯಾಮ್ ಮತ್ತು ಟೂಲ್ ಆಂಡ್ ಡೈ ಮೇಕಿಂಗ್ ಟ್ರೇಡ್‌ಗಳಲ್ಲಿ ಆನ್ ದಿ ಜಾಬ್ ತರಬೇತಿ ನೀಡಲಾಗುತ್ತದೆ.

ತರಬೇತಿ ಪಡೆದ ಅಭ್ಯರ್ಥಿಗಳಿಗೆ ಕೈಗಾರಿಕೆಗಳಲ್ಲಿ ಹೆಚ್ಚಿನ ಬೇಡಿಕೆ ಇದ್ದು, ವಿದ್ಯಾರ್ಥಿಗಳಿಗೆ ಹೆಚ್ಚು ಉದ್ಯೋಗಾವಕಾಶಗಳು ದೊರಕುತ್ತವೆ. ಜೊತೆಗೆ ಅಟೋಕ್ಯಾಡ್, ಕನ್ನಡ ಮತ್ತು ಇಂಗ್ಲಿಷ್ ಭಾಷಾ ಕೌಶಲ್ಯ ಹಾಗೂ ಉದ್ಯೋಗ ಕೌಶಲ್ಯಗಳನ್ನು ಕಲಿಸಿಕೊಡಲಾಗುತ್ತದೆ. ತರಬೇತಿಯ ನಂತರ ವಿದ್ಯಾರ್ಥಿಗಳಿಗೆ ಟೂಲಿಂಗ್, ವಿಮಾನ ತಯಾರಿಕೆ ಮತ್ತು ಅಟೋಮೊಬೈಲ್ ವಲಯಗಳ ಕೈಗಾರಿಕೆಗಳಲ್ಲಿ ಉದ್ಯೋಗ ದೊರಕಿಸಿ ಕೊಡಲಾಗುವುದು.

ಮೆಕ್ಯಾನಿಕಲ್, ಎಲೆಕ್ಟ್ರಾನಿಕ್, ಎಲೆಕ್ಟ್ರೀಕಲ್ ಡಿಪ್ಲೋಮಾ ಮತ್ತು ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ಡಿಸೆಂಬರ್ ಮಾಹೆಯಿಂದ ಇಂಟರ್ನ್‌ಶಿಪ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು.

*ಕೋರ್ಸ್ ಗಳ ವಿವರ:*

ಟೂಲ್ ರೂಮ್ ಮಶಿನಿಸ್ಟ್- ಎಸ್‌ಎಸ್‌ಎಲ್‌ಸಿ (1 ವರ್ಷ ಅವಧಿ), ಡಿಸೈನರ್ ಮೆಕಾನಿಕಲ್- ಐಟಿಐ/ಡಿಪ್ಲೋಮಾ/ಬಿಇ (4 ತಿಂಗಳು), ಡ್ರಾಫ್ಟ್ ಮನ್ ಮೆಕಾನಿಕಲ್- ಎಸ್‌ಎಸ್‌ಎಲ್‌ಸಿ/ಐಟಿಐ (4 ತಿಂಗಳು), ಇಂಡಸ್ಟ್ರೀಯಲ್ ಆಟೋಮೇಶನ್- ಐಟಿಐ/ಡಿಪ್ಲೋಮಾ/ಬಿಇ (4 ತಿಂಗಳು), ಪಿಎಲ್‌ಸಿ, ಹೆಎಂಐ ಮತ್ತು ಎಸ್‌ಸಿಎಡಿಎ- ಐಟಿಐ/ಡಿಪ್ಲೋಮಾ/ಬಿಇ (4 ತಿಂಗಳು) ಹಾಗೂ ಕಚೇರಿ ನಿರ್ವಹಣೆ- ಹತ್ತನೇ ತರಗತಿ ಫೇಲ್ (4 ತಿಂಗಳು).

ಜಿಟಿಟಿಸಿ ತರಬೇತಿ ಕೇಂದ್ರದಲ್ಲಿ ಹಲವಾರು ಉನ್ನತ ತಂತ್ರಜ್ಞಾನ ಮತ್ತು ಸೌಕರ್ಯಗಳನ್ನು ಅಳವಡಿಸಿಕೊಳ್ಳಲಾಗಿದೆ. ಇಲ್ಲಿ ಕೈಗಾರಿಕೆಗಳಲ್ಲಿ ಅನುಭವ ಹೊಂದಿದ ಪ್ರಶಿಕ್ಷಕರಿಂದ ವಿದ್ಯಾರ್ಥಿಗಳಿಗೆ ತರಬೇತಿ ನೀಡಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ನಗರದ ಐ.ಟಿ.ಐ ಕ್ಯಾಂಪಸ್ ನ ಜಿ.ಟಿ.ಟಿ.ಸಿ ಕೇಂದ್ರ ಅಥವಾ ಮೊ.9972320076, 9620057086 ಗೆ ಸಂಪರ್ಕಿಸಬಹುದು ಎಂದು ಕೇಂದ್ರದ ಪ್ರಾಚಾರ್ಯ ಮುತ್ತಣ್ಣ ದರ್ಮಂತಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರಿ ಜಾಗದಲ್ಲಿ ಆರ್‌ಎಸ್‌ಎಸ್ ಚಟುವಟಿಕೆ ನಿಷೇಧ

**ಬೆಂಗಳೂರು :** ರಾಜ್ಯದ ಸರ್ಕಾರಿ ಶಾಲೆಗಳು ಮತ್ತು ಸರ್ಕಾರಿ ಸ್ಥಳಗಳಲ್ಲಿ ರಾಷ್ಟ್ರೀಯ ಸ್ವಯಂಸೇವಕ ಸಂಘದ ಚಟುವಟಿಕೆಗಳನ್ನು ನಿಷೇಧಿಸಬೇಕು ಎಂದು ಕೋರಿ ಗ್ರಾಮೀಣ ಅಭಿವೃದ್ಧಿ ಮಂತ್ರಿ ಪ್ರಿಯಾಂಕ ಖರ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಮಾಡಿ ಬರೆದಿದ್ದ ಪತ್ರ ವಿವಾದ ಸೃಷ್ಟಿಸಿರುವ ಬೆನ್ನಲ್ಲೇ ಇಂತಹ ಆದೇಶ ಈ ಮೊದಲೇ ಜಾರಿಯಲ್ಲಿರುವ ಅಂಶ ಬೆಳಕಿಗೆ ಬಂದಿದೆ.

ಹಾಲಿ ಬೆಳಗಾವಿ ಕ್ಷೇತ್ರದ ಸಂಸದರಾಗಿರುವ ಬಿಜೆಪಿ ನಾಯಕ ಜಗದೀಶ್ ಶೆಟ್ಟರ್ ಅವರು ರಾಜ್ಯದ ಮುಖ್ಯಮಂತ್ರಿ ಆಗಿದ್ದ ವೇಳೆ ಸರ್ಕಾರಿ ಶಾಲೆಗಳು ಮತ್ತು ಶಾಲಾ ಮೈದಾನಗಳಲ್ಲಿ ಸಂಘ ಪರಿವಾರ ಸೇರಿದಂತೆ ಯಾವುದೇ ಖಾಸಗಿ ಸಂಘ-ಸಂಸ್ಥೆಗಳ ಚಟುವಟಿಕೆಗಳು ನಡೆಯದಂತೆ ನಿರ್ಭಂಧಿಸಿ ಹೊರಡಿಸಿದ್ದ ಆದೇಶ ಇದೀಗ ಬೆಳಕಿಗೆ ಬಂದಿದೆ. ಅಂದು ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರಾಗಿದ್ದ ಎಸ್ ಆರ್ ಉಮಾಶಂಕರ್ ಅವರ ಹೆಸರಿನಲ್ಲಿ ಅವರ ಸಹಿಯೊಂದಿಗೆ ಹೊರಡಿಸಿರುವ ಆದೇಶದಲ್ಲಿ ಸರ್ಕಾರಿ ಶಾಲೆಗಳು ಮತ್ತು ಶಾಲಾ ಮೈದಾನದಲ್ಲಿ ಶೈಕ್ಷಣಿಕ ಚಟುವಟಿಕೆಗಳನ್ನು ಹೊರತುಪಡಿಸಿ ಇನ್ನಿತರ ಯಾವುದೇ ಚಟುವಟಿಕೆಗಳನ್ನು ನಡೆಸಲು ಅವಕಾಶ ನೀಡಬಾರದು ಎಂದು ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

# ದಾವಣಗೆರೆಯಲ್ಲಿ ಶಿಕ್ಷಕರಿಂದ ಧರಣಿ, ಸಮೀಕ್ಷೆಯಿಂದ ಮುಕ್ತಿಗೆ ಮನವಿ



**ದಾವಣಗೆರೆ:** ಸರ್ಕಾರ ಜಾರಿಗೊಳಿಸಿದ ಶೈಕ್ಷಣಿಕ ಮತ್ತು ಸಾಮಾಜಿಕ ಸಮೀಕ್ಷೆ ಕಾರ್ಯದಲ್ಲಿ ಸಮೀಕ್ಷಾದಾರರಾಗಿ ನಿಯೋ ಜನೆಗೊಂಡಿರುವ ಸರ್ಕಾರಿ ನೌಕರರು ಮತ್ತು ಶಿಕ್ಷಕರ ಮೇಲೆ ಜಿಲ್ಲಾಡಳಿತ ಹಾಗೂ ಮೇಲಾ ಧಿಕಾರಿಗಳು ಮರು ಸಮೀಕ್ಷೆಗೆ ಅನಗತ್ಯ ಒತ್ತಡ ಹೇರುತ್ತಿರುವುದನ್ನು ವಿರೋಧಿಸಿ, ಜಿಲ್ಲಾ ಸರ್ಕಾರಿ ನೌಕರರ ಸಂಘದ ನೇತೃತ್ವದಲ್ಲಿ ಮಂಗಳವಾರ ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಿದರು.

ದಿಢೀರನೆ ಪ್ರತಿಭಟನೆ ನಿರ್ಧಾರ ಕೈಗೊಂಡ 500 ಕ್ಕೂ ಅಧಿಕ ಶಿಕ್ಷಕರು ಜಿಲ್ಲಾಧಿಕಾರಿ ಕಚೇರಿ ಎದುರು ಕೆಲ ಕಾಲ ಧರಣಿ ನಡೆಸಿ ನಾಳೆ ಯಿಂದ ಯಾವುದೇ ಕಾರಣಕ್ಕೂ ಮರು ಗಣ ತಿಗೆ ತೆರಳುವುದಿಲ್ಲ ಎಂದು ಪಟ್ಟು ಹಿಡಿದರು.

ರಾಜ್ಯ ಸರ್ಕಾರಿ ನೌಕರ ಸಂಘದ ಜಿಲ್ಲಾಧ್ಯಕ್ಷ ಹಾಗೂ ರಾಜ್ಯ ಉಪಾಧ್ಯಕ್ಷ ವೀರೇಶ ಒಡೇನಪುರ ಮಾತನಾಡಿ, ಜಿಲ್ಲೆ ಯಲ್ಲಿ ಶೇ. 97 ಕ್ಕಿಂತ ಹೆಚ್ಚು ಸಮೀಕ್ಷೆಯನ್ನು ಪೂರ್ಣಗೊಳಿಸಿದ್ದರೂ, ಜೀರೋ ದಿಂದ 6 ವರ್ಷದೊಳಗಿನ ಮಕ್ಕಳ ಮತ್ತು ರೇಷನ್ ಕಾರ್ಡ್ ಸಂಬಂಧಿತ ಮಾಹಿತಿಗಾಗಿ 'ಮರು ಸಮೀಕ್ಷೆ' ಮಾಡುವಂತೆ ಶಿಕ್ಷಕರಿಗೆ ಒತ್ತಾಯಿ ಸಲಾಗುತ್ತಿದೆ ಎಂದು ಆರೋಪಿಸಿದರು.

ಮೊದಲಿಗೆ 0–6 ವರ್ಷದ ಮಕ್ಕಳ ಗಣತಿ ಮಾಡದಂತೆ ಸೂಚಿಸಲಾಗಿತ್ತು. ಈಗ ಮರು ಸಮೀಕ್ಷೆಯಲ್ಲಿ ಈ ಮಕ್ಕಳ ಮಾಹಿತಿ ಯನ್ನು ಸಂಗ್ರಹಿಸಲು ಒತ್ತಾಯಿಸಲಾಗುತ್ತಿದೆ. ಈಗಾಗಲೇ ಗಣತಿ ಮಾಡಿದ ಮನೆಗಳಿಗೆ ಐದಾರು ಬಾರಿ ಭೇಟಿ ನೀಡಿದ್ದೇವೆ. ಮರು ಸಮೀಕ್ಷೆ ಮಾಡುವುದು ವ್ಯರ್ಥ ಎಂದರು. ಸಮೀಕ್ಷೆ ಆರಂಭದಲ್ಲಿ ತರಬೇತಿ ಕೊರತೆ ಇತ್ತು. ಯುಎಚ್‌ಐಡಿ ಸಂಖ್ಯೆಗಳನ್ನು ಸಲೂನ್ ಅಂಗಡಿಗಳು, ಖಾಲಿ ಬೋರ್ ವೆಲ್‌ಗಳು, ದೇವಸ್ಥಾನಗಳು, ಮಸೀದಿಗಳಿಗೆ ನೀಡಲಾಗಿದೆ. ಜಿಯೋ ಟ್ಯಾಗಿಂಗ್‌ನಿಂದ ಸರಿಯಾದ ಮನೆಯನ್ನು ಹುಡುಕಲು ಸಾಧ್ಯವಾಗದೆ ಸರ್ಕಾರಿ ನೌಕರರಿಗೆ ಅನಾನುಕೂಲತೆ ಆಗಿತ್ತು ಎಂದರು.

ಸಮೀಕ್ಷೆಗಾಗಿ ಮನೆಗಳಿಗೆ ತೆರಳಿದಾಗ ಕೆಲವು ಕಡೆ ನಾಯಿ ಕಚ್ಚುವ ಘಟನೆಗಳು ನಡೆದಿವೆ, ಹಲವು ಮನೆಗಳ ಬಾಗಿಲು ತೆರೆದಿಲ್ಲ. ಮಹಿಳಾ ಸರ್ಕಾರಿ ನೌಕರರಿಗೆ ಶೌಚಾ ಲಯದ ಸಮಸ್ಯೆಯಾಗಿದೆ. ಋತುಚಕ್ರದ ಸಂದರ್ಭದ ಲ್ಲಿಯೂ ಸಮೀಕ್ಷೆ ಮಾಡಬೇಕು ಎಂಬ ಒತ್ತಡಕ್ಕೆ ಒಳಗಾಗಿ ಚಿತ್ರಹಿಂಸೆ ಅನುಭವಿಸಿದ್ದಾರೆ.ಸಮೀಕ್ಷೆಗೆ ಹೋಗದವರಿಗೆ ಶಿಸ್ತು ಕ್ರಮ ಜರುಗಿಸುವುದಾಗಿ ಮತ್ತು ಮೇಲಾಧಿಕಾರಿ ಗಳಿಗೆ ವರದಿ ಮಾಡುವುದಾಗಿ ಬೆದರಿಕೆ ಸಂದೇಶಗಳು ಬರುತ್ತಿದ್ದು, ಇದರಿಂದ ನೌಕ ರರು ಮಾನಸಿಕ ಯಾತನೆ ಅನುಭವಿಸುತ್ತಿದ್ದಾರೆ ಎಂದು ನೌಕರ ಸಂಘದ ಮತ್ತೋರ್ವ ಪದಾಧಿಕಾರಿ ಹೇಳಿದರು.

ಎಸ್‌ಎಸ್‌ಎಲ್‌ಸಿ ರಿಸಲ್ಟ್ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದ್ದು, ದಯವಿಟ್ಟು ಪ್ರೌಢಶಾಲಾ ಶಿಕ್ಷಕರನ್ನು ಸಮೀಕ್ಷಾ ಕಾರ್ಯದಿಂದ ಮುಕ್ತಿಗೊಳಿಸಿ, ಪಾಠ ಮಾಡಲು ಅವಕಾಶ ಕಲ್ಪಿಸಬೇಕು.

ಎಂದು ಶಿಕ್ಷಕರ ಸಂಘದ ಅಧ್ಯಕ್ಷರು ಹೇಳಿದರು. ಸಮಸ್ಯೆಗಳ ಬಗ್ಗೆ ಮನವಿ ಸಲ್ಲಿಸಲು ಬಂದ ನಿಯೋಗಕ್ಕೆ ಜಿಲ್ಲಾಧಿಕಾರಿಗಳು, ಸರ್ಕಾರಿ ನೌಕರರಿಗೆ ಆಗಿರುವ ಸಮಸ್ಯೆಗಳು ತಮ್ಮ ಗಮನಕ್ಕೆ ಬಂದಿವೆ. ಈ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಒಂದು ಸಭೆಯನ್ನು ಆಯೋಜಿಸಿ ತೀರ್ಮಾನ ಕೈಗೊಳ್ಳುತ್ತೇವೆ ಮತ್ತು ನೌಕರರಿಗೆ ಆಗುತ್ತಿರುವ ಅನ್ಯಾಯವನ್ನು ಸರಿಪಡಿಸುವ ' ಕೆಲಸ ಮಾಡುವುದಾಗಿ ಭರವಸೆ ನೀಡಿದ್ದಾರೆ. ಈ ಸಭೆಯ ನಿರ್ಧಾರದ ನಂತರ ಮುಂದಿನ ನಡೆ ನಿರ್ಧರಿಸುವುದಾಗಿ ನೌಕರ ಸಂಘದ ಪದಾಧಿಕಾರಿಗಳು ತಿಳಿಸಿದರು.

# ಯುವಪೀಳಿಗೆ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಕರೆ







**ರಾಮನಗರ :** ಶಿಕ್ಷಣದೊಂದಿಗೆ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವ ಅಗತ್ಯ ಯುವಜನಾಂಗ ಹಿಂದೆದಿಗಿಂತಲೂ ಇದೀಗ ಹೆಚ್ಚು ಅನಿವಾರ್ಯವಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸತೀಶ್ ಅವರು ಅಭಿಪ್ರಾಯಪಟ್ಟರು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ನೆಹರು ಯುವ ಕೇಂದ್ರದ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ 2025–26ನೇ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಯುವಜನಾಂಗದವರ ಭಾಗವಹಿಸುವಿಕೆ ಕಡಿಮೆಯಾಗುತ್ತಿದೆ, ಶಿಕ್ಷಣದೊಂದಿಗೆ ಯುವಕರು, ಯುವತಿಯರು ವಿವಿಧ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡರೆ ಮಾನಸಿಕವಾಗಿ ಹೆಚ್ಚು ಬಲಾಢ್ಯರಾಗುತ್ತಾರೆ, ಇತ-ರೆ ಚಟುವಟಿಕೆಗಳ ಕಡೆಗಿನ ಗಮನ ಕಡಿಮೆಯಾಗಿ, ಜೀವನದಲ್ಲಿ ಏಳಿಗೆಗೆ ಕಾರಣವಾಗಲಿದೆ ಎಂದರು.

ಜೀವನದಲ್ಲಿ ಸಾಂಸ್ಕೃತಿಕ ಕಾರ್ಯಕ್ರಗಳು, ಕ್ರೀಡೆಗಳು ಅವಶ್ಯಕ. ಯುವಕರು ಸನ್ಮಾರ್ಗದಲ್ಲಿ ನಡೆದು ಇತರರಿಗೆ ಸಹಾಯ ಮಾಡುವುದರ ಜೊತೆಗೆ ಸಮಾಜಕ್ಕೆ ಒಳ್ಳೆಯ ಕೊಡುಗೆಯನ್ನು ನೀಡಬೇಕು, ಸಮಾಜ ನಮಗೇ ಏನು ನೀಡಿದೆ ಎನ್ನುವುದಕ್ಕಿಂತ ಸಮಾಜಕ್ಕೆ ನಾವು ಏನು ಮಾಡಿದ್ದೇವೆ ಎನ್ನುವುದು ಬಹಳ ಮುಖ್ಯ, ಯುವಕ, ಯುವತಿಯರು ಸ್ಪರ್ಧಾತ್ಮಕ ಪರೀಕ್ಷೆಗಳ ಕಡೆ ಹೆಚ್ಚು ಗಮನ ಕೊಟ್ಟರೆ ಭವಿಷ್ಯದಲ್ಲಿ ಉತ್ತಮ ಜೀವನ ದೊರೆಯುತ್ತದೆ ಎಂದರು.

ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಅನಿತಾ ಅವರು ಮಾತನಾಡಿ, ಸಂಸ್ಕೃತಿ ಉಳಿಸಿ, ಬೆಳೆಸುವಲ್ಲಿ ಯುವ ಜನತೆಯ ಪಾತ್ರ ಬಹುಮುಖ್ಯವಾಗಿದೆ. ಈ ನಿಟ್ಟಿನಲ್ಲಿ ಯುವ ಜನರು ನಾಟಕ, ನೃತ್ಯ, ಜನಪದ ಸಂಗೀತ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ತಮ್ಮ ಪ್ರತಿಭೆ ಪ್ರದರ್ಶಿಸಬೇಕು ಎಂದು ತಿಳಿಸಿದರು.

ಯುವಜನೋತ್ಸವ ಕಾರ್ಯಕ್ರಮದಲ್ಲಿ ಸುಮಾರು 350ಕ್ಕೂ ಹೆಚ್ಚು ವಿದ್ಯಾರ್ಥಿ, ವಿದ್ಯಾರ್ಥಿನಿಯರು ಸ್ಪರ್ಧಿಯಾಗಿ ಭಾಗವಹಿಸಿದ್ದಾರೆ. ಸ್ಪರ್ಧೆಯಲ್ಲಿ ಜನಪದ ಗೀತೆ, ಜನಪದ ನೃತ್ಯ, ಸ್ಟೋರಿ ರೈಟಿಂಗ್, ಕವಿತೆ ಬರೆಯುವುದು, ಘೋಷಣೆ, ವಿಜ್ಞಾನ ಮೇಳ ಹೀಗೆ ಹಲವು ಕಾರ್ಯಕ್ರಮಗಳನ್ನು ಆಯೋಜಿಸಿ ವಿದ್ಯಾರ್ಥಿಗಳ ಸುಪ್ತ ಪ್ರತಿಭೆ ಅನಾವರಣಕ್ಕೆ ವೇದಿಕೆ ಒದಗಿಸಲಾಗಿದೆ ಎಂದರು.

ಅಂಬೇಡ್ಕರ್ ಭವನದಲ್ಲಿ ಜನಪದ ನೃತ್ಯ, ಜನಪದ ಗೀತೆಗೆ ವೇದಿಕೆ ಕಲ್ಪಿಸಲಾಗಿದೆ. ಭಾರತೀಯ ವಿದ್ಯಾಪೀಠದಲ್ಲಿ ಕವಿತೆ ವಾಚನ, ಕವನ ಬರೆಯುವ, ಕಥೆ ಬರೆಯುವ ಸ್ಪರ್ಧೆ, ಚಿತ್ರಕಲೆ, ವಿಜ್ಞಾನ ಮೇಳ ಹತ್ತು ಹಲವು ರೀತಿಯ ಸ್ಪರ್ಧೆ ಆಯೋಜಿಸಲಾಗಿದೆ ಎಂದು ಮಾಹಿತಿ ನೀಡಿದರು. ಈ ಸ್ಪರ್ಧೆಗಳಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಪಡೆದ ಸ್ಪರ್ಧಿಗಳು ರಾಜ್ಯಮಟ್ಟದ ಯುವಜನೋತ್ಸವಕ್ಕೆ ಆಯ್ಕೆಗೊಳ್ಳುತ್ತಾರೆ. ಯಾದಗಿರಿ ಜಿಲ್ಲೆಯಲ್ಲಿ ರಾಜ್ಯಮಟ್ಟದ ಸ್ಪರ್ಧೆ ನಡೆಯಲಿದ್ದು, ಅಲ್ಲಿ ವಿಜೇತರಾವರು ರಾಷ್ಟ್ರೀಯ ಮಟ್ಟಕ್ಕೆ ಅರ್ಹರಾಗುತ್ತಾರೆ. ಬೆಂಗಳೂರು ದಕ್ಷಿಣ ಜಿಲ್ಲೆಯ ನಾಲ್ಕು ತಾಲ್ಲೂಕುಗಳಿಂದ ಆಗಮಿಸಿರುವ ಸ್ಪರ್ಧಿಗಳು ಉತ್ಸುಕರಾಗಿ ಭಾಗವಹಿಸಿ, ಕಾರ್ಯಕ್ರಮ ಯಶಸ್ವಿಗೊಳಿಸಿದ್ದಾರೆ. ಎಲ್ಲ ಸ್ಪರ್ಧಿಗಳಿಗೆ ಹಾಗೂ ತೀರ್ಪುಗಾರರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ದೈಹಿಕ ವಿಷಯ ಅಧಿಕಾರಿ ಸುಂದರ್ ಗೌಡ, ಜಾನಪದ ಕಲೆಗಳ ಪರಿಣಿತರಾದ ಕುರುವ ಬಸವರಾಜ್, ರಾಜ್ಯಯುವ ಪ್ರಶಸ್ತಿ ವಿಜೇತರಾದ ಹನುಮಂತ ನಾಯ್ಕ, ಯುವ ಪ್ರಶಸ್ತಿ ವಿಜೇತಾರಾದ ನಂಜುಂಡಿ, ಕುಂಬಾಪುರ ಬಾಬು, ಅಂಕನಳ್ಳಿ ಪಾರ್ಥ, ಹಿರಿಯ ಜಾನಪದ ಕಲಾವಿದರಾದ ಗೋವಿಂಯ್ಯ, ಪುಟ್ಟರಾಜು, ಬ್ಯಾಡರಹಳ್ಳಿ ಶಿವಕುಮಾರ್, ನಮನ ಚಂದ್ರು ಹಾಗೂ ಇತರರು ಉಪಸ್ಥಿತರಿದ್ದರು.

# ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳ ಪ್ರವಾಸ

**ಚಿಕ್ಕಮಗಳೂರು, ಅ.16:** ರಾಜ್ಯ ಸರ್ಕಾರದ ಕಂದಾಯ ಇಲಾಖೆ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಶ್ರೀ ರಾಜೇಂದರ್ ಕುಮಾರ್ ಕಟಾ-ರಿಯಾ ಅವರು ಅಕ್ಟೋಬರ್ 17 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ.

ಅಂದು ಬೆಳಿಗ್ಗೆ 9.30 ಗಂಟೆಗೆ ಚಿಕ್ಕಮಗಳೂರು ನಗರ-ಕ್ಕೆ ಆಗಮಿಸಲಿರುವ ಅವರು ಬೆಳಿಗ್ಗೆ 10 ರಿಂದ 10.30 ಗಂಟೆಯವರೆಗೆ ಕಡೂರು ಮತ್ತು ಮೂಡಿಗೆರೆ ತಾಲ್ಲೂಕಿನ ಅಕ್ರಮ ಭೂ ಮಂಜೂರಾತಿಯ ಬಗ್ಗೆ ರಚಿಸಲಾದ ತನಿಖಾ ತಂಡದ ವರದಿಯ ಪರಿಶೀಲನೆ ಮಾಡುವರು. 10.30 ರಿಂದ 11 ಗಂಟೆಯವರೆಗೆ ಜಂಟಿ ಸರ್ವೆಯ ಕುರಿತು ಅರಣ್ಯ ಮತ್ತು ಕಂದಾಯ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚೆ ನಡೆಸುವರು.

ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ನಗರದ ಜಿ.ಪಂ. ಸಭಾಂಗಣದಲ್ಲಿ ಜಿಲ್ಲೆಯ ಸಮಗ್ರ ಅಭಿವೃದ್ಧಿ ಕುರಿತು ಪ್ರಗತಿ ಪರಿಶೀಲನೆ ನಡೆಸುವರು. ಮಧ್ಯಾಹ್ನ 2.30 ರಿಂದ 4.30ರವರೆಗೆ ಕ್ಷೇತ್ರೀಯ ಪರಿಶೀಲನೆ ನಡೆಸುವರು. ಸಂಜೆ 5 ಗಂಟೆಗೆ ಚಿಕ್ಕಮಗಳೂರಿನಿಂದ ಬೆಂಗಳೂರಿಗೆ ತೆರಳುವರು ಎಂದು ಉಸ್ತುವಾರಿ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಖಾದಿ ಖಾಕಿ ಕಾವಿ ನಿರ್ಮಲ ಮನಸ್ಸಿನಿಂದ ಶ್ರಮಿಸಿದರೆ ಜನಕಲ್ಯಾಣ ಸಾಧ್ಯ : ರಂಭಾಪುರಿ ಶ್ರೀ

ಕುಷ್ಟಗಿ: ಭಾರತೀಯ ಸಂಸ್ಕೃತಿ ಮತ್ತು ಪರಂಪರೆ ಅತ್ಯಂತ ಪಾವಿತ್ರ್ಯತೆಯನ್ನು ಹೊಂದಿದೆ. ಧರ್ಮ ಮತ್ತು ಭಾವೈಕ್ಯತೆ ಭಾರತದ ಉಸಿರು. ಖಾದಿ ಖಾಕಿ ಮತ್ತು ಕಾವಿ ಜನಾಂಗವು ನಿರ್ಮಲ ಮನಸ್ಸಿನಿಂದ ಶ್ರಮಿಸಿದರೆ ಜನಕಲ್ಯಾಣದ ಜೊತೆಗೆ ಲೋಕ ಕಲ್ಯಾಣವಾಗುವುದರಲ್ಲಿ ಯಾವುದೇ ಸಂದೇಹ ಇಲ್ಲವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ತಾಲೂಕಿನ ಚಳಗೇರಾ ಹಿರೇಮಠದ ಲಿಂ. ಶ್ರೀ ವಿರೂಪಾಕ್ಷಲಿಂಗ ಶಿವಾಚಾರ್ಯ ಸ್ವಾಮಿಗಳವರ 11ನೇ ವರ್ಷದ ಪುಣ್ಯ ಸ್ಮರಣೋತ್ಸವ ಹಾಗೂ ನವೀಕೃತ ಹಿರೇಮಠದ ಉದ್ಘಾಟನೆಯ ಅಂಗವಾಗಿ ಜರುಗಿದ ಜನಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯವಹಿಸಿ ಆಶೀರ್ವಚನ ನೀಡುತ್ತಿದ್ದರು.




ನಾಡಿನ ಮಠಗಳು ಹಾಗೂ ದೇವಸ್ಥಾನಗಳು ನಮ್ಮ ಸಂಸ್ಕೃತಿಯ ಸಂವರ್ಧನಾ ಕೇಂದ್ರಗಳಾಗಿವೆ. ಜನ ಮನವನ್ನು ತಿದ್ದುವ ಮತ್ತು ರಾಷ್ಟ್ರಾಭಿಮಾನವನ್ನು ಬೆಳೆಸುವ ಅದ್ಭುತ ತಾಣಗಳಾಗಿವೆ. ಜನರು ಯತಾರ್ಥ ಅರಿತು ಸಾತ್ವಿಕ ಸಮೃದ್ಧ ನಾಡನ್ನು ಕಟ್ಟಲು ಪ್ರಾಮಾಣಿಕ ಪ್ರಯತ್ನ ಮಾಡಬೇಕಾಗಿದೆ. ಧ್ಯಾನ ಜ್ಞಾನ ಮತ್ತು ಆಧ್ಯಾತ್ಮಿಕ ಚಿಂತನೆ ಮಾಡುವುದರಿಂದ ವ್ಯಕ್ತಿಯ ಆತ್ಮಸ್ಥೈರ್ಯ ಮತ್ತು ಮನೋಬಲ ವೃದ್ಧಿ ಸಾಧ್ಯವಾಗುತ್ತದೆ. ಸರ್ವ ಜನಾಂಗದ ತೋಟ ಈ ನಾಡು. ಎಲ್ಲರ ಮನೆ ಮನಗಳಲ್ಲಿರುವ ಬಿಕ್ಕಟ್ಟು ಹೋಗಿ ಒಗ್ಗಟ್ಟು ಮೂಡಿ ಬರಬೇಕಾಗಿದೆ. ಸದೃಢ ರಾಷ್ಟ್ರ ನಿರ್ಮಾಣದಲ್ಲಿ ಯುವ ಶಕ್ತಿಯ ಪಾತ್ರ ದೊಡ್ಡದು. ಆಲಸ್ಯ ಮತ್ತು ದುರ್ವ್ಯಸನಗಳಿಂದ ದೂರವಾಗಿ ಸಮಾಜವನ್ನು ಕಟ್ಟಿ ಬೆಳೆಸುವ ನಿಟ್ಟಿನಲ್ಲಿ ಯುವ ಜನಾಂಗ ಗಟ್ಟಿಹೆಜ್ಜೆಯನ್ನಿಡುವ ಅಗತ್ಯವಿದೆ. ನೀರಿನಲ್ಲಿ ಸ್ನಾನ ಮಾಡಿದರೆ ಬಟ್ಟೆ ಬದಲಿಸಬಹುದು. ಅದೇ ಬೆವರಿನಲ್ಲಿ ಸ್ನಾನ ಮಾಡಿದರೆ ಇತಿಹಾಸವನ್ನು ಬದಲಿಸಬಹುದು. ಲಿಂ. ಶ್ರೀ ವಿರೂಪಾಕ್ಷಲಿಂಗ ಶಿವಾಚಾರ್ಯ ಸ್ವಾಮಿಗಳು ಮಾತು ಮನ ಕೃತಿಯಿಂದ ಒಂದಾಗಿ ಬಾಳಿದವರು. ಸರಳತೆಯ ಸಾಕಾರ ಮೂರ್ತಿಗಳಾದ ಶ್ರೀಗಳವರು ಮಾಡಿದ ಪೂಜಾ ತೋರಿದ ದಾರಿ ಮತ್ತು ಭಕ್ತರ ಮೇಲಿಟ್ಟಿರುವ ವಾತ್ಸಲ್ಯ ಅವರ ಜೀವನದ ಶ್ರೇಯಸ್ಸಿಗೆ ಕಾರಣವೆಂದರೆ ತಪ್ಪಾಗದು. ಇಂದಿನ ವೀರಸಂಗಮೇಶ್ವರ ಶಿವಾಚಾರ್ಯ ಸ್ವಾಮಿಗಳವರು ಅದೇ ದಾರಿಯಲ್ಲಿ ಮುನ್ನಡೆದು ಭಕ್ತರ ಬಾಳಿಗೆ ಬೆಳಕು ತೋರುತ್ತಿರುವುದು ತಮಗೆ ಹರುಷ ತಂದಿದೆ ಎಂದರು. ಸಾನ್ನಿಧ್ಯ ವಹಿಸಿದ ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳು ತಮ್ಮ ಆಶೀರ್ವಚನದಲ್ಲಿ ವಿಜ್ಞಾನ ಮನುಕುಲದ ಉನ್ನತಿಗೆ ಇರಬೇಕೇ ಹೊರತು ವಿನಾಶಕ್ಕಲ್ಲ. ವಿಜ್ಞಾನವನ್ನು ವಿನಾಶಕ್ಕಾಗಿ ಎಂದೂ ಬಳಸಬಾರದು. ಭೌತಿಕ ಜೀವನ ಸಮೃದ್ಧಗೊಂಡಂತೆ ಆಂತರಿಕ ಜೀವನ ಪರಿಶುದ್ಧಗೊಳ್ಳಬೇಕಾಗಿದೆ. ಭೌತಿಕ ಬದು-ಕಿಗೆ ಸಂಪತ್ತಷ್ಟೇ ಮುಖ್ಯವಲ್ಲ ಅದರೊಂದಿಗೆ ಧರ್ಮ ಪ್ರಜ್ಞೆ ಮತ್ತು ಗುರು ಕಾರುಣ್ಯ ಮುಖ್ಯ. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಧರ್ಮದ ದಶವಿಧ ಸೂತ್ರಗಳು ಸಕಲರ ಬಾಳಿನಲ್ಲಿ ಬೆಳಕು ಮೂಡಿಸುತ್ತವೆ. ಲಿಂ. ಶ್ರೀ ವಿರೂಪಾಕ್ಷ ಶ್ರೀಗಳವರು ಒಬ್ಬ ಆಧ್ಯಾತ್ಮ ಸಾಧಕರಾಗಿದ್ದು ವೀರಶೈವ ಧರ್ಮ ಸಂಸ್ಕೃತಿಯನ್ನು ಜನಮನಕ್ಕೆ ತಲುಪಿಸಿದ ಶ್ರೇಯಸ್ಸು ಅವರದು. ಇಂದಿನ ವೀರಸಂಗಮೇಶ್ವರ ಶ್ರೀಗಳು ಮಠದ ಅಭಿವೃದ್ಧಿಗಾಗಿ ಸದಾ ಶ್ರಮಿಸುತ್ತಿದ್ದಾರೆ ಎಂದರು. ನೇತೃತ್ವ ವಹಿಸಿದ ಚಳಗೇರಾ ಹಿರೇಮಠದ ವೀರಸಂಗಮೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಆಧುನಿಕ ವಿಜ್ಞಾನ ಎಲ್ಲಿ ನಿರುತ್ತರವಾಗುವುದೋ ಅಲ್ಲಿಂದ ಭಾರತೀಯ ಆಧ್ಯಾತ್ಮ ಚಿಂತನೆ ಪ್ರಾರಂಭಗೊಳ್ಳುತ್ತದೆ ಎಂಬ ದಿವಂಗತ ರಾಷ್ಟ್ರಪತಿ ಡಾ॥ರಾಧಾಕೃಷ್ಣನ್ ಅವರ ಮಾತಿನಂತೆ ಧರ್ಮ ಮತ್ತು ಆಧ್ಯಾತ್ಮ ಸಾಧನೆಯಲ್ಲಿ ಬಹು ದೊಡ್ಡ ಶಕ್ತಿಯಿದೆ. ಬದುಕು ಬದಲಾಗಬೇಕಾದರೆ ಬದುಕುವ ದಾರಿ ಬದಲಾಗಬೇಕಾಗುತ್ತದೆ. ಲಿಂ.ವಿರೂಪಾಕ್ಷ ಶಿವಾಚಾರ್ಯರು ಯಾರನ್ನು ಕಾಡದೇ ಬೇಡದೇ ಎಲ್ಲ ಜನಾಂಗದವರನ್ನು ವಾತ್ಸಲ್ಯದಿಂದ ಕಂಡು ಅವರ ಬಾಳಿನಲ್ಲಿ ಬೆಳಕು ಮೂಡಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದರು. ಹೈದರಾಬಾದಿನಲ್ಲಿ ವಾಸವಾಗಿರುವ ಹೊಸಳ್ಳಿಯ ಕುಮಾರಸ್ವಾಮಿ ಹಿರೇಮಠರಿಗೆ "ಉದ್ಯಾನ್ಯ ಶಿಲ್ಪಿ" ಪ್ರಶಸ್ತಿ ಮತ್ತು ಬೆಂಗಳೂರಿನಲ್ಲಿ ವಾಸವಾಗಿರುವ ಹಿರೇಕೊಡಗಲಿಯ ಪಂಚಾಕ್ಷರಿ ಹಿರೇಮಠ ಅವರಿಗೆ "ವೀರಶೈವ ಯುವಸಿರಿ" ಪ್ರಶಸ್ತಿಯನ್ನು ಉಭಯ ಜಗದ್ಗುರುಗಳು ಪ್ರದಾನ ಮಾಡಿ ಶುಭ ಹಾರೈಸಿದರು. ಈ ಅಪೂರ್ವ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಬಿ.ಎಸ್.ಪಾಟೀಲ, ಮಾಜಿ ಶಾಸಕರಾದ ಕೆ.ಶರಣಪ್ಪ ವಕೀಲರು, ಹಸನಸಾಬ ದೋಟಿಹಾಳ ಪಾಲ್ಗೊಂಡು ಉಭಯ ಜಗದ್ಗುರುಗಳಿಂದ ಗುರುರಕ್ಷೆ ಸ್ವೀಕರಿಸಿದರು. ಇದೇ ಸಂದರ್ಭದಲ್ಲಿ 2 ಜೋಡಿ ಸಾಮೂಹಿಕ ವಿವಾಹ ಜರುಗಿ ನೂತನ ದಂಪತಿಗಳು ಜಗದ್ಗುರುಗಳ ಆಶೀರ್ವಾದ ಪಡೆದರು. ಬಸಯ್ಯಸ್ವಾಮಿ ಹಿರೇಮಠ, ಡಾ.ಸಂಗಮೇಶ ಹಿರೇಮಠ, ಡಾ.ಲೋಕೇಶ ಟೇಕಲ್, ಲತಾ ಚಂದ್ರಹಾಸ ಹೆರೂರ, ವೀರಯ್ಯಸ್ವಾಮಿ ಹಿರೇಮಠ, ವಿಠ್ಠಲ ಜಕ್ಕಾ, ಸವಿತಾ ಅಶೋಕ ಭಲವಾದಿ ಇವರಿಗೆ ಗೌರವ ಗುರುರಕ್ಷೆ ನೀಡಲಾಯಿತು. ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಅಧ್ಯಕ್ಷತೆ ವಹಿಸಿದ್ದರು.

ಸಮಾಂಭದಲ್ಲಿ ಮಂಗಳೂರು, ಕುಷ್ಟಗಿ, ಸಂಗೊಳ್ಳಿ, ಕೊತಬಾಳ, ಕಲಾದಗಿ, ಮೈನಳ್ಳಿ-ಬಿಕನಳ್ಳಿ, ಕುಕನೂರು, ಹಾರನಹಳ್ಳಿ, ಕೆಸೂರು-ದೋಟಿಹಾಳ, ಸಿಂಧಗಿ, ಹೆಬ್ಬಾಳ ಮಠಗಳ ಶ್ರೀಗಳು ಉಪಸ್ಥಿತರಿದ್ದರು. ಶ್ರೀ ಜಗದ್ಗುರು ರೇಣುಕಾಚಾರ್ಯರ ಮಂಗಲ ಮೂರ್ತಿಗೆ ಸ್ವರ್ಣ ಕಿರೀಟ ಧಾರಣೆ ಸೇವೆಯನ್ನು ಮುಧೋಳದ ಶ್ರೀಮತಿ ಸುನೀತಾ ಡಾ.ಅಂದಾನಯ್ಯ ಶಾಡ್ಲಗೇರಿ ಹಿರೇಮಠ ಮಾಡಿದರು.

ಬೆಳಿಗ್ಗೆ ಲಿಂ. ಶ್ರೀ ವಿರೂಪಾಕ್ಷ ಶಿವಾಚಾರ್ಯರ ಪಲ್ಲಕ್ಕಿ ಉತ್ಸವ ಗ್ರಾಮದಲ್ಲಿ ಜರುಗಿತು. ಕುಂಭ ಹೊತ್ತ ಮಹಿಳೆಯರು ಆರತಿ ಹಿಡಿದ ಸುಮಂಗಲೆಯರು ಅನೇಕ ವಾದ್ಯ ವೈಭವಗಳೊಂದಿಗೆ ಮೆರವಣಿಗೆ ಜರುಗಿತು. ಸಮಾರಂಭದ ನಂತರ ಅನ್ನದಾಸೋಹ ಜರುಗಿತು.

# ಗೋ ಹಂತಕರನ್ನು ಹದ್ದುಬಸ್ತಿನಲ್ಲಿಡದಿದ್ದರೆ ಹಿಂದೂ ಸಮಾಜ ಜಾಗೃತವಾಗುತ್ತದೆ : ಸಿ.ಟಿ.ರವಿ

**ಚಿಕ್ಕಮಗಳೂರು:** ಸಂಪೂರ್ಣ ಗೋಹತ್ಯೆ ಕಾಯ್ದೆ ಜಾರಿಯಲ್ಲಿದೆ. ಗೋಹಂತಕರನ್ನು ಪೊಲೀಸರು ಹದ್ದುಬಸ್ತಿನಲ್ಲಿಡುವ ಕೆಲಸವನ್ನು ಮಾಡದೇ ಇದ್ದರೆ ನಾವೇ ಆ ಕೆಲಸವನ್ನು ಮಾಡುತ್ತೇವೆ. ಹಿಂದೂ ಸಮಾಜಕ್ಕೆ ಆ ತಾಕತ್ತು ಇದೆ ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಹೇಳಿದರು.

ಇತ್ತೀಚೆಗೆ ನಗರದಲ್ಲಿ ಗೋವಿನ ಬಾಲಕ್ಕೆ ಬೆಂಕಿಹಚ್ಚಿ ವಿಕೃತಿ ಮೆರೆದ ಘಟನೆ ಸೇರಿದಂತೆ ಗೋಹತ್ಯೆ, ಲವ್‌ಜಿಹಾದ್ ನಂತಹ ಪ್ರಕರಣಗಳನ್ನು ಖಂಡಿಸಿ ಹಿಂದೂ ಹಿತರಕ್ಷಣಾ ಸಮಿತಿ ವತಿಯಿಂದ ನಗರದ ಆಜಾದ್ ಪಾರ್ಕ್ ಸರ್ಕಲ್‌ನಲ್ಲಿ ಹಮ್ಮಿಕೊಳ್ಳಲಾಗಿದ್ದ ಪ್ರತಿಭಟನಾ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು.

ಪೊಲೀಸ್ ಇಲಾಖೆ ತನ್ನ ಕರ್ತವ್ಯವನ್ನು ನಿಷ್ಠೆಯಿಂದ ನಿಭಾಯಿಸಿದರೆ ಗೋರಕ್ಷಣೆಯಂತಹ ಕಾರ್ಯಕ್ಕೆ ಬಜರಂಗದಳದ ಕಾರ್ಯಕರ್ತರು ಮುಂದಾಗುವುದಿಲ್ಲ. ಗೋಹಂತಕರಿಂದ ಹಫ್ತಾ ವಸೂಲಿ ಮಾಡಿ ಸುಮ್ಮನಾದರೆ ನಿಮ್ಮ ಹೆಂಡತಿ, ಮಕ್ಕಳು ಸುಖವಾಗಿರಲು ಸಾಧ್ಯವಿಲ್ಲ ಎಂದರು.

ಉಪ್ಪಳ್ಳಿ ಬಳಿ ಅಕ್ರಮವಾದ ಮಸೀದಿ ನಿರ್ಮಾಣವಾಗುತ್ತಿದೆ. ಇಂದಿಗೂ ನ್ಯಾಯಬದ್ಧವಾದ ಅನುಮತಿ ಪಡೆದಿಲ್ಲ. ಜಿಲ್ಲಾಡಳಿತ ನಿಲ್ಲಿಸದೇ ಇದ್ದಲ್ಲಿ ನಾವೇ ನಿಲ್ಲಿಸಬೇಕಾಗಬಹುದು. ಜಿಲ್ಲಾಡಳಿತ ಕಾನೂನು ಪಾಲಿಸುವಂತೆ ನೋಡಿಕೊಂಡರೆ ಕೋಮು ಗಲಭೆ ಆಗುವುದಿಲ್ಲ ಎಂದು ಹೇಳಿದರು.

ಅಂಬೇಡ್ಕರ್ ಅವರು ಕೊಟ್ಟ ಸಂವಿಧಾನ ಗೋಹತ್ಯೆಯನ್ನು ನಿಷೇಧ ಮಾಡಿದ್ದರೂ, ಅಕ್ರಮ ಕಸಾಯಿಖಾನೆಗಳು ನಡೆಯುತ್ತಿವೆ ಎಂದರೆ ಅದು ಸಂವಿಧಾನ ವಿರೋಧಿ ಕೃತ್ಯ. ಅದನ್ನು ಮಾಡುತ್ತಿರುವವರಿಗೆ ಬುದ್ಧಿ ಕಲಿಸಬೇಕು ಎಂದು ಒತ್ತಾಯಿಸುವುದು ಅಪರಾಧವೇ ಎಂದು ಪ್ರಶ್ನಿಸಿದರು.

ನನ್ನದು ಬಸವ ಧರ್ಮ, ಅಂಬೇಡ್ಕರ್ ವಾದ, ಗಾಂಧಿ ಮಾರ್ಗ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿಕೊಂಡಿದ್ದಾರೆ. ಆದ-ರೆ, ಬಸವಣ್ಣನವರು ಕಳಬೇಡ, ಕೊಲಬೇಡ ಎಂದು ಹೇಳಿದ್ದಾರೆ. ಹಾಗಿದ್ದರೆ ಗೋಹತ್ಯೆಯನ್ನು ಮುಖ್ಯಮಂತ್ರಿ ಹೇಗೆ ಸಮರ್ಥನೆ ಮಾಡುತ್ತಾರೆ. ದಯೆ ಇರಬೇಕು ಸಕಲ ಜೀವಾತ್ಮರಿಗೂ ಎಂದು ಬಸವಣ್ಣ ಹೇಳಿದ್ದಾರೆ. ಆದರೆ ಬೆಂಗಳೂರಿನಲ್ಲಿ ಗೋವಿನ ಕೆಚ್ಚಲು ಕತ್ತರಿಸಿ





ರಕ್ತ ಹರಿಸಿದರು. ಆದರೆ, ಬಸವ ಧರ್ಮ ಪಾಲಿಸುವ ಮುಖ್ಯಮಂತ್ರಿಗಳಿಗೆ ಕಣ್ಣೀರು ಬರಲಿಲ್ಲ ಎಂದರು.

ಭಟ್ಕಳದಲ್ಲಿ ಗಬ್ಬದ ಹಸುವಿಗೆ ಚೂರಿ ಹಾಕಿ ಭ್ರೂಣವನ್ನು ಹೊರತೆಗೆದರು ಮುಖ್ಯಮಂತ್ರಿಗಳಿಗೆ ಸಂಕಟವಾಗಲಿಲ್ಲ. ಜಿಲ್ಲೆಯ ಕಡೂರಿನ ಕಲ್ಕೆರೆ, ಚೌಳಹಿರಿಯೂರು, ಕಳಸ, ಕೊಟ್ಟಿಗೆಹಾರ, ಶೃಂಗೇರಿ, ಚಿಕ್ಕಮಗಳೂರು, ಕಳಸಗಳಲ್ಲಿ ಅಕ್ರಮ ಗೋಸಾಗಾಣೆ, ಗೋಹತ್ಯೆ ನಿರಂತರವಾಗಿ ನಡೆಯುತ್ತಿದೆ. ಇದನ್ನೆಲ್ಲ ಮಾಡಿದ್ದು ಮುಖ್ಯಮಂತ್ರಿಗಳು. ಶಾಂತಿಧೂತರು ಎಂದು ಕರೆದ ಜನರೇ ಆಗಿದ್ದಾರೆ ಎಂದರು.

ಮುಖ್ಯಮಂತ್ರಿಗಳು ಹೇಳಿದ ಶಾಂತಿಧೂತ-ರೇ ಗೋಹಂತಕರು, ಗೋವಿನ ಕೆಚ್ಚಲು ಕತ್ತರಿಸಿದವರು. ದಯೆ ಇಲ್ಲದವರನ್ನು ನೋಡಿಕೊಂಡು ಸುಮ್ಮನಿದ್ದು, ಅದನ್ನು ತಡೆದವರ ಮೇಲೆ ಕೇಸು ದಾಖಲಿಸಿದ್ದೀರಿ. ಇನ್ನೆರಡುವರೆ ವರ್ಷ ತಾಳಿಕೊಳ್ಳಿ ನೀವು ಹಾಕಿರುವ ಎಲ್ಲಾ ಕೇಸುಗಳನ್ನು ವಾಪಾಸ್ ತೆಗೆಸುತ್ತೇವೆ ಎಂದರು.

ಮುಂದೆ ನಮ್ಮ ಸರ್ಕಾರ ಬಂದ ನಂತರ ಜಿಲ್ಲೆಗೊಂದು ಜೆಸಿಬಿ ಪಡೆ ತಯಾರು ಮಾಡುತ್ತೇವೆ. ಅಲ್ಲೇ ಡ್ರಾ, ಅಲ್ಲೇ ಬಹುಮಾನ ಎನ್ನುವಂತೆ ಕ್ರಮ ತೆಗೆದುಕೊಳ್ಳುತ್ತೇವೆ. ಕಲ್ಲು ಹೊಡೆದರೆ ಜೆಸಿಬಿ ಬರುತ್ತದೆ. ಇವರಾರು ಶಾಶ್ವತವಾಗಿ ಇರುವುದಿಲ್ಲ ಎಂದರು.

ಜಿಲ್ಲಾಡಳಿತ ಅಕ್ರಮ ಕಸಾಯಿ ಕೇಂದ್ರಗಳನ್ನು ಬಂದ್ ಮಾಡಿಸಬೇಕು. ಇಲ್ಲವಾದಲ್ಲಿ ನೆಲದ ಕಾನೂನು, ನಮ್ಮ ಧರ್ಮ, ಸಂಸ್ಕೃತಿಯನ್ನು ಉಳಿಸಿಕೊಳ್ಳಲು ಹಿಂದೂ ಸಮಾಜ ಹಿಂದುಳಿಯುವುದಿಲ್ಲ. ನಮಗೆ ಖಾಜಿ ನ್ಯಾಯ ಬೇಡ, ಅಂಬೇಡ್ಕರ್ ಕೊಟ್ಟ ಸಂವಿಧಾನದ ಪ್ರಕಾರ ನ್ಯಾಯ ಕೊಡಿ ಎಂದು ಒತ್ತಾಯಿಸಿದರು.

ವಿಧಾನ ಪರಿಷತ್ ಉಪ ಸಭಾಪತಿ ಎಂ.ಕೆ.ಪ್ರಾಣೇಶ್ ಮಾತನಾಡಿ, ತಾಯಿಯ ಸಮಾನವಾದ ಗೋಮಾತೆಯ ಮೇಲೆ ದಾಳಿಗಳು ನಡೆದಾಗ ಯಾವ ತ್ಯಾಗಕ್ಕಾದರೂ ಸಿದ್ಧರಿರಬೇಕು. ನಾವೂ ಸಹ ರಾಜೀನಾಮೆ ಕೊಟ್ಟು ಹೊರಬರಲು ಸಿದ್ಧರಿದ್ದೇವೆ ಎಂದರು.

ರಾಷ್ಟ್ರೀಯ ಸ್ವಯಂ ಸೇವಕ ಸಂಘವು ನಮಗೆ ದೇಶಭಕ್ತಿಯನ್ನೇ ಹೇಳಿಕೊಟ್ಟಿದೆ. ನಮಗೆ ಹಿಂದುತ್ವ, ದೇಶ ಮೊದಲು ಮಿಕ್ಕೆಲ್ಲವೂ ಗೌಣ ಎಂದು ಹೇಳಿದರು.

ಹಿಂದೂಗಳು ಸಂಘಟಿತರಾಗಿ ಪ್ರತಿ ಮನೆಯಿಂದ ಹೋರಾಟಗಳಲ್ಲಿ ಪಾಲ್ಗೊಳ್ಳಬೇಕು. ಇಲ್ಲವಾದಲ್ಲಿ ಹಿಂದೂಗಳೇ ಅಲ್ಪಸಂಖ್ಯಾತರಾಗಿ ಬೀದಿಗೆ ಬರಬೇಕಾಗುತ್ತದೆ ಎಂದು ಎಚ್ಚರಿಸಿದರು.

ಸಂಸದ ಕೋಟಾ ಶ್ರೀನಿವಾಸ ಪೂಜಾರಿ ಮಾತನಾಡಿ, ಹಿಂದೆ ಔರಂಗಜೇಬನ ಆಡಳಿತದಲ್ಲಿ ತುಘಲಕ್ ದರ್ಬಾರ್ ಇತ್ತು ತಲೆಗಂದಾಯ ಕೊಟ್ಟರೆ ಮಾತ್ರ ಹಿಂದೂಗಳು ಬದುಕಲು ಅವಕಾಶವಿತ್ತು. ಅದೇ ರೀತಿ ಆಡಳಿತವನ್ನು ರಾಜ್ಯದಲ್ಲೂ ಮುಖ್ಯಮಂತ್ರಿಗಳು ತರಲು ಹೊರಟಿದ್ದಾರೆ ಎಂದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**